ಬೆಂಗಳೂರು ಸಂಪುಟ: 16 ಸಂಚಿಕೆ: 48 ಪುಟ: 06 ಶನಿವಾರ 11-01-2025

Mail:mussanje2010@gmail.com www.mussanjenews.com


# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu

Honourary Editor: Venkatesh



ಅರಿಶಿಣ ಶಾಸ್ತ್ರವೋ, ಮೊದಲ ರಾತ್ರಿಯೋ?

ಹೊಸ ದಾಖಲೆ ಬರೆದ ಸ್ಮೃತಿ

ಸ್ಟಾರ್ ಕ್ರಿಕೆಟಿಗ ದಿಢೀರ್ ನಿವೃತ್ತಿ! ಪುಟ 6

# ಯಾರ ಬೆಂಬಲವೂ ಬೇಡ

## ನಮ್ಮ ಪ್ರಯತ್ನ ನಾವು ಮಾಡೋಣ ಫಲಾಫಲ ದೇವರಿಗೆ ಬಿಡೋಣ: ಡಿ.ಕೆ. ಶಿವಕುಮಾರ್

**ಶೃಂಗೇರಿ:** ನನಗೆ ಯಾರ ಬೆಂಬಲವೂ ಬೇಡ. ಪಕ್ಷ ಏನು ಹೇಳುತ್ತದೆಯೋ ಅದನ್ನು ಮಾಡುತ್ತೇನೆ. ಅವರ ಸೂಚನೆಯಂತೆ ನಾನು ನನಗೆ ವಹಿಸಿದ ಕೆಲಸಗಳನ್ನು ನಿರ್ವಹಿಸುತ್ತೇನೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಶೃಂಗೇರಿಯಲ್ಲಿ ನಡೆಯುತ್ತಿರುವ ಸುವರ್ಣಮಹೋತ್ಸವ ಪಾಲ್ಗೊಳ್ಳಲು ತೆರಳಿರುವ ಅವರು, "ಕರ್ಮಣ್ಯೇ ವಾಧಿಕಾರಸ್ತೇ । ಮಾ ಫಲೇಷು ಕದಾಚನ ಎಂಬ ಶ್ಲೋಕದಂತೆ ನಮ್ಮ ಪ್ರಯತ್ನ ನಾವು ಮಾಡೋಣ ಫಲಾಫಲ ದೇವರಿಗೆ ಬಿಡೋಣ ಎಂದು ಮಾಧ್ಯಮಗಳ ಪ್ರಶ್ನೆಗಳಿಗೆ ಶನಿವಾರ ಉತ್ತರಿಸಿದರು.

ಪಕ್ಷದಲ್ಲಿನ ಕಾರ್ಯಕರ್ತರು ಸದಾ ನಮ್ಮ ಬೆಂಬಲಕ್ಕೆ ಇರುತ್ತಾರೆ. ನನಗೆ ಅವರ ಬೆಂಬಲ ಬೇಕು, ಇವರ ಬೆಂಬಲ ಬೇಕು ಎನ್ನುವ ಅನಿವಾರ್ಯತೆ ಇಲ್ಲ. ನಾವೆಲ್ಲಾ ಪಕ್ಷದ ಕಾಯಕರ್ತರು ಪಕ್ಷ, ಪಕ್ಷದ ವರಿಷ್ಠರು ಏನು ಹೇಳುತ್ತಾರೋ ಅದನ್ನು ನಾನು ಚಾಚು ತಪ್ಪದೇ ನಿಭಾಯಿಸುತ್ತೇನೆ ಎಂದು ಅವರು ಪುನರುಚ್ಛರಿಸಿದರು.

ಯಾರನ್ನೂ ಒತ್ತಾಯ ಪಡಿಸುವ ಅವಶ್ಯಕತೆಯಿಲ್ಲ. ನನ್ನ ಕಾಯಕವನ್ನು ನಾನು ಮಾಡುತ್ತೇನೆ ಅದಕ್ಕೆ ಪ್ರತಿಫಲ ಆ ದೇವರು ನೀಡುತ್ತಾನೆ ಎಂದು ಅವರು ಹೇಳಿದರು.

"ನನ್ನ ಪರವಾಗಿ ಯಾರೂ ಯಾರನ್ನೂ ಒತ್ತಾಯ ಮಾಡುವುದು ಬೇಡ. ನನಗೆ ಯಾರ ಬೆಂಬಲವೂ ಬೇಡ. ಈ ವಿಚಾರದಲ್ಲಿ ಯಾವುದೇ ಶಾಸಕರು ನನಗೆ ಬೆಂಬಲ ನೀಡುವುದು ಬೇಡ. ನಾನುಂಟು ಕಾಂಗ್ರೆಸ್ ಪಕ್ಷವುಂಟು. ಪಕ್ಷದ ನಾಯಕರು ಹೇಳಿದಂತೆ ನಾನು ಕೆಲಸ ಮಾಡಿಕೊಂಡು ಹೋಗುತ್ತೇನೆ. ನನ್ನ ಪರವಾಗಿ ಶಾಸಕರು, ಕಾರ್ಯಕರ್ತರು ಕೂಗುವುದು ಬೇಡ. ನಾನು ನನ್ನ ಕರ್ತವ್ಯ ಮಾಡುತ್ತೇನೆ" ಎಂದು ಸ್ಪಷ್ಟಪಡಿಸಿದರು.

"ನಾನು ಧರ್ಮದ ಮೇಲೆ ನಂಬಿಕೆ ಇಟ್ಟುಕೊಂಡಿರುವವನು, ನಿತ್ಯ ಪೂಜೆ ಮಾಡುವವನು. ನನ್ನ ಒಳಿತು, ರಾಜ್ಯದ ಒಳಿತು, ನನ್ನ ನಂಬಿದವರ ಹಾಗೂ ಸಮಾಜದ ಒಳಿತಿಗಾಗಿ ನಾನು ಪ್ರಾರ್ಥಿಸುತ್ತೇನೆ. ಟೆಂಪಲ್ ರನ್ ಎಂದು ವ್ಯಾಖ್ಯಾನ ಮಾಡುವುದಾದರೆ ನೀವೆಲ್ಲ ಸೇರಿ ದೇವಾಲಯಗಳನ್ನು ಮುಚ್ಚಿಬಿಡಿ. ಸರ್ಕಾರದಲ್ಲಿ ಮುಜರಾಯಿ ಇಲಾಖೆ, ವಕ್ಫ್



ಮಂಡಳಿ ಇರುವುದು ಏಕೆ? ಎಂದು ಪ್ರಶ್ನಿಸಿದರು.

ಅವರವರ ವಿಚಾರ ಅವರವರ ನಂಬಿಕೆ. ಧರ್ಮ ಯಾವುದಾದರೂ ತತ್ವವೊಂದೇ, ಕರ್ಮ ಹಲವಾದರೂ ನಿಷ್ಠೆಯೊಂದೇ, ಪೂಜೆ ಯಾವುದಾದರೂ ಭಕ್ತಿ ಒಂದೇ, ನಾಮ ಹಲವಾದರೂ ದೈವವೊಂದೇ. ದೇವನೊಬ್ಬ ನಾಮ ಹಲವು ಎಂದು ನಾನು ಪದೇ ಪದೇ ಹೇಳುತ್ತೇನೆ" ಎಂದು ತಿಳಿಸಿದರು. ನೀವು ಶೃಂಗೇರಿಗೆ ಭೇಟಿ ನೀಡಿದಾಗೆಲ್ಲಾ ನಿಮ್ಮ ರಾಜಕೀಯ ಜೀವನದಲ್ಲಿ ಹಲವು ತಿರುವುಗಳು ಪಡೆದಿವೆ ಎಂದು ಸುದ್ದಿಗಾರರು ಪ್ರಶ್ನೆಗೆ ಉತ್ತರಿಸಿದ ಅವರು, "ಯಾರೂ ತಲೆಕೆಡಿಸಿಕೊಳ್ಳುವುದು ಬೇಡ. ನನಗೆ ಯಾವುದೇ ತಿರುವಿನ ಅಗತ್ಯವಿಲ್ಲ. ಜನ ಆಶೀರ್ವಾದ ಪುಟ 2

## ಕೇಂದ್ರದಿಂದ ರಾಜ್ಯಕ್ಕೆ ಅನ್ಯಾಯ

**ಬೆಂಗಳೂರು:** ತೆರಿಗೆ ಪಾಲು ಹಂಚಿಕೆ ವಿಚಾರದಲ್ಲಿ ಕರ್ನಾಟಕಕ್ಕೆ ಕೇಂದ್ರ ಸರ್ಕಾರ ಅನ್ಯಾಯ ಮಾಡಿದೆ. ನಮ್ಮ ಹಕ್ಕಿಗೆ ನಮ್ಮ ತೆರಿಗೆಗೆ ಹೋರಾಟ ಮಾಡಬೇಕು ಎಂದು ಡಿಸಿಎಂ ಡಿಕೆ ಶಿವಕುಮಾರ್ ಆಕ್ರೋಶ ವ್ಯಕ್ತಪಡಿಸಿದರು.

ಕೇಂದ್ರ ಸರ್ಕಾರ ರಾಜ್ಯಗಳಿಗೆ ತೆರಿಗೆ ಪಾಲು ಹಂಚಿಕೆ ಮಾಡಿತ್ತು. ಕರ್ನಾಟಕಕ್ಕೆ 6310.40 ಕೋಟಿ ಬಿಡುಗಡೆ ಮಾಡಿತ್ತು. ಈ ಕುರಿತು ಮಾತನಾಡಿರುವ ಡಿಸಿಎಂ ಡಿಕೆ ಶಿವಕುಮಾರ್, ಉತ್ತರ ಪ್ರದೇಶ ದೊಡ್ಡ ರಾಜ್ಯ ಇದು ಬೇರೆ ವಿಚಾರ. ಕರ್ನಾಟಕಕ್ಕೆ ಕೇಂದ್ರದಿಂದ ಅನ್ಯಾಯವಾಗಿದೆ. ಸರಿಯಾದ ಅನುಪಾತದಲ್ಲಿ ತೆರಿಗೆ ಪಾಲು ಹಂಚಿಕೆಯಾಗಿಲ್ಲ. ನಮಗೆ ಅನ್ಯಾಯ ಆಗಿದೆ ನಮ್ಮ ಹಕ್ಕಿಗೆ ನಮ್ಮ ತೆರಿಗೆಗೆ ಹೋರಾಟ ಮಾಡಬೇಕು. ಈ ಬಗ್ಗೆ ಪರಿಶೀಲನೆ ಮಾಡುತ್ತೇವೆ. ಮುಖ್ಯಮಂತ್ರಿಗಳು ದೊಡ್ಡ ಅಧ್ಯಯನ ಮಾಡುತ್ತಿದ್ದಾರೆ ಎಂದರು.

ಬಿಜೆಪಿಯವರು ಇಷ್ಟೊಂದು ಸಂಸದರಿದ್ದರೂ ಮೌನ ವಹಿಸಿದ್ದಾರೆ ಎಂದು ಡಿಕೆ ಶಿವಕುಮಾರ್ ಕಿಡಿ ಕಾರಿದರು.




**ಬೆಂಗಳೂರಿನ ತಾಜ್‌ವೆಸ್ಟ್ ಹೋಟೆಲ್‌ನಲ್ಲಿ ನಡೆದ ರಾಜ್ಯ ಲೋಕಸೇವಾ ಆಯೋಗಗಳ ಅಧ್ಯಕ್ಷರ 25ನೇ ರಾಷ್ಟ್ರೀಯ ಸಮ್ಮೇಳನದಲ್ಲಿ ಉಪರಾಷ್ಟ್ರಪತಿ ಜಗದೀಪ್‌ಧನಕರ್, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಆಯೋಗದ ಅಧ್ಯಕ್ಷರು, ಅಧಿಕಾರಿಗಳು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.**

## ಕಾಂಗ್ರೆಸ್ಸಿಗರ ಮಿಡ್‌ನೈಟ್ ಮೀಟಿಂಗ್ ನಡುವೆ ರಾಜ್ಯ ಬಡವಾಗುತ್ತಿದೆ: ಆಕ್ರೋಶ

**ಬೆಂಗಳೂರು:** ಕಾಂಗ್ರೆಸ್ಸಿಗರ ಮಿಡ್ ನೈಟ್ ಮೀಟಿಂಗ್ ನಡುವೆ ಕರ್ನಾಟಕ ಬಡವಾಗುತ್ತಿದೆ, ಜನರು ಪರಿತಪಿಸುವಂತಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಕ್ರೋಶ ಹೊರಹಾಕಿದ್ದಾರೆ.

ನಗರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಇಂದು ಬಿಜೆಪಿ ಕಾನೂನು ಪ್ರಕೋಷ್ಠದ ವಿಶೇಷ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಿದ್ದರಾಮಯ್ಯನವರು ಹೊರಗಡೆಯಿಂದ ಬಂದವರು ಎಂದು ಆಡಳಿತ ಪಕ್ಷದಲ್ಲಿ ಕೆಲವರಿಗೆ ಅನಿಸಿದೆ. ಒಂದು ಬಾರಿ 5 ವರ್ಷ ಕಾಲ ಮುಖ್ಯಮಂತ್ರಿಯಾಗಿದ್ದಾರೆ.



ಎರಡನೇ ಬಾರಿಗೆ 2 ವರ್ಷ ಸಿಎಂ ಆಗಿದ್ದು, ಅವರೇ ಅಧಿಕಾರ ಬಿಟ್ಟುಕೊಡಬೇಕೆಂಬ ಚರ್ಚೆ ಈಗ ಕಾಂಗ್ರೆಸ್ಸಿನಲ್ಲಿ ಆರಂಭವಾಗಿದೆ ಎಂದು ವಿವರಿಸಿದರು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಈಚೆಗೆ ಬೆಳಗಾವಿಯಲ್ಲಿ ನಡೆದ ಚಳಿಗಾಲದ ಅಧಿವೇಶನದಲ್ಲಿ ಬಹಳ ಮುಕ್ತವಾಗಿ ಮಾತನಾಡಿದ್ದರು. 25 ವರ್ಷಗಳ ಹಿಂದೆ ಅಂದಿನ ಮುಖ್ಯಮಂತ್ರಿಗಳು ಡಿ.ಕೆ.ಶಿವಕುಮಾರ್ ಅವರನ್ನು ಮಂತ್ರಿಮಂಡಲದಲ್ಲಿ ತೆಗೆದುಕೊಂಡಿರಲಿಲ್ಲ. ಆಗ ಅವರ ಗುರುಗಳು 'ಅಧಿಕಾರ ಸಿಗಲಿಲ್ಲ ಅಂದ್ರೆ ಅಧಿಕಾರವನ್ನು ಒದ್ದು ಕಿತ್ಕೋಬೇಕು' ಎಂದಿದ್ದರಂತೆ; ಆಗ ಡಿ.ಕೆ.ಶಿವಕುಮಾರ್ ಅವರು ಅಧಿಕಾರವನ್ನು ಪುಟ 2

## ಶಸ್ತ್ರಾಸ್ತ್ರ ಪತ್ತೆ

**ಚಿಕ್ಕಮಗಳೂರು:** ರಾಜ್ಯದಲ್ಲಿ ಇತ್ತೀಚೆಗೆ ಶರಣಾದ ನಕ್ಸಲರು ರಹಸ್ಯ ಸ್ಥಳದಲ್ಲಿ ಅಡಗಿಸಿಟ್ಟಿದ್ದರು ಎನ್ನಲಾದ ಶಸ್ತ್ರಾಸ್ತ್ರಗಳು ಪತ್ತೆಯಾಗಿವೆ. ಚಿಕ್ಕಮಗಳೂರು ಜಿಲ್ಲೆ, ಕೊಪ್ಪ ತಾಲೂಕಿನ ಜಯಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿರುವ ಕಿತ್ತಲೆಗಂಡಿ ಕಾಡಿನಲ್ಲಿ ಪತ್ತೆಯಾಗಿದೆ. ಮೇಲ್ನೋಟಕ್ಕೆ ನಕ್ಸಲರದ್ದೇ ಎಂದು ಹೇಳಲಾಗುತ್ತಿದ್ದರೂ, ಇನ್ನೂ ಖಚಿತವಾಗಿಲ್ಲ. ತನಿಖೆಯಿಂದ ಗೊತ್ತಾಗಬೇಕು ಎಂದು ಪೊಲೀಸರು ತಿಳಿಸಿದ್ದಾರೆ. 1 ಎಕೆ-47, 303 ಕೋವಿ 5, ಒಂದು ಪಿಸ್ತೂಲ್, 100ಕ್ಕೂ ಹೆಚ್ಚು ಗುಂಡುಗಳು ಮೇಗೂರು ಅರಣ್ಯ ವ್ಯಾಪ್ತಿಯ ಕಿತ್ತಲೆಗಂಡಿ ಅರಣ್ಯ ಪ್ರದೇಶದಲ್ಲಿ ಪತ್ತೆಯಾಗಿವೆ. ಶಸ್ತ್ರಾಸ್ತ್ರ ಕಾಯ್ದೆ ಅಡಿಯಲ್ಲಿ ಅಪರಿಚಿತರ ಆಯುಧಗಳು ಎಂದು ಜಯಪುರ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ. ಪುಟ 2

## ಜೈಲುಗಳಿಗೆ ಖಡಕ್ ಸೂಚನೆ

**ಬೆಂಗಳೂರು:** ಮೈಸೂರು ಕೇಂದ್ರ ಕಾರಾಗೃಹದಲ್ಲಿ ಕೇಕ್ ತಯಾರಿಕೆಗೆ ಬಳಸಲಾಗುವ ಸುಗಂಧದ್ರವ್ಯ (ಎಸೆನ್ಸ್) ಸೇವಿಸಿ ಮೂವರು ಸಜಾ ಕೈದಿಗಳು ಸಾವನ್ನಪ್ಪಿರುವ ಪ್ರಕರಣವನ್ನು ಕಾರಾಗೃಹ ಹಾಗೂ ಸುಧಾರಣಾ ಸೇವಾ ಇಲಾಖೆಯು ಗಂಭೀರವಾಗಿ ಪರಿಗಣಿಸಿದ್ದು, ಭವಿಷ್ಯದಲ್ಲಿ ಇಂತಹ ಘಟನೆ ಮರುಕಳಿಸದಿರಲು ರಾಜ್ಯದ ಎಲ್ಲಾ ಜೈಲುಗಳಿಗೆ ನಿರ್ದೇಶನ ನೀಡಿದೆ. ಬೆಂಗಳೂರು, ಶಿವಮೊಗ್ಗ, ಕಲಬುರಗಿ, ಬೆಳಗಾವಿ ಸೇರಿದಂತೆ ಇತರ ರಾಜ್ಯ ಹಾಗೂ ಜಿಲ್ಲಾ ಕಾರಾಗೃಹಗಳ ಅಧೀಕ್ಷಕರಿಗೆ ಮುಂಜಾಗ್ರತ ಕ್ರಮ ಕೈಗೊಳ್ಳುವಂತೆ ಇಲಾಖೆ ಡಿಜಿಪಿ ಮಾಲಿನಿ ಕೃಷ್ಣಮೂರ್ತಿ ಅವರು ನಿರ್ದೇಶನ ಪುಟ 2

## ಜೆಡಿಎಸ್ ಸಭೆಗೆ ಹಾಜರಾಗಲ್ಲ

ಮೈಸೂರು: ನಾಳೆ ಜೆಡಿಎಸ್ ರಾಜ್ಯಾಧ್ಯಕ್ಷರ ಆಯ್ಕೆ ಸಭೆ ನಡೆಯಲಿದೆ. ಆದರೆ ಸಭೆಯಲ್ಲಿ ನಾನು ಭಾಗಿಯಾಗುವುದಿಲ್ಲ ಎಂದು ಶಾಸಕ ಜಿಟಿ ದೇವೇಗೌಡ ಹೇಳಿದ್ದಾರೆ.

ಇಂದು ಮೈಸೂರಿನಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಶಾಸಕ ಜಿ.ಟಿ ದೇವೇಗೌಡ, ನಾನು ಕ್ಷೇತ್ರದ ಅಭಿವೃದ್ಧಿಗೆ ಓಡಾಟ ಮಾಡುತ್ತಿದ್ದೇನೆ. ಪಕ್ಷದ ಸಂಘಟನೆ ಹಾಗೂ ಸಭೆಗೆ ಹಾಜರಾಗಲು ಆಗುತ್ತಿಲ್ಲ. ಈ ಕಾರಣಕ್ಕೆ ಹೋಗತ್ತಿಲ್ಲ. ಇದನ್ನು ಹೊರತುಪಡಿಸಿದರೆ ನನಗೆ ಯಾವುದೇ ಬೇಸರ ಇಲ್ಲ. ದಿಶಾ ಸಭೆಗೆ ನಮ್ಮ ನಾಯಕರು ಬಂದ ವೇಳೆ ಹೋಗಬೇಕಿತ್ತು. ಆರೋಗ್ಯ ಸರಿ ಇಲ್ಲದ ಕಾರಣಗಳಿಂದ ಹೋಗಲು ಸಾಧ್ಯವಾಗಲಿಲ್ಲ ಎಂದು ಸ್ಪಷ್ಟನೆ ನೀಡಿದರು.

ನಿಖಿಲ್ ಕುಮಾರಸ್ವಾಮಿಗೆ ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನ ನೀಡುವ ವಿಚಾರ ಕುರಿತು ಪ್ರತಿಕ್ರಿಯಿಸಿದ ಶಾಸಕ ಜಿ.ಟಿ ದೇವೇಗೌಡ, ಪಕ್ಷದಲ್ಲಿ ದೇವೇಗೌಡರು



ಹಿರಿಯರಿದ್ದಾರೆ. ಕುಮಾರಸ್ವಾಮಿಯವರು ಎರಡು ಬಾರಿ ಸಿಎಂ ಆಗಿದ್ದವರು. ಎಲ್ಲರೂ ಸೇರಿ ಯಾರನ್ನು ಮಾಡುತ್ತಾರೆ ಅವರು ಅಧ್ಯಕ್ಷರಾಗುತ್ತಾರೆ. ನನ್ನ ಮಗ ಜಿಡಿ ಹರೀಶ್ ಗೌಡ ನಿಖಿಲ್ ಕುಮಾರಸ್ವಾಮಿ ಸ್ನೇಹಿತರು. ಹಾಗಾಗಿ ಅವರು ನಿಖಿಲ್ ರಾಜ್ಯಾಧ್ಯಕ್ಷರಾಗಲಿ ಅನ್ನೋ ಆಸೆ ವ್ಯಕ್ತಪಡಿಸಿದ್ದಾರೆ. ಇದರಲ್ಲಿ ತಪ್ಪೇನು ? ಎಂದರು.

**ಮುಡಾದಲ್ಲಿ ಅಕ್ರಮ ಪ್ರಭಾವ ಬೀರಿರುವ ಆರೋಪ:**

**ತನಿಖೆಯಾಗಲಿ:** ಇನ್ನು ಮುಡಾದಲ್ಲಿ ಅಕ್ರಮ ಪ್ರಭಾವ ಬೀರಿರುವ ಆರೋಪ ಕುರಿತು ಪ್ರತಿಕ್ರಿಯಿಸಿದ ಶಾಸಕ ಜಿ.ಟಿ ದೇವೇಗೌಡ, ತಪ್ಪು ಮಾಡಿದ್ದರೆ ತನಿಖೆಯಾಗಿ ಕ್ರಮ ಕೈಗೊಳ್ಳಲಿ ನನ್ನದೇನು ಅಭ್ಯಂತರ ಇಲ್ಲ. ಸ್ನೇಹಮಯಿ ಕೃಷ್ಣ ನಮ್ಮ ಹುಡುಗನೇ ಒಳ್ಳೆ ಕೆಲಸ ಮಾಡುತ್ತಿದ್ದಾನೆ. ರಾಜಕಾರಣಿಗಳು, ಅಧಿಕಾರಿಗಳು ತಪ್ಪು ಮಾಡಿದರೆ ಅವರಿಗೆ ಶಿಕ್ಷೆಯಾಗಲಿ ಅಂತಾ ಹೋರಾಟ ಮಾಡುತ್ತಿದ್ದಾನೆ. ಅವನಿಗೆ ಯಶಸ್ಸು ಸಿಗಲಿ ಎಂದು ಹಾರೈಸುತ್ತೇನೆ ಎಂದರು.

ನನ್ನ ಮಗಳು ಅಳಿಯ 50:50 ಸೈಟ್ ಪಡೆದವರಿಂದ ವೈಟ್ ಮನಿ ಕೊಟ್ಟು ಸೈಟ್ ಖರೀದಿಸಿದ್ದಾರೆ. ಈ ಬಗ್ಗೆ ನನಗೆ ಗೊತ್ತಿರಲಿಲ್ಲ ಇಂದು ಬೆಳಗ್ಗೆ ಮಗಳಿಗೆ ಕರೆ ಮಾಡಿ ವಿಚಾರ ತಿಳಿದುಕೊಂಡೆ. ಈ ಪ್ರಕರಣವನ್ನು ಲೋಕಾಯುಕ್ತರಿಗೆ ಕೊಟ್ಟಿದ್ದರೆ ಸಂತೋಷ. ತಪ್ಪು ಮಾಡಿದ್ದರೆ ತನಿಖೆ ಪ್ರಾರಂಭಿಸಲಿ. ಸೈಟ್ ಪಡೆದು ಮಾರಾಟ ಮಾಡಿದವರಿಗೆ ಮಾರಾಟ ಪುಟ 2

## ಮಾದಕ ವಸ್ತು ಮಾರಾಟ; ಫೈರಿಂಗ್!

**ಕಲಬುರಗಿ:** ಅಕ್ರಮವಾಗಿ ಡ್ರಗ್ಸ್ ಮಾರಾಟ ಮಾಡುತ್ತಿದ್ದ ಆರೋಪಿಯ ಮೇಲೆ ಬೆಳ್ಳಂಬೆಳಗ್ಗೆ ಪೊಲೀಸರು ಫೈರಿಂಗ್ ಮಾಡಿರುವ ಘಟನೆ ನಗರದ ಹೊರವಲಯದ ತಾವರಗೇರಾ ಬಳಿ ನಡೆದಿದೆ.

ಆರೋಪಿಯನ್ನು ಸುಪ್ರೀತ್ ನವಲೆ (32 ) ಎಂದು ಗುರುತಿಸಲಾಗಿದೆ.

ಆರೋಪಿ ಅಕ್ರಮವಾಗಿ ಕಾರಿನಲ್ಲಿ ಡ್ರಗ್ಸ್‌ನ್ನು ಮಾರಾಟ ಮಾಡುತ್ತಿದ್ದ ಎಂಬ ಖಚಿತ ಮಾಹಿತಿ ಮೇರೆಗೆ ಖಾಕಿ ಪಡೆ ದಾಳಿ ಮಾಡಿದ್ದು, ಕಾರು ನಿಲ್ಲಿಸಿ ತಪಾಸಣೆ ಮಾಡುವಾಗ ಪೋಲಿಸರ ಮೇಲೆ ಚಾಕುವಿನಿಂದ ಆರೋಪಿ ದಾಳಿ ಮಾಡಿದ್ದಾನೆ. ಹೆಡ್ ಕಾನ್‌ಸ್ಟೇಬಲ್ ಗುರುಮೂರ್ತಿಯ ಮೇಲೆ ಆರೋಪಿ ಚಾಕುವಿನಿಂದ ಹಲ್ಲೆ ಮಾಡಿದ್ದು, ಈ ವೇಳೆ ಚೌಕ್ ಪೋಲಿಸ್ ಠಾಣೆಯ ಪಿಐ ರಾಘವೇಂದ್ರ ಅವರು ಆರೋಪಿ ಮೇಲೆ ಫೈರಿಂಗ್ ನಡೆಸಿದ್ದಾರೆ.ಫೈರಿಂಗ್ ಮಾಡಿದ ಪರಿಣಾಮ ಆರೋಪಿ ಗಾಯಗೊಂಡಿದ್ದು, ಜಿಮ್ಸ್ ಆಸ್ಪತ್ರೆಯ ಟ್ರಾಮಾ ಕೇರ್ ಸೆಂಟರ್‌ಗೆ ದಾಖಲು ಮಾಡಲಾಗಿದೆ. ಪುಟ 2

## ಅರ್ಜಿ ಸಲ್ಲಿಸಿದವರು ಮೃತಪಟ್ಟರೂ ಕುಟುಂಬಸ್ಥರಿಗೆ ಭೂ ಮಂಜೂರುಗೊಳಿಸಬೇಕು

**ಬೆಂಗಳೂರು:** ಬಗರ್ ಹುಕುಂ ಯೋಜನೆಯ ಅಡಿಯಲ್ಲಿ ಅರ್ಜಿ ಸಲ್ಲಿಸಿದ ಅರ್ಹ ಫಲಾನುಭವಿಗಳು ದುರಾದೃಷ್ಟವಶಾತ್ ಮೃತಪಟ್ಟರೆ ಅವರ ಕುಟುಂಬಸ್ಥರಿಗೆ ಕಾನೂನು ಪ್ರಕಾರ ಜಮೀನು ಮಂಜೂರು ಮಾಡಿ ಡಿಜಿಟಲ್ ಸಾಗುವಳಿ ಚೀಟಿ ನೀಡಬೇಕು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ರಾಜ್ಯದ ಎಲ್ಲಾ ತಹಶೀಲ್ದಾರ್ ಹಾಗೂ ಎಡಿಎಲ್ ಆರ್ ಗಳಿಗೆ ಸೂಚಿಸಿದರು.

ವಿಕಾಸಸೌಧದಿಂದ ರಾಜ್ಯದ ಎಲ್ಲಾ ತಹಶೀಲ್ದಾರ್ ಹಾಗೂ ಎಡಿಎಲ್‌ಆರ್ (ಭೂ ದಾಖಲೆಯ ಸಹಾಯ ನಿರ್ದೇಶಕ) ಅಧಿಕಾರಿಗಳ ಜೊತೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಚಿವ ಕೃಷ್ಣಭೈರೇಗೌಡ, "ಅಕ್ರಮ-ಸಕ್ರಮ ಬಗರ್ ಹುಕುಂ ಯೋಜನೆಯ ಅಡಿಯಲ್ಲಿ ಅರ್ಜಿ ಸಲ್ಲಿಸಿದ ಫಲಾನುಭವಿಗಳು ಜಮೀನು ಪಡೆಯಲು ಅರ್ಹರು. ಅಂತವರಿಗೆ ಸಾಗುವಳಿ



ಚೀಟಿ ನೀಡುವುದು ಸರ್ಕಾರದ ಕರ್ತವ್ಯ. ಒಂದು ವೇಳೆ ಅರ್ಜಿ ಸಲ್ಲಿಸಿದವರು ಮೃತಪಟ್ಟಿದ್ದರೆ ಅವರಿಗೆ ಸಂಬಂಧಿಸಿದ ಅರ್ಹ ಕುಟುಂಬಸ್ಥರಿಗೆ ಜಮೀನು ಮಂಜೂರುಗೊಳಿಸಬೇಕು" ಎಂದು ತಿಳಿಸಿದರು.ಅನುಕೂಲಸ್ಥರಿಗೆ ಎಲ್ಲಾ ಮಾಹಿತಿ ಇರುತ್ತದೆ. ತಮಗೆ ಬೇಕಾದ ಸರ್ಕಾರಿ ಸವಲತ್ತನ್ನು ತಾವಾಗಿಯೇ ಪಡೆದುಕೊಳ್ಳುತ್ತಾರೆ. ಆದರೆ, ಬಡವರಿಗೆ, ಸಮಾಜದ ಕಟ್ಟಕಡೆಯ ಸ್ತರದಲ್ಲಿ ಬದುಕುತ್ತಿರುವವರಿಗೆ ಮಾಹಿತಿ ಕೊರತೆ ಇರುತ್ತದೆ. ಇಂತವರಿಗೆ ಅಧಿಕಾರಿಗಳೇ ಮಾಹಿತಿ ನೀಡಿ ಸರ್ಕಾರಿ ಸವಲತ್ತುಗಳನ್ನು ತಲುಪಿಸಬೇಕು. ಬಗರ್ ಹುಕುಂ ಅರ್ಜಿ ಅರ್ಹವಾಗಿದ್ದಲ್ಲಿ ಅಧಿಕಾರಿಗಳೇ ಜವಾಬ್ದಾರಿ ವಹಿಸಿಕೊಂಡು ಜಮೀನು ಮಂಜೂರು ಮಾಡಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ ಅಧಿಕಾರಿಗಳನ್ನು ಪ್ರಶಂಸಿಸಿದ ಅವರು, "ಜನವರಿ 15ರ ಒಳಗೆ 15,000 ಫಲಾನುಭವಿಗಳಿಗೆ ಬಗರ್ ಹುಕುಂ ಯೋಜನೆಯ ಅಡಿಯಲ್ಲಿ ಸಾಗುವಳಿ ಚೀಟಿ ನೀಡಬೇಕು ಎಂಬ ಗುರಿಯನ್ನು ಅಧಿಕಾರಿಗಳಿಗೆ ನೀಡಲಾಗಿತ್ತು. ಈ ಗುರಿಯನ್ನು ಸಾಧಿಸಲಾಗದಿದ್ದರೂ ಇದೇ ಅವಧಿಯಲ್ಲಿ ಕನಿಷ್ಟ 5600ಕ್ಕೂ ಅಧಿಕ ಅರ್ಹ ಫಲಾನುಭವಿಗಳನ್ನು ಗುರುತಿಸಿರುವುದು ಹಾಗೂ ಎಲ್ಲಾ ಜಿಲ್ಲೆ-ತಾಲೂಕುಗಳಲ್ಲೂ ಈ ಸಂಬಂಧ ಸಕಾರಾತ್ಮಕ ಬೆಳವಣಿಗೆ ಕಂಡುಬಂದಿರುವುದು ಉತ್ತಮ ಬೆಳವಣಿಗೆ. ಶೀಘ್ರವೇ ಶಾಸಕರ ನೇತೃತ್ವದಲ್ಲಿ ಸಭೆ ನಡೆಸಿ ಅರ್ಹರಿಗೆ ಜಮೀನು ಮಂಜೂರುಗೊಳಿಸಿ" ಎಂದು ಕಿವಿಮಾತು ಹೇಳಿದರು

**ನಮೂನೆ 1ರಿಂದ 5 ಪೋಡಿ ದುರಸ್ಥಿಗೆ ಒತ್ತಡ:** ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡಬೇಕು ಎಂಬ ಉದ್ದೇಶದಿಂದಲೇ ಕಳೆದ ಸೆಪ್ಟೆಂಬರ್ 2 ರಿಂದ ಅಭಿಯಾನ ಮಾದರಿಯಲ್ಲಿ 1-5 ನಮೂನೆ ಪೋಡಿ ದುರಸ್ಥಿ ಕೆಲಸಕ್ಕೆ ಚಾಲನೆ ನೀಡಲಾಯಿತು.

ಆದರೆ, ಹಲವಾರು ತಾಲೂಕುಗಳಲ್ಲಿ 1-5 ನಮೂನೆ ಪೋಡಿ ದುರಸ್ಥಿ ಮುಗಿದಿದ್ದರೂ ಸಂಬಂಧಪಟ್ಟ ಫೈಲುಗಳನ್ನು 6-10 ನಮೂನೆ ಸರ್ವೆ ಕೆಲಸಕ್ಕಾಗಿ ಭೂ ದಾಖಲೆಯ ಸಹಾಯ ನಿರ್ದೇಶಕರಿಗೆ ಕಳುಹಿಸಲು ತಹಶೀಲ್ದಾರರುಗಳು ಮೀನಾಮೇಷ ಎಣಿಸುತ್ತಿರುವುದು ಏಕೆ? ಎಂದು ಸಚಿವರು ಕಿಡಿಕಾರಿದರು.

ಬಳ್ಳಾರಿ ತಾಲೂಕಿನಲ್ಲಿ ಈವರೆಗೆ 397 ಹಾಗೂ ಬೆಳಗಾವಿಯಲ್ಲಿ 147 ಪ್ರಕರಣಗಳಲ್ಲಿ 1-5 ನಮೂನೆ ಪೋಡಿ ದುರಸ್ಥಿ ಕೆಲಸ ಮುಗಿದಿದೆ. ಪುಟ 2

ಮೊದಲ ಪುಟದಿಂದ

## ಭೂ ಮಂಜೂರುಗೊಳಿಸಬೇಕು

ಆದರೆ, ಯಾವ ಪ್ರಕರಣವನ್ನು ತಹಶೀಲ್ದಾರರು ಮುಂದಿನ ಹಂತದ ಕೆಲಸಕ್ಕಾಗಿ ಎಡಿಎಲ್ ಆರ್‌ಗಳಿಗೆ ಕಳುಹಿಸಿಲ್ಲ. ಇದೇ ರೀತಿ ಚಿಕ್ಕೋಡಿ, ಅಥಣಿ, ಔರಾದ್, ಬೀದರ್ ಚಿತ್ರದುರ್ಗ, ಚಾಮರಾಜನಗರ, ಗುಂಡ್ಲುಪೇಟೆ, ಹುಮ್ನಾಬಾದ್, ಚಳ್ಳಕೆರೆ ಹೊಳಲ್ಕೆರೆ ಸೇರಿದಂತೆ ಹಲವಾರು ತಾಲೂಕುಗಳಲ್ಲಿ ದುರಸ್ಥಿ ಕೆಲಸ ಮುಗಿದಿದ್ದರೂ ಎಡಿಎಲ್‌ಆರ್ ಗಳಿಗೆ ಕಳುಹಿಸಿರುವ ಫೈಲುಗಳ ಸಂಖ್ಯೆ ಶೂನ್ಯ. ಜನರೇನು ನಿಮ್ಮ ಬಳಿ ಬಂದು ಸಲಾಂ ಹೊಡೆಯಬೇಕು ಎಂದು ನೀವು ಹೀಗೆ ಕಾಯಿಸುತ್ತಿದ್ದೀರಾ?" ಎಂದು ತಹಶೀಲ್ದಾರರ ವಿರುದ್ಧ ಅವರು ಆಕ್ರೋಶ ಹೊರಹಾಕಿದರು.

ತಹಶೀಲ್ದಾರರು 1–5 ನಮೂನೆ ಪೋಡಿ ದುರಸ್ಥಿ ಕೆಲಸ ಮುಗಿಸಿ ಎಡಿಎಲ್ ಆರ್ ಗೆ ಕಳುಹಿಸಿದರೆ ಮಾತ್ರ ಸರ್ವೇ ಕೆಲಸ ಮುಗಿಸಿ ಜನರಿಗೆ ಸೂಕ್ತ ದಾಖಲೆ ನೀಡುವುದು ಸಾಧ್ಯ. ಜಮೀನು ಮಂಜೂರಾಗಿದ್ದರೂ ಪೋಡಿಯಾಗಿ ಆರ್.ಟಿ.ಸಿ ಆಗದೆ ಇರುವುದರಿಂದ ರೈತರ ಪರಿಸ್ಥಿತಿ ತ್ರಿಶಂಕುವಿನಂತೆ ಆಗಿದೆ. ತಾಲ್ಲೂಕು ಕಚೇರಿ, ಸರ್ವೆ ಕಛೇರಿಗಳಿಗೆ ಅಲೆದು ಅಲೆದು ಪ್ರಯೋಜನವಾಗದೆ ತೀವ್ರ ತೊಂದರೆಗೆ ತುತ್ತಾಗಿದ್ದಾರೆ. ಈ ಬಗ್ಗೆ ಬಹಳ ವರ್ಷಗಳಿಂದ ಚರ್ಚೆಗಳು, ಪ್ರಯತ್ನಗಳು ಆಗುತ್ತಿದ್ದರೂ ಸರಿಯಾದ ಪರಿಹಾರ ದೊರೆತಿರುವುದಿಲ್ಲ. ಈಗ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಪೋಡಿ ದುರಸ್ಥಿ ಅಭಿಯಾನಕ್ಕೆ ಚಾಲನೆ ನೀಡಿದರೂ ಸಹ ಅಧಿಕಾರಿಗಳು ಹೀಗೆ ಮಂದಗತಿಯಲ್ಲಿ ಕೆಲಸ ನಿರ್ವಹಿಸುತ್ತಿರುವುದನ್ನು ಸಹಿಸಿಕೊಳ್ಳುವುದು ಸಾಧ್ಯವಿಲ್ಲ ಎಂದು ಎಚ್ಚರಿಸಿದರು.

ತಹಶೀಲ್ದಾರ್ ನ್ಯಾಯಾಲಯಗಳಲ್ಲಿ ವರ್ಷಗಳಿಗಿಂತ ಹೆಚ್ಚುಕಾಲ ಬಾಕಿ ಉಳಿದಿರುವ ತಕರಾರು ಅರ್ಜಿಗಳನ್ನು ವಿಲೇವಾರಿ ಮಾಡಲು ಸಮಸ್ಯೆ ಏನು ಎಂದು ತಹಶೀಲ್ದಾರರ ವಿರುದ್ಧ ಸಚಿವರು ಕಿಡಿಕಾರಿದರು.

ಸಭೆಯಲ್ಲಿ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯಾ, ಕಂದಾಯ ಆಯುಕ್ತರಾದ ಸುನೀಲ್ ಕುಮಾರ್ ಹಾಗೂ ಸರ್ವೇ ಇಲಾಖೆ ಆಯುಕ್ತರಾದ ಮಂಜುನಾಥ್ ಹಾಗೂ ಇತರರು ಉಪಸ್ಥಿತರಿದ್ದರು.

## ಶಸ್ತ್ರಾಸ್ತ್ರ ಪತ್ತೆ

ಪೊಲೀಸರು 6 ಮಂದಿ ನಕ್ಸಲರನ್ನು ರಾಷ್ಟ್ರೀಯ ತನಿಖಾ ದಳದ ವಿಶೇಷ ನ್ಯಾಯಾಲಯಕ್ಕೆ ಹಾಜರು ಪಡಿಸುವ ಮೊದಲು ಶಸ್ತ್ರಾಸ್ತ್ರಗಳ ಬಗ್ಗೆ ಮಾಹಿತಿಯನ್ನು ಪಡೆದುಕೊಂಡಿದ್ದರು. ಕೆಲವರು ಅರಣ್ಯದ ರಹಸ್ಯ ಸ್ಥಳದಲ್ಲಿ ಅಡಗಿಸಿ ಇಟ್ಟಿರುವುದಾಗಿ ತಿಳಿದುಬಂದಿತ್ತು. ಈ ಸ್ಥಳಗಳ ಮಾಹಿತಿ ಪೊಲೀಸರಿಗೆ ಇರಲಿಲ್ಲ. ಹೀಗಾಗಿ ಪೊಲೀಸರು ಬಾಡಿ ವಾರಂಟ್ ಪಡೆದು ಅವರನ್ನು ಹೆಚ್ಚಿನ ವಿಚಾರಣೆಗೆ ಒಳಪಡಿಸಿದ ಬಳಿಕ ಶಸ್ತ್ರಾಸ್ತ್ರ ವಶಕ್ಕೆ ಪಡೆಯಲಿದ್ದಾರೆ ಎನ್ನಲಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಗೃಹ ಸಚಿವ ಜಿ.ಪರಮೇಶ್ವರ ಅವರ ಎದುರು ಬುಧವಾರ ರಾತ್ರಿ ಶರಣಾದ ನಕ್ಸಲರಾದ ಮುಂಡಗಾರು ಲತಾ, ಸುಂದರಿ ಕುತ್ಲೂರು, ವನಜಾಕ್ಷಿ ಬಾಳೆಹೊಳೆ, ಟಿ.ಎನ್. ಜಿಶಾ, ಕೆ.ವಸಂತ್, ಮಾರೆಪ್ಪ ಅರೋಲಿ ಅವರನ್ನು ಕೋರ್ಟ್ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. ಚಿಕ್ಕಮಗಳೂರು ಜಿಲ್ಲೆಯ ಕೊಪ್ಪ ಡಿವೈಎಸ್‌ಪಿ ಬಾಲಾಜಿ ಸಿಂಗ್ ಅವರ ನೇತೃತ್ವದಲ್ಲಿ ಗುರುವಾರ ನಗರದದಲ್ಲಿರುವ ಎನ್‌ಐಎ ವಿಶೇಷ ನ್ಯಾಯಾಲಯಕ್ಕೆ ಹಾಜರು ಪಡಿಸಲಾಯಿತು.

### ಜೈಲುಗಳಿಗೆ ಖಡಕ್ ಸೂಚನೆ

ನೀಡಿದ್ದಾರೆ.ನಿಗಾ ವಹಿಸುವಂತೆ ಸೂಚನೆ: ಕಾರಾಗೃಹದಲ್ಲಿನ ಬೇಕರಿ ವಿಭಾಗದಲ್ಲಿ ಕೇಕ್ ತಯಾರಿಸಲು ಎಸೆನ್ಸ್ ಬಳಕೆ ಮಾಡಲಾಗುತ್ತಿದೆ. ಕೇಕ್ ತಯಾರಿಸುವ ಕೈದಿಗಳ ಬಗ್ಗೆ ಎಚ್ಚರ ವಹಿಸಬೇಕು. ನಿಗದಿತ ಕೈದಿಗಳನ್ನ ಹೊರತುಪಡಿಸಿದರೆ ವಿವಿಧ ಜವಾಬ್ದಾರಿ ವಹಿಸಿಕೊಂಡಿರುವ ಹಾಗೂ ವಿವಿಧ ಬ್ಯಾರಕ್‌ನಲ್ಲಿನ ಕೈದಿಗಳಿಗೆ ಪ್ರವೇಶ ನಿರ್ಬಂಧ ಕಠಿಣಗೊಳಿಸಬೇಕು. ಬೇಕರಿ ಉತ್ಪನ್ನದಲ್ಲಿ ತೊಡಗಿರುವ ಕೈದಿಗಳು ಕೆಲಸ ಸಮಯದಲ್ಲಿ ಮಾತ್ರ ಇರಬೇಕು. ಕೆಲಸ ಅವಧಿ ಮುಗಿದ ಬಳಿಕ ವಿಭಾಗಕ್ಕೆ ಯಾರು ಹೋಗದಿರಲು ನಿಗಾ ವಹಿಸಬೇಕು ಎಂದು ಸೂಚನೆ ನೀಡಲಾಗಿದೆ.
ಕೇಕ್ ಹಾಗೂ ಇನ್ನಿತರ ಬೇಕರಿ ಉತ್ಪನ್ನಗಳಿಗೆ ಬಳಸಲಾಗುವ ಎಸೆನ್ಸ್ ಸೇರಿದಂತೆ ವಿವಿಧ ರಾಸಾಯನಿಕ ವಸ್ತುಗಳ ಸರಬರಾಜು ಮಾಡುವ ಕಂಪನಿಗಳ ಜೊತೆ ಮಾತುಕತೆ ನಡೆಸಿ, ಇದರ ಅಡ್ಡ ಪರಿಣಾಮಗಳನ್ನು ಅರಿತು ಇದರ ಬಗ್ಗೆ ಕೈದಿಗಳಿಗೆ ಎಚ್ಚರ ವಹಿಸುವಂತೆ ನಿರ್ದೇಶನ ನೀಡುವಂತೆ ತಿಳಿಸಲಾಗಿದೆ.

## ಯಾರ ಬೆಂಬಲವೂ ಬೇಡ

ಮಾಡಿ ನಮಗೊಂದು ಅವಕಾಶ ಕೊಟ್ಟಿದ್ದಾರೆ. ಐದು ವರ್ಷ ಸರ್ಕಾರ ಮಾಡುತ್ತೇವೆ. ಪಕ್ಷ ಹೇಳಿದಂತೆ ನಾನು ಹಾಗೂ ಸಿಎಂ ಕೆಲಸ ಮಾಡುತ್ತೇವೆ. ಬೇರೆಯವರ ಮಾತುಗಳು ಗೌಣ" ಎಂದರು.

"ಇಂದು ಬಹಳ ಪವಿತ್ರವಾದ ದಿನ. ಶ್ರೀ ಭಾರತಿ ತೀರ್ಥ ಮಹಾಸ್ವಾಮಿಗಳು ಮಠದ ಜವಾಬ್ದಾರಿ ಸ್ವೀಕರಿಸಿ 50 ವರ್ಷಗಳು ಪೂರ್ಣಗೊಂಡಿವೆ. ಧರ್ಮೋ ರಕ್ಷತಿ ರಕ್ಷಿತಃ ಎಂಬ ಶ್ಲೋಕವು ಧರ್ಮವನ್ನು ಯಾರು ಕಾಪಾಡುತ್ತಾರೋ ಧರ್ಮ ಅವರನ್ನು ಕಾಪಾಡುತ್ತದೆ ಎಂಬ ಸಂದೇಶ ಸಾರುತ್ತದೆ. ಅದರಂತೆ ಈ ಮಹಾಸ್ವಾಮಿಗಳು ರಾಜಕಾರಣಕ್ಕೆ ಎಂದು ಹಸ್ತಕ್ಷೇಪ ಮಾಡದೆ ಕೇವಲ ಧರ್ಮ, ಸಂಸ್ಕೃತಿ, ಸಂಸ್ಕಾರ ರಕ್ಷಣೆ ಮಾಡಿಕೊಂಡು ಬಂದಿದ್ದಾರೆ. ಆಮೂಲಕ ತಮ್ಮ ಕರ್ತವ್ಯ ನಿಭಾಯಿಸಿಕೊಂಡು ನಮಗೆ ಆಶೀರ್ವಾದ ಮಾಡುತ್ತಾ ಬಂದಿದ್ದಾರೆ.

ನನಗೆ ಮಹಾಸ್ವಾಮಿಗಳ ಮೇಲೆ ವಿಶೇಷವಾದ ನಂಬಿಕೆ, ಭಕ್ತಿ ಇದೆ. ತಾಯಿ ಸರಸ್ವತಿ ಅವರ ಮೇಲೆ ಆಶೀರ್ವಾದ ಮಾಡಿದ್ದಾಳೆ. ರಾಜೀವ್ ಗಾಂಧಿ ಅವರು ಇಲ್ಲಿ ಸಂಸ್ಕೃತ ವಿದ್ಯಾಪೀಠ ಮಾಡಲು ತೀರ್ಮಾನಿಸಿದರು. ಈ ಮಠವು ಬೆಂಗಳೂರಿನಲ್ಲಿ ಮಕ್ಕಳಿಗೆ ಜ್ಞಾನದ ದೀಪ ಬೆಳಗುವ ಪ್ರಯತ್ನ ಮಾಡುತ್ತಿದೆ. ಇವರ ಈ ಶುಭ ಕಾರ್ಯಕ್ರಮಕ್ಕೆ ನನ್ನನ್ನು ಆಹ್ವಾನಿಸಿದ್ದಾರೆ. ಸರ್ಕಾರದ ಪರವಾಗಿ ಹಾಗೂ ವೈಯಕ್ತಿಕವಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಿದ್ದೇನೆ" ಎಂದು ತಿಳಿಸಿದರು.

## ಮಾರಾಟ; ಫೈರಿಂಗ್!

ಇನ್ನೂ ಪ್ರಕರಣ ಸಂಬಂಧ ಅಸ್ಪತ್ರೆಗೆ ಪೊಲೀಸ್ ಆಯುಕ್ತ ಡಾ.ಶರಣಪ್ಪ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.
ಬಳಿಕ ಮಾಧ್ಯಮಗಳ ಜೊತೆ ಮಾತನಾಡಿದ ಅವರು, 2016 ರಿಂದ ಆರೋಪಿ ಅಕ್ರಮ ಡ್ರಗ್ ಸಪ್ಲೈ ಮಾಡುತ್ತಿದ್ದು, ಒಟ್ಟು 3 ಪ್ರಕರಣಗಳು ನಮ್ಮ ಜಿಲ್ಲೆಯಲ್ಲಿ ದಾಖಲಾಗಿವೆ. ಅಲ್ಲದೆ ನೆರೆಯ ಹೈದ್ರಾಬಾದ್‌ನಲ್ಲಿ ಸಹ ಅಕ್ರಮ ಡ್ರಗ್ಸ್ ಮಾರಾಟ ಸಂಬಂಧ ಆರೋಪಿ ಮೇಲೆ ಪ್ರಕರಣ ದಾಖಲಾಗಿರುವುದ್ದಾಗಿ ಮಾಹಿತಿ ನೀಡಿದ್ದಾರೆ.

## ಜೆಡಿಎಸ್ ಸಭೆಗೆ ಹಾಜರಾಗಲ್ಲ

ಮಾಡಲು ಹಕ್ಕಿದೆ. ನನ್ನ ಮಗಳು ಯಾರು ಜೊತೆ ಮಾತಾಡಿ ಸೈಟ್ ತೆಗೆದುಕೊಂಡಿದ್ದರೋ ಗೊತ್ತಿಲ್ಲ. ಪ್ರಭಾವ ಅಕ್ರಮ ಆರೋಪ ತನಿಖೆಯಿಂದ ಗೊತ್ತಾಗಲಿದೆ ಎಂದರು.

2028ಕ್ಕೆ ಸಿಎಂ ಆಗುತ್ತೇನೆ ಎಂದು ಸಚಿವ ಸತೀಶ್ ಜಾರಕಿಹೊಳಿ, ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಹೇಳಿಕೆ ವಿಚಾರ ಕುರಿತು ಪ್ರತಿಕ್ರಿಯಿಸಿದ ಜಿ.ಟಿ ದೇವೇಗೌಡ, ಈ ರೀತಿ ಯಾರೇ ಹೇಳಿದರೂ ಅದು ಭ್ರಮೆ. 2028ಕ್ಕೆ ಏನಾಗುತ್ತೆ ಎಂದು ಹೇಳಲು ಈಗ ಸಾಧ್ಯವಿಲ್ಲ. ಸಿಎಂ ಆಗಬೇಕಾದರೆ ಜನ ಮತ ಹಾಕಬೇಕು. ಶಾಸಕರು ಸಿಎಂ ಆಯ್ಕೆ ಮಾಡಬೇಕು. ಸುಮ್ಮನೆ ಸಿಎಂ ಆಗುತ್ತೇನೆ ಅನ್ನೋದು ಭ್ರಮೆ. ಸದ್ಯದ ಪರಿಸ್ಥಿತಿಯಲ್ಲಿ 2028ಕ್ಕೆ ಸಿಎಂ ಯಾರಾಗುತ್ತಾರೆ ಅಂತ ಹೇಳಲಿಕ್ಕೆ ನಾನು ಜ್ಯೋತಿಷಿ ಅಲ್ಲ. ಹಿಂದೆ ಯಡಿಯೂರಪ್ಪ, ಕುಮಾರಸ್ವಾಮಿ, ಸಿದ್ದರಾಮಯ್ಯ ಸಿಎಂ ಆಗುತ್ತಾರೆ ಎಂದು ಹೇಳಿದ್ದೆ. ಅದು ಜನರ ಅಭಿಪ್ರಾಯವನ್ನ ಸಂಗ್ರಹಿಸಿ ಹೇಳಿದ್ದು. ಈಗ ಸಿಎಂ ಯಾರಾಗ್ತಾರೆ ಎಂದು ಹೇಳುವ ಪರಿಸ್ಥಿತಿ ಇಲ್ಲ. ನನಗೆ ಸಿಎಂ ಆಗುವ ಆಸೆ ಇಲ್ಲ. ಸಿಎಂ ಆಗಲು ಖರ್ಚು ಮಾಡಬೇಕಾದಷ್ಟು ಹಣವು ನನ್ನ ಬಳಿ ಇಲ್ಲ. ಕೆಲವರು ಸಿಎಂ ಆಗೋ ಕಾರಣಕ್ಕೆ ಹಣ ಖರ್ಚು ಮಾಡಿ ಕಾದಿದ್ದಾರೆ. ಆ ಶಕ್ತಿ ನನ್ನ ಬಳಿ ಇಲ್ಲ ಎಂದು ತಿಳಿಸಿದರು.

# ಮಿಡ್‌ನೈಟ್ ಮೀಟಿಂಗ್ ನಡುವೆ ರಾಜ್ಯ ಬಡವಾಗುತ್ತಿದೆ: ಆಕ್ರೋಶ

**ಮೊದಲ ಪುಟದಿಂದ**

ಒದ್ದು ಕಿತ್ಕೊಳ್ಳುವಲ್ಲಿ ಯಶಸ್ವಿಯಾಗಿದ್ದರು. 25 ವರ್ಷಗಳ ನಂತರ ಸಿದ್ದರಾಮಯ್ಯನವರು ಸಿಎಂ ಆಗಿ 2 ವರ್ಷ ಪೂರೈಸಿದ್ದು, ಅಧಿಕಾರ ಬಿಟ್ಟು ಕೊಡುವರೇ ಇಲ್ಲವೇ ಎಂಬ ಅನುಮಾನ ಅವರಿಗೆ ಕಾಡುತ್ತಿದೆ. ಆದ್ದರಿಂದ ಅವರು ಒದ್ದು ಕಿತ್ಕೊಳ್ಳುವ ವಿಷಯವನ್ನು ನೆನಪು ಮಾಡಿಕೊಂಡಿದ್ದಾರೆ ಎಂದು ನುಡಿದರು.

ಡಿ.ಕೆ.ಶಿವಕುಮಾರ್ ಎಂದರೆ ಹಠವಾದಿಗಳು; ಒದ್ದು ಕಿತ್ಕೊಳ್ಳುವ ವಿಷಯದಲ್ಲಿ ನಿಸ್ಸೀಮರು. ಹಾಗಾಗಿ ಆ ಪ್ರಕ್ರಿಯೆಗೆ ಅವರು ಚಾಲನೆ ನೀಡಿದ್ದಾರೆ. ಒಂದು ಕಡೆ ಸಿದ್ದರಾಮಯ್ಯನವರು ಅವರ ಅವಧಿ ಪೂರ್ಣವಾದರೂ ಬಿಟ್ಟು ಕೊಡಲು ಮನಸ್ಸು ಬರುತ್ತಿಲ್ಲ. ಸಚಿವರ ನೇತೃತ್ವದಲ್ಲಿ ಡಿಕೆ ಶಿವಕುಮಾರ್ ಇಲ್ಲದ ವೇಳೆ ಡಿನ್ನರ್ ಮೀಟಿಂಗ್ ಅವರು ಪ್ರಾರಂಭಿಸಿದ್ದಾರೆ. ಇನ್ನೊಂದೆಡೆ ವಿಳಂಬವಾಗಿ ಮಲಗುವ ಡಿ.ಕೆ.ಶಿವಕುಮಾರ್ ಲೇಟ್ ನೈಟ್ ಮೀಟಿಂಗ್ ಶುರುಮಾಡಿದ್ದಾರೆ ಎಂದು ತಿಳಿಸಿದರು. ಇದು ಸದ್ಯದ ರಾಜಕೀಯ ಪರಿಸ್ಥಿತಿ ಎಂದರು.

ರಾಜ್ಯದ ಆಡಳಿತ ಪಕ್ಷವಾದ ಕಾಂಗ್ರೆಸ್ಸಿನ ಸರಣಿ ಸಭೆಗಳು ನಡೆಯುತ್ತಿವೆ. ಆಡಳಿತ ಪಕ್ಷದ ಶಾಸಕರ ಡಿನ್ನರ್ ಮೀಟಿಂಗ್, **ಮಿಡ್ ನೈಟ್ ಮೀಟಿಂಗ್**ಗಳ ನಡುವೆ ನಮ್ಮ ಕಾನೂನು ಪ್ರಕೋಷ್ಠದ ಸಭೆ ಆಯೋಜಿಸಿರುವುದು ಬಹಳ ವಿಶೇಷ ಎಂದರು. ಈ ಸಭೆಗೆ 95 ಜನ ಅಪೇಕ್ಷಿತರಿದ್ದು, 85 ಜನರು ಭಾಗವಹಿಸಿದ್ದಾರೆ. ತಮಗೆಲ್ಲರಿಗೂ ಅಭಿನಂದನೆಗಳು ಎಂದು ತಿಳಿಸಿದರು.

ಡಿನ್ನರ್ ಮೀಟಿಂಗ್, **ಮಿಡ್ ನೈಟ್ ಮೀಟಿಂಗ್**ಗಳ ವಿಚಾರ ಪತ್ರಿಕೆಗಳಲ್ಲಿ– ಮಾಧ್ಯಮಗಳಲ್ಲಿ ಬಹಳಷ್ಟು ಚರ್ಚೆ ಆಗುತ್ತಿದೆ. ಸಿದ್ದರಾಮಯ್ಯ– ಡಿ.ಕೆ.ಶಿವಕುಮಾರ್ ನಡುವೆ ಅವರ ಹೈಕಮಾಂಡಿನ ಮಟ್ಟದಲ್ಲಿ ಅಧಿಕಾರದ ಒಪ್ಪಂದ, ಸೂತ್ರ ಏರ್ಪಟ್ಟಿದೆ. ಅಭಿವೃದ್ಧಿ ಬಗ್ಗೆ ಒಪ್ಪಂದ ಆಗಿಲ್ಲ; ಅಧಿಕಾರ ಹಂಚಿಕೆ ಕುರಿತು ಒಪ್ಪಂದವಾದಂತಿದೆ ಎಂದು ವ್ಯಂಗ್ಯವಾಡಿದರು.



ಹಿಂದೆ ಟೆಸ್ಟ್ ಮ್ಯಾಚ್ ನೋಡುತ್ತಿದ್ದಿರಿ; ಬಳಿಕ ಏಕದಿನ ಪಂದ್ಯ ನಡೆಯುತ್ತಿತ್ತು. ಬಳಿಕ 20–20 ಮ್ಯಾಚ್‌ಗಳು ಜನಪ್ರಿಯವಾಗಿವೆ. ಹಾಗೇ ರಾಜ್ಯದ ಜನರು ಆಶೀರ್ವಾದ ಮಾಡಿ, ಸ್ಪಷ್ಟ ಬಹುಮತ ಕೊಟ್ಟು ಅಧಿಕಾರ ಹಂಚುವಿಕೆ ಬಗ್ಗೆ ಚರ್ಚೆ ಮುಖ್ಯವಾಗಿದೆಯೇ ಹೊರತು, ಅಭಿವೃದ್ಧಿಯ ವಿಚಾರ ಪ್ರಮುಖವಾಗಿಲ್ಲ ಎಂದು ಹೇಳಿದರು.

ಒಂದು ಕಡೆ ಸರಕಾರದ ಬೇಜವಾಬ್ದಾರಿಯಿಂದ ಸರಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರು, ನವಜಾತ ಶಿಶುಗಳ ಸರಣಿ ಸಾವು ಸಂಭವಿಸುತ್ತಿದೆ. ಭ್ರಷ್ಟಾಚಾರ ಮಿತಿ ಮೀರಿದೆ. ಸರಕಾರ ಆಡಳಿತಕ್ಕೆ ಬಂದು 2 ವರ್ಷಗಳು ಕಳೆದರೂ ಅಭಿವೃದ್ಧಿಯನ್ನು ಯಾವುದೇ ವಿಧಾನಸಭಾ ಕ್ಷೇತ್ರದಲ್ಲಿ ನೋಡಲು ಸಾಧ್ಯವಾಗದ ಸ್ಥಿತಿ ಇದೆ ಎಂದು ಟೀಕಿಸಿದರು.

ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿಯವರು ಚುನಾವಣೆ ಹೊರತುಪಡಿಸಿ ಬೇರೆ ದಿನಗಳಲ್ಲಿ ರಾಜ್ಯದಾದ್ಯಂತ ಪ್ರವಾಸ ಮಾಡುತ್ತಿಲ್ಲ; ಅವರ ಪ್ರವಾಸ ಕೇವಲ ಬೆಂಗಳೂರಿಗೆ ಸೀಮಿತವಾಗಿದೆ ಎಂದು ಆಕ್ಷೇಪಿಸಿದರು. ರಾಜ್ಯ, ಬೆಂಗಳೂರು ಮಹಾನಗರದಲ್ಲಿ ರಸ್ತೆಗುಂಡಿ ಮುಚ್ಚಿಸುವ ಕೆಲಸವೂ ರಾಜ್ಯ ಸರಕಾರದಿಂದ ಆಗುತ್ತಿಲ್ಲ; 50 ಸಾವಿರ ಕೋಟಿಗೂ ಹೆಚ್ಚು ಮೊತ್ತದ ಅಂಡರ್‌ಗ್ರೌಂಡ್ ಟನೆಲ್ ರೋಡನ್ನು ಬೆಂಗಳೂರಿನಲ್ಲಿ ಮಾಡಲು ಡಿ.ಕೆ.ಶಿವಕುಮಾರ್ ಮುಂದಾಗಿದ್ದಾರೆ. ಇದರ ಕುರಿತು ಯಾರ ಜೊತೆಗೂ ಚರ್ಚೆಯನ್ನೂ ಮಾಡಿಲ್ಲ ಎಂದು ಟೀಕಿಸಿದರು.

ತಜ್ಞರು, ಚುನಾಯಿತ ಪ್ರತಿನಿಧಿಗಳ ಈ ವಿಷಯ ಚರ್ಚಿಸಿಲ್ಲ; ಅಂಡರ್‌ಗ್ರೌಂಡ್ ಟನೆಲ್ ರಸ್ತೆಯ ಬಜೆಟ್, ಗುಣಮಟ್ಟ, ಗಾತ್ರ ಯಾರಿಗೂ ಗೊತ್ತಾಗುವುದಿಲ್ಲ ಎಂದು ಡಿ.ಕೆ.ಶಿವಕುಮಾರ್ ಅವರಿಗೆ ಅನಿಸಿರಬಹುದು ಎಂದು ವ್ಯಂಗ್ಯವಾಗಿ ತಿಳಿಸಿದರು. ಆನೆ ನಡೆದಂತೆ ದಾರಿ ಎಂಬಂತೆ ಮನ ಬಂದಂತೆ ಸರಕಾರ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಅಧಿಕಾರದ ಮದ, ದರ್ಪ ಹೆಚ್ಚಾಗಿದೆ. ವಿಪಕ್ಷ ಸೇರಿ ಯಾರೂ ಕೂಡ ಸರಕಾರವನ್ನು ಟೀಕಿಸಬಾರದೆಂಬ ಧೋರಣೆ ಇವರದು. ವಿಪಕ್ಷದವರನ್ನು ಬೆದರಿಸುತ್ತಿದ್ದು, ಇದನ್ನು ಪ್ರಜಾಪ್ರಭುತ್ವ ವ್ಯವಸ್ಥೆ ಎಂದು ಕರೆಯಲು ಸಾಧ್ಯವೇ ಎಂದು ಕೇಳಿದರು. ಹಿಂದೂ ವಿರೋಧಿ ನೀತಿ ವಿರುದ್ಧ ಧ್ವನಿ ಎತ್ತಿದ ಹಿಂದೂ ಕಾರ್ಯಕರ್ತರ ವಿರುದ್ಧ ಕೇಸುಗಳನ್ನು ದಾಖಲಿಸುತ್ತಿದ್ದಾರೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಬಿಜೆಪಿ ಕಾರ್ಯಕರ್ತರ ಮೇಲೆ ಪೊಲೀಸ್ ಕೇಸು, ಬೆದರಿಕೆ ಒಡ್ಡಿ ದಬ್ಬಾಳಿಕೆ ಮಾಡಲಾಗುತ್ತಿದೆ. ಇದು ಆಡಳಿತ ಪಕ್ಷದ ಘನಂದಾರಿ ಕೆಲಸ. ಒಟ್ಟಾರೆಯಾಗಿ ಅಭಿವೃದ್ಧಿಶೂನ್ಯ ಸರಕಾರ ಇದು ಎಂದ ಅವರು, ಬಿಜೆಪಿ ಕಾರ್ಯಕರ್ತರ, ಹಿಂದೂ ಕಾರ್ಯಕರ್ತರ ರಕ್ಷಣೆ ಕಾನೂನು ಪ್ರಕೋಷ್ಠದ ಆದ್ಯ ಕರ್ತವ್ಯ. ಹಾಗಾಗಿ ಈ ಸಭೆ ನಡೆಸಲಾಗುತ್ತಿದೆ ಎಂದು ತಿಳಿಸಿದರು. ಕಾನೂನು ಪ್ರಕೋಷ್ಠದ ರಾಜ್ಯ ಸಂಚಾಲಕ ವಸಂತಕುಮಾರ್ ಅವರು ಪ್ರಾಸ್ತಾವಿಕ ಮಾತನಾಡಿ, ಪ್ರಕೋಷ್ಠದ ಕಾರ್ಯಚಟುವಟಿಕೆಗಳ ವಿವರ ನೀಡಿದರು. ರಾಜ್ಯ ಪ್ರಕೋಷ್ಠಗಳ ಸಂಯೋಜಕ ಎಸ್. ದತ್ತಾತ್ರಿ, ರಾಜ್ಯ ಪ್ರಕೋಷ್ಠಗಳ ಸಹ ಸಂಯೋಜಕ ಎನ್.ವಿ. ಫಣೀಶ್, ಕಾನೂನು ಪ್ರಕೋಷ್ಠದ ರಾಜ್ಯ ಸಂಚಾಲಕ ವಸಂತಕುಮಾರ್, ಕಾನೂನು ಪ್ರಕೋಷ್ಠದ ರಾಜ್ಯ ಸಹ–ಸಂಚಾಲಕ ಲಕ್ಷ್ಮಣ್ ಸಿ.ಕುಲಕರ್ಣಿ, ರಾಜ್ಯ ಸಮಿತಿ ಸದಸ್ಯ ವಿಶ್ವನಾಥ್ ಮತ್ತು ಕಾನೂನು ಪ್ರಕೋಷ್ಠದ ಪದಾಧಿಕಾರಿಗಳು ಉಪಸ್ಥಿತರಿದ್ದರು. ಆಹ್ವಾನಿತ ಜಿಲ್ಲಾ ಪದಾಧಿಕಾರಿಗಳು ಹಾಜರಿದ್ದರು.

# ರಾಜಕೀಯ ಮೈಲೇಜ್‌ಗೋಸ್ಕರ ನಕ್ಸಲ್ ಶರಣಾಗತಿ

**ದಕ್ಷಿಣ ಕನ್ನಡ:** ಕರ್ನಾಟಕದಲ್ಲಿ ಇತ್ತೀಚೆಗೆ ನಡೆದ ನಕ್ಸಲ್ ಶರಣಾಗತಿ, ಎನ್‌ಕೌಂಟರ್ ಬಗ್ಗೆ ಅನುಮಾನ ಮೂಡುತ್ತಿದೆ. ಇಲ್ಲಿ ರಾಜಕೀಯ ಮೈಲೇಜ್ ಪಡೆಯಲು ಶರಣಾಗತಿ ಪ್ರಕ್ರಿಯೆ ನಡೆಸಲಾಗಿದೆ ಎಂದು ತಮಿಳುನಾಡು ಬಿಜೆಪಿ ರಾಜ್ಯಾಧ್ಯಕ್ಷ ಅಣ್ಣಾಮಲೈ ಆಪಾದಿಸಿದ್ದಾರೆ.



ಮಂಗಳೂರಿನಲ್ಲಿ ಮಾತನಾಡಿದ ಅವರು, ನಕ್ಸಲ್ ಶರಣಾಗತಿ ನಿಯಮ ಬಹಳ ದೊಡ್ಡಮಟ್ಟದ ಪ್ರಕ್ರಿಯೆ. ಶರಣಾಗತಿ ಸಂದರ್ಭದಲ್ಲಿ ಕೆಲವೊಂದು ನಿಯಮಗಳಿರುತ್ತವೆ. ಆದರೆ, ಕರ್ನಾಟಕದಲ್ಲಿ ಮೊನ್ನೆ ನಡೆದ ನಕ್ಸಲ್ ಶರಣಾಗತಿ ಸ್ವಲ್ಪ ಅನುಮಾನ ಮೂಡಿಸುತ್ತಿದೆ. ನಕ್ಸಲ್ ಮುಖಂಡ ವಿಕ್ರಮ್ ಗೌಡನ ಎನ್‌ಕೌಂಟರ್‌ನಲ್ಲೂ ಅನುಮಾನವಿದೆ. ಎನ್‌ಕೌಂಟರ್ ಆದ ತಕ್ಷಣ ನಕ್ಸಲ್ ಶರಣಾದರು ಎಂದು ಸರ್ಕಾರ ಹೇಳುತ್ತಿದೆ.

ನಕ್ಸಲರು ಶರಣಾಗುವಂತೆ ಯಾರು ಮಾತುಕತೆ ನಡೆಸಿದರು ಎಂಬುದು ಗೊತ್ತಿಲ್ಲ. ನಕ್ಸಲ್ ತಂಡದೊಳಗಡೆ ಇರುವ ಆಂತರಿಕ ರಾಜಕೀಯವನ್ನು ಕಾಂಗ್ರೆಸ್ ದುರ್ಬಳಕೆ ಮಾಡುತ್ತಿದೆಯೇ? ಎಂಬ ಅನುಮಾನ ಮೂಡುತ್ತಿದೆ ಎಂದು ಅವರು ಹೇಳಿದರು.

ಈ ಹಿಂದೆ ನಾನು ಚಿಕ್ಕಮಗಳೂರು ಎಸ್ಪಿಯಾಗಿದ್ದ ಸಂದರ್ಭದಲ್ಲಿ ನಕ್ಸಲರು ಶರಣಾಗಿದ್ದರು. ನಕ್ಸಲರ ಶರಣಾಗತಿ ಪ್ರಕ್ರಿಯೆಯಲ್ಲಿ ನಾನು ಭಾಗವಹಿಸಿದ್ದೆ. ನಿಯಮಗಳ ಪ್ರಕಾರ ಜಿಲ್ಲಾಧಿಕಾರಿ ಮತ್ತು ಎಸ್‌ಪಿಯ ಮುಂಭಾಗ ನಕ್ಸಲರು ಶರಣಾಗಬೇಕು. ಆನಂತರ ಬೇರೆ ಪ್ರಕ್ರಿಯೆಗಳು ನಡೆಯುತ್ತದೆ. ಇಲ್ಲಿ ರಾಜಕೀಯ ಮೈಲೇಜ್‌ಗೋಸ್ಕರ ಶರಣಾಗತಿ ಪ್ರಕ್ರಿಯೆ ನಡೆಸಲಾಗಿದೆ. ನಕ್ಸಲ್ ಬೆಂಬಲಿಗರು ಸರ್ಕಾರದ ಮೇಲೆ ಪ್ರಭಾವ ಬೀರಿದ್ದಾರೆ. ನಾಗರಿಕ ಸಮಾಜದ ಮೇಲೆ ಇವರು ಪ್ರಭಾವ ಬೀರಲಿದ್ದಾರೆ ಎಂದು ಹೇಳಿದರು.

ನಕ್ಸಲರು ಶರಣಾದಾಗ ಜನರಿಗೆ ವಿಶ್ವಾಸ ಬರಬೇಕು. ನಕ್ಸಲರ ಶರಣಾಗತಿಯ ಬಗ್ಗೆ ಜನರಿಗೆ ವಿಶ್ವಾಸವಿಲ್ಲ. ಶರಣಾಗತಿಯ ಬಗ್ಗೆ ಗೃಹಸಚಿವರೇ ಮಾಹಿತಿಯ ಕೊರತೆಯಿದ್ದ ಹಾಗೆ ಉಲ್ಟಾ–ಪಲ್ಟಾ ಮಾತನಾಡುತ್ತಾರೆ. ಶರಣಾದ ನಕ್ಸಲರು ನಾಗರಿಕ ಸಮಾಜದ ಮೇಲೆ ಪ್ರಭಾವ ಬೀರುವ ಅಪಾಯವಿದೆ ಎಂದು ಹೇಳಿದರು.ಹಿಂದಿ ಮಾತ್ರವಲ್ಲ, ಭಾರತದ ಎಲ್ಲಾ ಭಾಷೆಗಳು ರಾಷ್ಟ್ರಭಾಷೆಗಳು – ಮಾಜಿ ಕ್ರಿಕೆಟಿಗ ಆರ್. ಅಶ್ವಿನ್ ಅವರು ಹಿಂದಿ ರಾಷ್ಟ್ರಭಾಷೆಯಲ್ಲ ಎಂಬ ಹೇಳಿಕೆಯ ವಿಚಾರದಲ್ಲಿ ಮಾತನಾಡಿದ ಅವರು, ಹಿಂದಿಭಾಷೆ ಭಾರತದ ಒಂದು ಅಫಿಶಿಯಲ್ ಲ್ಯಾಂಗ್ವೇಜ್. ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಭಾರತದ ಎಲ್ಲಾ ಭಾಷೆಯೂ ರಾಷ್ಟ್ರೀಯ ಭಾಷೆ ಎಂದು ಬಹಳಷ್ಟು ಕಡೆ ಹೇಳಿದ್ದಾರೆ. ಬಿಜೆಪಿ ಸರ್ಕಾರದ ಪ್ರಕಾರ ಎಲ್ಲಾ ಭಾಷೆಯು ರಾಷ್ಟ್ರೀಯ ಭಾಷೆ. ಪ್ರಧಾನಿ ಕನ್ನಡ, ತಮಿಳು ಭಾಷೆಗಳಿಗೆ ಬಹಳ ಮರ್ಯಾದೆ ಕೊಡುತ್ತಾರೆ ಎಂದರು. ಅಶ್ವಿನ್ ಒಂದು ದೃಷ್ಟಿಕೋನದಲ್ಲಿ ಹೇಳಿದ್ದಾರೆ. ಎಲ್ಲಿ ಕೂಡಾ ಹಿಂದಿ ರಾಷ್ಟ್ರೀಯ ಭಾಷೆಯಲ್ಲ, ಎಲ್ಲಾ ಭಾಷೆಗಳೂ ರಾಷ್ಟ್ರೀಯ ಭಾಷೆ. ಆ ಅರ್ಥದಲ್ಲಿ ಅಶ್ವಿನ್ ಹೇಳಿದ್ದಾರೆ ಅಷ್ಟೇ, ಬೇರೇನೂ ವಿಚಾರವಿಲ್ಲ ಎಂದು ಹೇಳಿದರು.

# ಜಿಟಿಡಿ ವಿರುದ್ಧ ಲೋಕಾಗೆ ದೂರು

ಮೈಸೂರು: ಮುಡಾದಲ್ಲಿ (ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ) 50:50 ಸೈಟು ಹಂಚಿಕೆಯಲ್ಲಿ ನಡೆದಿರುವ ಅಕ್ರಮಕ್ಕೆ ಸಂಬಂಧಿಸಿದಂತೆ ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ, ಸಿಎಂ ಬಳಿಕ ಮತ್ತೊಬ್ಬ ರಾಜಕಾರಣಿ ವಿರುದ್ಧ ದೂರು ನೀಡಿದ್ದಾರೆ.

ಹೌದು. 50:50 ನಿವೇಶನ ಪಡೆಯುವಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ ದೇವೇಗೌಡ (ಉಖ ಆಜತಜರಠತಿಜಚಿ) ಪ್ರಭಾವ ಬೀರಿದ್ದಾರೆ ಎಂದು ಆರೋಪಿಸಿ, ಸ್ನೇಹಮಯಿ ಕೃಷ್ಣ ಲೋಕಾಯುಕ್ತ ಪೊಲೀಸರಿಗೆ ದಾಖಲೆ ಸಮೇತ ದೂರು ನೀಡಿದ್ದಾರೆ. ಅಲ್ಲದೇ ಸಿಎಂ ಸಿದ್ದರಾಮಯ್ಯ ಪ್ರಕರಣಕ್ಕೆ ಸೇರಿಸಿ ತನಿಖೆ ನಡೆಸುವಂತೆ ಮನವಿ ಮಾಡಿದ್ದಾರೆ.

ಕೋರ್ಟ್‌ನಲ್ಲಿ ವ್ಯಾಜ್ಯ ಇದ್ದ ಭೂಮಿಗೆ ಅಕ್ರಮವಾಗಿ 50:50 ಪರಿಹಾರ ಕೊಡಿಸಲಾಗಿದೆ. ಜಿ.ಟಿ ದೇವೇಗೌಡರ ಪ್ರಭಾವ ಬಳಸಿ ಚೌಡಯ್ಯ ಎಂಬವರ ಹೆಸರಿಗೆ 44,736 ಚದರ ಅಡಿ ಜಾಗದ 6 ನಿವೇಶನ ಕೊಡಿಸಿದ್ದಾರೆ. ಅದರಲ್ಲಿ ಕಿಕ್‌ಬ್ಯಾಕ್ ರೂಪದಲ್ಲಿ 2 ನಿವೇಶನ ತಮ್ಮ ಕುಟುಂಬಕ್ಕೆ ಬರೆಸಿಕೊಂಡಿದ್ದಾರೆ. ವಿಜಯನಗರ ಬಡಾವಣೆ 4ನೇ ಹಂತದಲ್ಲಿ 2 ನಿವೇಶನ ಪಡೆದು ಅದನ್ನ ತಮ್ಮ ಮಗಳು ಅನ್ನಪೂರ್ಣ ಹಾಗೂ ಅಳಿಯ ವಿಶ್ವೇಶ್ವರಯ್ಯ ಹೆಸರಿಗೆ ಕ್ರಯ ಮಾಡಿಸಿದ್ದಾರೆ. ಇದನ್ನೂ ಓದಿ: ಅಯೋಧ್ಯೆ ರಾಮಮಂದಿರಕ್ಕೆ ವರ್ಷದ ಸಂಭ್ರಮ ಮಂದಿರ ಅಲಂಕಾರಕ್ಕೆ 50 ಕ್ವಿಂಟಾಲ್ ಹೂವು ಇದರಲ್ಲಿ ಜಿ.ಟಿ ದೇವೇಗೌಡ ಅವರ ಪ್ರಭಾವ ಇರುವುದು ದಟ್ಟವಾಗಿದೆ. ಆರ್‌ಟಿಸಿಯಲ್ಲಿ ಸರ್ಕಾರಿ ಭೂಮಿ ಎಂದು ಇದೆ. ಈ ವ್ಯಾಜ್ಯ ಕೋರ್ಟ್‌ನಲ್ಲಿ ಬಾಕಿ ಇದೆ. ಆದಾಗ್ಯೂ ಜಿಟಿಡಿ ತಮ್ಮ ಕುಟುಂಬಕ್ಕೆ 50:50 ನಿವೇಶನ ಬರೆಸಿಕೊಂಡಿರುವ ಅನುಮಾನವಿದೆ. ಮುಡಾ ವ್ಯಾಪ್ತಿಗೆ ಭೂಮಿ ಬರದಿದ್ದರೂ, ದೇವನೂರು ಬಡಾವಣೆಗೆ ಪರಿಹಾರ ಕೊಟ್ಟಂತೆ ಮಾಡಲಾಗಿದೆ. ಇದೆಲ್ಲದರ ಬಗ್ಗೆ ಸಮಗ್ರವಾಗಿ ತನಿಖೆ ನಡೆಸುವಂತೆ ಸ್ನೇಹಮಯಿ ಕೃಷ್ಣ ಮನವಿ ಮಾಡಿದ್ದಾರೆ.

# ರಸ್ತೆಗಳ ಬದಿ ಭಗ್ನಾವಶೇಷ ಹಾಕುವವರ ಮೇಲೆ ದಂಡ ವಿಧಿಸಿ

**ಬೆಂಗಳೂರು:** ಆರ್.ಆರ್ ನಗರ ವಲಯ ವ್ಯಾಪ್ತಿಯಲ್ಲಿ ರಸ್ತೆಗಳ ಬದಿ ಭಗ್ನಾವಶೇಷಗಳನ್ನು ಹಾಕುವವರ ಮೇಲೆ ದಂಡ ವಿಧಿಸಿ ಕ್ರಮ ಕೈಗೊಳ್ಳಲು ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿ ನಾಥ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು.
ಆರ್.ಆರ್ ನಗರ ವಲಯ ವ್ಯಾಪ್ತಿಯಲ್ಲಿ ಮುಖ್ಯ ಆಯುಕ್ತರ ನಡೆ ವಲಯದ ಕಡೆ ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವ ವೇಳೆ, ಸಾರ್ವಜನಿಕರೊಬ್ಬರು ಐಡಿಯಲ್ ಹೋಮ್ಸ್ ವ್ಯಾಪ್ತಿಯಲ್ಲಿ ರಸ್ತೆ ಬದಿ ಭಗ್ನಾವಶೇಷಗಳನ್ನು ರಸ್ತೆ ಬದಿ ಹಾಕಿರುವುದರಿಂದ ಓಡಾಟಕ್ಕೆ ಸಮಸ್ಯೆಯಾಗುತ್ತಿದ್ದು, ಅಂತಹವರ ಮೇಲೆ ಕ್ರಮ ಕೈಗೊಳ್ಳಲು ಮನವಿ ಮಾಡಿದರು.



ಅದಕ್ಕೆ ಮುಖ್ಯ ಆಯುಕ್ತರು ಪ್ರತಿಕ್ರಿಯಿಸಿ, ರಸ್ತೆ ಬದಿ ಯಾವುದೇ ಇಲಾಖೆಯಾಗಲಿ, ಸಾರ್ವಜನಿಕರಾಗಲಿ ರಸ್ತೆ ಬದಿ ಭಗ್ನಾವಶೇಷಗಳನ್ನು ಹಾಕುವಂತಿಲ್ಲ. ಈ ಸಂಬಂಧ ಬಿ.ಎಸ್.ಡಬ್ಲ್ಯೂ.ಎಂ.ಎಲ್ ನ ಅಧಿಕಾರಿಗಳು, ಮಾರ್ಷಲ್‌ಗಳು ಸೇರಿ ಆರ್.ಆರ್ ನಗರ ವಲಯ ವ್ಯಾಪ್ತಿಯಲ್ಲಿ ಭಗ್ನಾವಶೇಷ ಹಾಕಿರುವುದನ್ನು ಪರಿಶೀಲನೆ ನಡೆಸಿ ನಿಯಮ ಉಲ್ಲಂಘನೆ ಮಾಡಿದವರ ಮೇಲೆ ಕ್ರಮ ಕೈಗೊಂಡು ಸಂಬಂಧಪಟ್ಟವರಿಗೆ ದಂಡ ವಿಧಿಸಲು ಸೂಚನೆ ನೀಡಿದರು.

**ಅನೈತಿಕ ಚಟುವಟಿಕೆಗಳಿಗೆ ಕಡಿವಾಣ ಹಾಕಿ:**

ಅಂಜನಾ ನಗರ ಕೆಇಬಿ ಉದ್ಯಾನವನದಲ್ಲಿ ಅನೈತಿಕ ಚಟುವಟಿಕೆಗಳು ಹೆಚ್ಚಾಗಿದ್ದು, ಇದರಿಂದ ಸಾರ್ವಜನಿಕರಿಗೆ ಸಾಕಷ್ಟು ಸಮಸ್ಯೆಯಾಗುತ್ತಿದೆ. ಅದನ್ನು ತಪ್ಪಿಸಲು ಕೇಳಿದ್ದಕ್ಕೆ, ಪಾಲಿಕೆ ಅಧಿಕಾರಿಗಳು ಪೊಲೀಸ್ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿ ಅನೈತಿಕ ಚಟುವಟಿಕೆಗಳನ್ನು ನಡೆಸುವವರ ಮೇಲೆ ಕಾನೂನು ಕ್ರಮ ಕೈಗೊಂಡು ಅದಕ್ಕೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಂಪುರ ಕೆರೆಗೆ ಕೊಳಚೆ ನೀರು ಸೇರುತ್ತಿದ್ದು, ಅದನ್ನು ನಿಯಂತ್ರಿಸಲು ಕೇಳಿದ್ದಕ್ಕೆ ಪ್ರತಿಕ್ರಿಯಿಸಿ, ಜಲಮಂಡಳಿ ಅಧಿಕಾರಿಗಳು ಕೂಡಲೆ ಸ್ಥಳ ಪರಿಶೀಲನೆ ನಡೆಸಿ ಕೆರೆಗೆ ಕೊಳಚೆ ನೀರು ಸೇರುವುದನ್ನು ತಪ್ಪಿಸಬೇಕು. ಎಸ್.ಟಿ.ಪಿ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸಿ ಸಂಸ್ಕರಿಸಿದ ನೀರು ಕೆರೆಗೆ ಹೋಗುವಂತೆ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ಸಮುದಾಯದ ಪ್ರಾಣಿಗಳ ಕುರಿತು ನಾಗರೀಕರಲ್ಲಿ ಜಾಗೃತಿ ಮೂಡಿಸುವ ಕುರಿತಂತೆ ಬಿತ್ತಿಪತ್ರಗಳನ್ನು ವಿತರಿಸಲಾಗುತ್ತಿದ್ದು, ಇಂದು ಆರ್.ಆರ್ ನಗರ ವಲಯದಲ್ಲಿ "ಪ್ರಾಣಿಗಳ ಆರೋಗ್ಯದ ಮೂಲಕ ಸಾರ್ವಜನಿಕ ಆರೋಗ್ಯ" ಕುರಿತ ಜಾಗೃತಿ ಮೂಡಿಸುವ ಬಿತ್ತಿಪತ್ರಗಳನ್ನು ಬಿಡುಗಡೆಗೊಳಿಸಲಾಯಿತು.

ಈ ವೇಳೆ ವಲಯ ಆಯುಕ್ತರಾದ ಸತೀಶ್, ಮುಖ್ಯ ಅಭಿಯಂತರರಾದ ಸ್ವಯಂಪ್ರಭ, ಕಾರ್ಯಪಾಲಕ ಅಭಿಯಂತರರು, ಆರೋಗ್ಯಾಧಿಕಾರಿ ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

# ಅಂತರ್‌ರಾಜ್ಯ ಹಾಕಿ ಕಪ್ ಪಂದ್ಯಾವಳಿ


**ಬೆಂಗಳೂರು:** ಬಹು ನಿರೀಕ್ಷಿತ 6ನೇ ಆವೃತ್ತಿಯ "ಚೈರೋಸ್ ಭೀಮಯ್ಯ ಹಾಕಿ ಕಪ್ 2025" ಶುಕ್ರವಾರದಿಂದ ಫೀಲ್ಡ್ ಮಾರ್ಷಲ್ ಕೆ.ಎಂ. ಕರಿಯಪ್ಪ ಹಾಕಿ ಅರೆನಾದಲ್ಲಿ ಆರಂಭವಾಗಿದೆ.

ಕರ್ನಾಟಕ ಹಾಕಿ ಅಸೋಸಿಯೇಷನ್ ಹಾಗೂ ಕೂರ್ಗ್ ಚಾಲೆಂಜರ್ಸ್ ಚಿಕ್‌ಪೇಟ್ ಅಸೋಸಿಯೇಷನ್ ಸಹಯೋಗದಲ್ಲಿ ಈ ಅಂತರ್–ರಾಜ್ಯ ಪಂದ್ಯಾವಳಿ 5–ಎ–ಸೈಡ್ ಮಾದರಿಯಲ್ಲಿ ಭಾರತೀಯ ಹಾಕಿ ಪ್ರದರ್ಶನ ನಡೆಯಲಿದೆ. ಹಾಕಿ ಕಪ್ ಪಂದ್ಯಾವಳಿಯಲ್ಲಿ ಒಟ್ಟು 180 ಆಟಗಾರರನ್ನೊಳಗೊಂಡ ಒಟ್ಟು 20 ತಂಡಗಳು ಭಾಗವಹಿಸಲಿದ್ದಾರೆ. ಇಂದಿನಿಂದ ಜನವರಿ 12ರವರೆಗೆ ಪಂದ್ಯಾವಳಿ ನಡೆಯಲಿದ್ದು, ಭಾನುವಾರ ವಿಜೇತರನ್ನು ಘೋಷಿಸಲಾಗುತ್ತದೆ.

ಮಾಜಿ ಭಾರತೀಯ ಹಾಕಿ ಆಟಗಾರರಾದ ವಿ.ಆರ್. ರಘುನಾಥ್, ವಿ.ಎಸ್. ವಿನಯ, ಅಮರ್ ಐಯಮ್ಮ, ನಿತಿನ್ ತಿಮ್ಮಯ್ಯ ಮತ್ತು ನಿಕ್ಕಿನ್ ತಿಮ್ಮಯ್ಯ ಅವರು ಸಹ ಭಾಗವಹಿಸಲಿದ್ದಾರೆ.ಜನವರಿ 12 ರಂದು ನಡೆಯುವ ಅಂತಿಮ ಸುತ್ತು ನಡೆಯಲಿದ್ದು, ಬಳಿಕ ವಿಜೇತ ತಂಡ ಪದ್ಮಶ್ರೀ ಮತ್ತು ಮಾಜಿ ಭಾರತೀಯ ಹಾಕಿ ಆಟಗಾರ ಎಂ.ಪಿ. ಗಣೇಶ್ ಹಾಗೂ ಧನರಾಜ್ ಪಿಳ್ಳೈ ವಿತರಿಸಲಿದ್ದಾರೆ.

ಸಂಘಟಕರನ್ನು ಪ್ರತಿನಿಧಿಸಿದ ಸಿಸಿಸಿಎ ಅಧ್ಯಕ್ಷ ಶ್ರೀ ಕೆ.ಡಿ. ಗಣಪತಿ ಮಾತನಾಡಿ, ಜನವರಿ 10 ರಿಂದ 12 ರವರೆಗೆ ಬೆಂಗಳೂರಿನಲ್ಲಿ 5–ಎ–ಸೈಡ್ ಚೇರೋಸ್ ಭೀಮಯ್ಯ ಹಾಕಿ ಕಪ್‌ನ 6 ನೇ ಆವೃತ್ತಿ ಘೋಷಿಸಲಾಗಿದೆ, ಇದಕ್ಕೆ ಕ್ಯೂನೆಟ್ ಅವರ ಪ್ರಾಯೋಜಕತ್ವ ನೀಡಿದ್ದು, ಸ್ಪರ್ಧೆ ನಡೆಸಲು ಉತ್ಸಾಹ ಹೆಚ್ಚಿದೆ. ಈ ಪಂದ್ಯಾವಳಿಯು ಭಾರತದ ರಾಷ್ಟ್ರೀಯ ಕ್ರೀಡೆಯಾದ ಹಾಕಿಯನ್ನು ಬೆಂಬಲಿಸಲು ಮತ್ತು ಭಾರತದಾದ್ಯಂತದ ಆಟಗಾರರಿಗೆ ಅವರ ಪ್ರತಿಭೆಯನ್ನು ಪ್ರದರ್ಶಿಸಲು ವೇದಿಕೆಯನ್ನು ಒದಗಿಸುವ ನಮ್ಮ ಅಚಲವಾದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ, ಜೊತೆಗೆ ಈ ಅದ್ಭುತ ಕ್ರೀಡೆಯ ಬೆಳವಣಿಗೆ ಮತ್ತು ಗುರುತಿಸುವಿಕೆಯನ್ನು ಉತ್ತೇಜಿಸುತ್ತದೆ. ಕ್ಯೂನೆಟ್ ಇಂಡಿಯಾ ವಲಯದ ಕಾರ್ಪೊರೇಟ್ ಕಮ್ಯುನಿಕೇಷನ್ಸ್ ಮುಖ್ಯಸ್ಥ ನಿಶ್ಚಲ್ ಸಿ ಮಾತನಾಡಿ, ಭಾರತೀಯ ನೆಲದ ದೇಸಿ ಆಟವಾದ ಹಾಕಿ ಆಟವನ್ನು ಬೆಳೆಸುವ ಅಗತ್ಯವಿದೆ. ಹೀಗಾಗಿ ಹಾಕಿ ಆಟಕ್ಕೆ ನಮ್ಮ ಪ್ರಾಯೋಜಿಕ್ವತ ಸದಾ ಇರಲಿದೆ. ಹಾಕಿ ಆಟವನ್ನು ಜಾಗತಿಕವಾಗಿ ಪ್ರಸಿದ್ಧಿ ಆಟವನ್ನಾಗಿ ಮಾಡುವತ್ತ ಎಲ್ಲರ ಸಹಕಾರ ಅಗತ್ಯ ಎಂದು ಹೇಳಿದರು.



**ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಶಾರದಾ ಪೀಠದ ಶ್ರೀ ಭಾರತೀ ತೀರ್ಥ ಮಹಾಸ್ವಾಮೀಜಿಗಳು ಸನ್ಯಾಸ ಸ್ವೀಕಾರ ಮಾಡಿ 50 ವರ್ಷಗಳು ಪೂರೈಸಿರುವ ಶುಭ ಸಂವತ್ಸರದ "ಸುವರ್ಣ ಭಾರತಿ ಮಹೋತ್ಸವ" ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಶನಿವಾರ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಶ್ರೀ ಪುರುಷೋತ್ತಮ ಭಾರತೀ ಸ್ವಾಮಿಗಳು, ಶ್ರೀ ಬ್ರಹ್ಮಾನಂದ ಭಾರತೀ ಸ್ವಾಮಿಗಳು, ಶ್ರೀ ಪರಮಾನಂದ ಜಿ ಮಹಾರಾಜ ಸ್ವಾಮಿಗಳು, ಶ್ರೀ ವೀರೇಶಾನಂದ ಸರಸ್ವತಿ ಸ್ವಾಮಿಗಳು, ಶ್ರೀ ಮಾಧವಾನಂದ ಭಾರತೀ ಸ್ವಾಮಿಗಳು, ಶ್ರೀ ಸಚ್ಚಿದಾನಂದ ಭಾರತೀ ಸ್ವಾಮಿಗಳು, ಶ್ರೀ ವೀರೇಶಾನಂದ ಸರಸ್ವತಿ ಸ್ವಾಮಿಗಳು, ಶ್ರೀ ವಾಮನಾಶ್ರಮ ಸ್ವಾಮಿಗಳು, ಶ್ರೀ ಕಾಳಹಸ್ತೇಂದ್ರ ಸರಸ್ವತಿ ಸ್ವಾಮಿಗಳು ಉಪಸ್ಥಿತರಿದ್ದರು.**

# ಅಶ್ಲೀಲ ಪದ ಬಳಕೆ: ಸಿಟಿ ರವಿಗೆ ಬೆದರಿಕೆ ಪತ್ರ

**ಚಿಕ್ಕಮಗಳೂರು:** ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್‌ಗೆ ಕ್ಷಮೆ ಕೇಳದಿದ್ದರೆ ಹತ್ಯೆ ಮಾಡುವುದಾಗಿ ಬಿಜೆಪಿ ವಿಧಾನಪರಿಷತ್ ಸದಸ್ಯ ಸಿಟಿ ರವಿಗೆ ಅನಾಮಧೇಯ ವ್ಯಕ್ತಿಗಳು ಬೆದರಿಕೆ ಪತ್ರ ಬಂದಿದೆ."ಲಕ್ಷ್ಮೀ ಹೆಬ್ಬಾಳ್ಕರ್‌ಗೆ ಕ್ಷಮೆ ಕೇಳದಿದ್ದರೆ ನಿಮ್ಮನ್ನು ಮತ್ತು ನಿಮ್ಮ ಪುತ್ರ ಸೂರ್ಯನನ್ನು ಹತ್ಯೆ ಮಾಡಲಾಗುತ್ತದೆ" ಎಂದು ಪತ್ರದಲ್ಲಿ ಬರೆಯಲಾಗಿದೆ ಎಂದು ಸಿಟಿ ರವಿ ಪಿಎ ಚೇತನ್ ಬಸವನಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಈ ಸಂಬಂಧ ಚಿಕ್ಕಮಗಳೂರು ಪೊಲೀಸ್ ವರಿಷ್ಠಾಧಿಕಾರಿ ವಿಕ್ರಂ ಆಮ್ಟೆ ಮಾತನಾಡಿ, ಅಪರಿಚಿತ ವ್ಯಕ್ತಿಗಳಿಂದ ಎಂಎಲ್‌ಸಿ ಸಿ.ಟಿ.ರವಿ ಅವರಿಗೆ ಬೆದರಿಕೆ ಪತ್ರ ಬಂದಿದೆ. ಈ ಸಂಬಂಧ ಬಸವನಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮುಂಜಾಗ್ರತಾ ಕ್ರಮವಾಗಿ ಸಿ.ಟಿ.ರವಿ ಅವರಿಗೆ ಹೆಚ್ಚಿನ ಭದ್ರತೆ ನೀಡುತ್ತೇವೆ ಎಂದು ಹೇಳಿದರು.

**ಬೆದರಿಕೆ ಪತ್ರದಲ್ಲಿ ಏನಿದೆ?:** 15 ದಿನದೊಳಗೆ ಚಿಕ್ಕಮಗಳೂರಿನಿಂದ ಬಂದು ಬೆಳಗಾವಿ ಅಭಿನೇತ್ರಿಯ ಕೈಕಾಲು ಹಿಡಿದು ಕ್ಷಮೆ ಕೇಳಬೇಕು. ಇಲ್ಲದಿದ್ದರೆ ನಿಮ್ಮ ಮನೆಗೆ ನುಗ್ಗಿ ನಿಮ್ಮ ಕೈಕಾಲು ಮುರಿದು ಸಾಯಿಸುತ್ತೇವೆ. ನಿನ್ನ ಮಗನನ್ನು ಸಾಯಿಸುತ್ತೇವೆ ಹುಷಾರಾಗಿ ಇರಿ ಎಂಬ ಬೆದರಿಕೆ ಪತ್ರ ಬಂದಿದೆ.

# ಉಚಿತ ತರಬೇತಿ ಕೇಂದ್ರದ ಉಪಯೋಗಪಡೆದುಕೊಳ್ಳಿ:ರಾಜೀವ್‌ಗೌಡ

**ಶಿಡ್ಲಘಟ್ಟ:** ಉದ್ಯೋಗಾಕಾಂಕ್ಷಿ ಅಭ್ಯರ್ಥಿಗಳನ್ನು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿಗೊಳಿಸಲು ಶಿಡ್ಲಘಟ್ಟದಲ್ಲಿ ಉಚಿತ ತರಬೇತಿ ಕೇಂದ್ರವನ್ನು ತೆರೆಯಲು ಎಬಿಡಿ ಟ್ರಸ್ಟ್ ಹಾಗೂ ಸಾಧನಾ ಐಎಎಸ್ ಕೋಚಿಂಗ್ ಸೆಂಟರ್ ಮುಂದಾಗಿದ್ದು ಪದವೀಧರರು, ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸಿರುವ ನೂರಾರು ಉದ್ಯೋಗಾಕಾಂಕ್ಷಿಗಳಲ್ಲಿ ಆಸೆ ಚಿಗುರಿದೆ. ನಗರದಲ್ಲಿ ತರಬೇತಿ ಕೇಂದ್ರ ಆರಂಭಿಸಿ ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಗೆ ಐಎಎಸ್, ಕೆಎಎಸ್, ಬ್ಯಾಂಕಿಂಗ್, ರೈಲ್ವೆ ಸೇರಿದಂತೆ ನಾನಾ ರೀತಿಯ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧಗೊಳಿಸಲು 6 ತಿಂಗಳ ಕಾಲ ಉಚಿತವಾಗಿ ತರಬೇತಿ ಕೇಂದ್ರ ಆರಂಭಿಸುವುದಾಗಿ ಕೆಪಿಸಿಸಿ ಸಂಯೋಜಕ ಹಾಗೂ ಎಬಿಡಿ ಟ್ರಸ್ಟ್‌ನ ಅಧ್ಯಕ್ಷರಾದ ಬಿ.ವಿ.ರಾಜೀವ್‌ಗೌಡ ಅವರು ಘೋಷಿಸಿದ್ದಾರೆ.

ನಗರದ ಕಾಂಗ್ರೆಸ್ ಭವನದಲ್ಲಿ ಬೆಂಗಳೂರಿನ ಸಾಧನಾ ಅಕಾಡೆಮಿ(ಸಾಧನಾ ಐಎಎಸ್ ಕೋಚಿಂಗ್ ಸೆಂಟರ್)ಯ ನಿರ್ದೇಶಕಿ ಡಾ.ಜ್ಯೋತಿ ಅವರೊಂದಿಗೆ ಜಂಟಿ ಸುದ್ದಿಗೋಷ್ಠಿ ನಡೆಸಿದ ಕಾಂಗ್ರೆಸ್ ಮುಖಂಡ ರಾಜೀವ್‌ಗೌಡ ಅವರು, ಫೆ.20 ರಿಂದ ಉಚಿತ ತರಬೇತಿ ಕೇಂದ್ರವನ್ನು ಆರಂಭಿಸುವುದಾಗಿ ಅವರು ತಿಳಿಸಿದರು.

ಜ.10ರಿಂದ ಅರ್ಜಿಗಳನ್ನು ಸ್ವೀಕರಿಸಲಿದ್ದು ಜ.30ರವರೆಗೂ ಅರ್ಜಿಗಳನ್ನು ಸಲ್ಲಿಸಬಹುದು. ನಂತರದಲ್ಲಿ ದಾಖಲೆಗಳ ಪರಿಶೀಲನೆ ನಡೆಸಿ ಅರ್ಹರನ್ನು ಆಯ್ಕೆ ಮಾಡಲಾಗುವುದು. ಫೆ.20ರಂದು ತರಬೇತಿ ಕೇಂದ್ರವನ್ನು ಉದ್ಘಾಟಿಸಿ ಅಂದಿನಿಂದಲೇ ಉಚಿತ ತರಬೇತಿಯನ್ನು ಆರಂಭಿಸಲಾಗುವುದು ಎಂದು ವಿವರಿಸಿದರು.

ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಾಸಿಗಳಾಗಿದ್ದು ಐಎಎಸ್, ಕೆಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಬೇಕೆಂದುಕೊಂಡಿರುವ ಅರ್ಹರು ಹಾಗೂ ಆಸಕ್ತರು ಅರ್ಜಿ ಹಾಕಿಕೊಳ್ಳಬಹುದು. 6 ತಿಂಗಳ ಕಾಲ ಉಚಿತವಾಗಿ ತರಬೇತಿ ನೀಡಿ ಪ್ರಮಾಣ ಪತ್ರ ನೀಡಲಾಗುವುದು. ಎಷ್ಟೇ ಮಂದಿ ಅರ್ಜಿ ಹಾಕಿದರೂ ಅರ್ಹ ಎಲ್ಲರಿಗೂ ದಾಖಲಾತಿ ನೀಡಲಾಗುವುದು ಪ್ರತಿ ಅಭ್ಯರ್ಥಿಗೆ ಅಂದಾಜು 1 ಲಕ್ಷದಿಂದ 1.5 ಲಕ್ಷ ರೂ.ಗಳು ಖರ್ಚು ಆಗಲಿದ್ದು




ಅ?ೂ್ಟ ಮೊತ್ತವನ್ನು ನಮ್ಮ ಎಬಿಡಿ ಟ್ರಸ್ಟ್‌ನಿಂದ ಭರಿಸಲಾಗುವುದು. ಅಭ್ಯರ್ಥಿಗಳು ಯಾವುದೆ ರೀತಿಯ ಶುಲ್ಕವನ್ನು ಪಾವತಿಸುವಂತಿಲ್ಲ ಎಂದರು.

ಶಿಡ್ಲಘಟ್ಟವು ಗಡಿಭಾಗದಲ್ಲಿ ಆರ್ಥಿಕವಾಗಿ ಸಾಕ?್ಟು ಹಿಂದುಳಿದ ಪ್ರದೇಶವಾಗಿದೆ ಸಾಕ?್ಟು ಪ್ರತಿಭಾವಂತರು ಇದ್ದರೂ ಅವಕಾಶ,ಮಾರ್ಗದರ್ಶನ ಹಾಗೂ ತರಬೇತಿಯ ಕೊರತೆಯಿಂದ ಅವಕಾಶ ವಂಚಿತರಾಗಿದ್ದಾರೆ.

ಬೆಂಗಳೂರಿಗೆ ಹೋಗಿ ಲಕ್ಷ ಲಕ್ಷ ಶುಲ್ಕ ಕಟ್ಟಿ ತರಬೇತಿ ಪಡೆಯುವಂತ ಆರ್ಥಿಕ ಸ್ಥಿತಿಯಲ್ಲೂ ಇಲ್ಲ ಹಾಗಾಗಿ ಅಂತಹ ಎಲ್ಲರಿಗೂ ಶಿಡ್ಲಘಟ್ಟದಲ್ಲೆ ತರಬೇತಿ ಕೇಂದ್ರ ತೆರೆದು ಉಚಿತವಾಗಿ ತರಬೇತಿ ನೀಡಲು ನಿರ್ಧರಿಸಿದ್ದು ಈಗಾಗಲೆ ಬೆಂಗಳೂರಿನಲ್ಲಿ ನೂರಾರು ಐಎಎಸ್, ಕೆಎಎಸ್ ಅಭ್ಯರ್ಥಿಗಳನ್ನು ತರಬೇತಿಗೊಳಿಸಿದ ಖ್ಯಾತಿಯ ಸಾಧನಾ ಐಎಎಸ್ ಕೋಚಿಂಗ್ ಸೆಂಟರ್‌ನ ಸಹಯೋಗದಲ್ಲಿ ಇಲ್ಲಿ ತರಬೇತಿ ಕೇಂದ್ರವನ್ನು ಆರಂಭಿಸಲಿದ್ದೇವೆ ಎಂದರು.

ಈ ಕ್ಷೇತ್ರದ ಜನರಿಗೆ ಶಿಕ್ಷಣ, ಆರೋಗ್ಯ ಸವಲತ್ತುಗಳನ್ನು ಒದಗಿಸಬೇಕೆಂಬ ಉದ್ದೇಶ ನನ್ನದಾಗಿದ್ದು ಈ ನಿಟ್ಟಿನಲ್ಲಿ ಈಗಾಗಲೆ 10 ಆಂಬ್ಯುಲೆನ್ಸ್‌ಗಳು ಕಾರ್ಯನಿರ್ವಹಿಸುತ್ತಿದ್ದು ಇದುವರೆಗೂ 32 ಸಾವಿರ ಮಂದಿಗೆ ತುರ್ತು ಪರಿಸ್ಥಿತಿಯಲ್ಲಿ ನೆರವು ನೀಡಲಾಗಿದೆ ಇದೀಗ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ ಆರಂಭಿಸಿದ್ದು ಅಗತ್ಯ ಇರುವ ಎಲ್ಲಾ ಆಸಕ್ತರು ಉಪಯೋಗ ಪಡೆದುಕೊಳ್ಳಿ ಎಂದು ಅವರು ಮನವಿ ಮಾಡಿದರು.

ಸಾಧನಾ ಅಕಾಡೆಮಿಯ ನಿರ್ದೇಶಕಿ ಡಾ.ಜ್ಯೋತಿ ಮಾತನಾಡಿ, ಇಂದಿನಿಂದ ಅರ್ಜಿಗಳನ್ನು ಸ್ವೀಕರಿಸುತ್ತಿದ್ದು ಈ ತಿಂಗಳ ಅಂತ್ಯದವರೆಗೂ ಅರ್ಜಿ ಸಲ್ಲಿಸಲು ಅವಕಾಶವಿದೆ,ಅಂತಿಮ ವ?ರ್ದ ಪದವಿ ಓದುತ್ತಿರುವ, ಪದವಿ ಮುಗಿಸಿದ ಮತ್ತು ಸ್ಪರ್ಧಾತ್ಮಕ ಪರೀಕ್ಷೆ ಬರೆಯುವಂತ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸಬಹುದು.

ದಾಖಲಾತಿ ಪರಿಶೀಲಿಸಿ ಅರ್ಹ ಮತ್ತು ಆಸಕ್ತರಿಗೆ 6 ತಿಂಗಳ ಕಾಲ ತರಬೇತಿ ನೀಡಿ ಪ್ರಮಾಣ ಪತ್ರ ನೀಡುತ್ತೇವೆ, ಇದಕ್ಕೆ ತಗಲುವ ಸಂಪೂರ್ಣ ವೆಚ್ಚವನ್ನು ಎಬಿಡಿ ಟ್ರಸ್ಟ್‌ನ ರಾಜೀವ್‌ಗೌಡ ಅವರು ಭರಿಸಲಿದ್ದಾರೆ ಎಂದರು.

ಅರ್ಜಿಗಳ ಸ್ವೀಕಾರ, ದಾಖಲೆಗಳ ಪರಿಶೀಲನೆ ನಂತರ ಹೆಚ್ಚಿನ ವಿವರಗಳನ್ನು ಆಯ್ಕೆಯಾದ ಅಭ್ಯರ್ಥಿಗಳಿಗೆ ನೀಡಲಾಗುವುದು ಎಂದು ಹೇಳಿದರು. ಪ್ರತಿ ವಾರಕ್ಕೊಮ್ಮೆ ನುರಿತ ತರಬೇತಿದಾರರು, ಐಎಎಸ್, ಐಪಿಎಸ್, ಕೆಎಎಸ್ ಅಧಿಕಾರಿಗಳ, ತಜ್ಞರನ್ನು ಕರೆಸಿ ಅವರಿಂದಲೆ ಮಾರ್ಗದರ್ಶನವನ್ನು ಕೂಡ ನೀಡಲಾಗುವುದು ಎಂದು ವಿವರಿಸಿದರು.

ಹೆಚ್ಚಿನ ವಿವರಗಳಿಗೆ 9900100616, 9008207843 ಸಂಪರ್ಕಿಸಲು ಮನವಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ಸಾಧನಾ ಅಕಾಡೆಮಿಯ ಮಹದೇವ್ ಮತ್ತಿತರರು ಹಾಜರಿದ್ದರು.

# ವೈಕುಂಠ ದ್ವಾರದ ಮೂಲಕ ದೇವರ ದರ್ಶನ



**ಚೇಳೂರು:** ಶುಕ್ರವಾರ ತಾಲ್ಲೂಕಿನ ಎಲ್ಲೆಡೆ ವೈಕುಂಠ ಏಕಾದಶಿ ಸಂಭ್ರಮ ಮನೆಮಾಡಿತ್ತು. ಭಕ್ತರು ಮುಂಜಾನೆಯೆ ದೇವಸ್ಥಾನಕ್ಕೆ ತೆರಳಿ ದೇವರ ದರ್ಶನ ಪಡೆದು ಧನ್ಯರಾದರು.

ಏಕಾದಶಿ ಪ್ರಯುಕ್ತ ದೇವಸ್ಥಾನಗಳಲ್ಲಿ ವಿಶೇಷ ಅಲಂಕಾರ ಮಾಡಲಾಗಿತ್ತು. ವೈಕುಂಠ ದ್ವಾರಗಳನ್ನು ನಿರ್ಮಿಸಿ, ದೇವರ ಮೂರ್ತಿಗಳಿಗೆ ಹೂವು ಹಾಗೂ ಆಭರಣಗಳಿಂದ ಸಿಂಗರಿಸಿ,ಲಡ್ಡು, ಪಾಯಸವನ್ನು ಇನ್ನಿತರ ಅನ್ನ ಪ್ರಸಾದ ರೂಪದಲ್ಲಿ ವಿತರಿಸಲಾಯಿತು.

ದೇವರಿಗೆ ಪಂಚಾಮೃತ ಅಭಿಷೇಕ, ರುದ್ರಾಭಿಷೇಕ, ವೈಕುಂಠ ದ್ವಾರದ ಪೂಜೆ, ಅಷ್ಟೋತ್ತರ ಶತನಾಮಾವಳಿ ಸೇವೆ, ಮಂತ್ರ ಪುಷ್ಪ ಸೇವೆ, ಅಷ್ಟಾವಧಾನ ಸೇವೆಗಳನ್ನು ಮಾಡಲಾಯಿತು. ತಾಲ್ಲೂಕಿನ ಏನಿಗದಲೆ, ಚೀಗಟೀಗಲ ಗುಟ್ಟ ಹಾಗೂ ಚೇಳೂರು ಪಟ್ಟಣದ ಕನ್ನಿಕಾ ಪರಮೇಶ್ವರ ದೇವಾಲಯಗಳಲ್ಲಿ ವೈಕುಂಠ ಏಕಾದಶಿ ಪ್ರಯುಕ್ತ ವಿಶೇಷ ಪೂಜೆ ಆಯೋಜಿಸಲಾಗಿತ್ತು. ದೇಗುಲದಲ್ಲಿ ವೈಕುಂಠ ದ್ವಾರ ನಿರ್ಮಾಣ ಮಾಡಲಾಗಿದ್ದು, ಭಕ್ತರು ವೈಕುಂಠ ದ್ವಾರದ ಮೂಲಕ ಆಗಮಿಸಿ ಗೋವಿಂದ ನಾಮ ಸ್ಮರಣೆ ಯೊಂದಿಗೆ ದೇವರ ದರ್ಶನ ಮಾಡಿದರು.

ವೈಕುಂಠ ದ್ವಾರದ ಮೂಲಕ ದೇವರ ದರ್ಶನ ಪಡೆದರೆ ವಿಶೇಷ ಪುಣ್ಯ ಪ್ರಾಪ್ತಿಯಾಗುತ್ತದೆ ಎಂಬ ನಂಬಿಕೆ ಭಕ್ತರಲ್ಲಿದೆ.ವೈಕುಂಠ ಏಕಾದಶಿಯ ದಿನ ಬಹಳ?್ಟು ಭಕ್ತರು ಉಪವಾಸವಿದ್ದು, ದೇವರ ಪೂಜೆ ಕೈಗೊಳ್ಳುತ್ತಾರೆ.

ಸಾಲು ಸಾಲಾಗಿ ನೂರಾರು ಭಕ್ತರು ವಿವಿಧ ದೇವಾಲಯಗಳಲ್ಲಿ ಸಾಲುಗಟ್ಟಿ ದೇವರ ದರ್ಶನ ಪ್ ಡ್ ೦ು ು ತ್ರಿ ರ್ ು ವ್ರು ದ್ ು ಸಾಮಾನ್ಯವಾಗಿ ಕಂಡು ಬಂತು.


# ಇಎಸ್‌ಐ ಆಸ್ಪತ್ರೆ ಮಂಜೂರು ಮಾಡುವಂತೆ ಮನವಿ

**ಮಾಲೂರು:** ಪಟ್ಟಣಕ್ಕೆ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ, ಸಿಬ್ಬಂದಿ ಮತ್ತು ಇಎಸ್‌ಐ ಆಸ್ಪತ್ರೆ ಮಂಜೂರು ಮಾಡುವಂತೆ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರೊ.ಕೃಷ್ಣಪ್ಪ ಬಣದವತಿಯಿಂದ ಸಚಿವ ದೀನೇಶ್ ಗುಂಡೂರಾವ್‌ಗೆ ಮನವಿ ಸಲ್ಲಿಸಿದರು.

ಮಾಲೂರು ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಗುರುವಾರ ಭೇಟಿ ನೀಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ರವರಿಗೆ ಕದಸಂಸ ಜಿಲ್ಲಾ ಸಂಘಟನಾ ಸಂಚಾಲಕ ಚವ್ವನಹಳ್ಳಿ ವಿಜಿ ರವರ ನೇತೃತ್ವದಲ್ಲಿ ಮನವಿ ಸಲ್ಲಿಸಿದರು,

ತಾಲ್ಲೂಕು ಸಂಚಾಲಕ ಎಸ್.ಎಂ.ವೆಂಕಟೇಶ್ ಮಾತನಾಡಿ, ಮಾಲೂರು ತಾಲ್ಲೂಕಿನಲ್ಲಿ ಕೈಗಾರಿಕೆಗಳು ಹೆಚ್ಚಾಗಿದ್ದು, ಉದ್ಯೋಗಕ್ಕಾಗಿ ಬೇರೆ ಬೇರೆ ರಾಜ್ಯಗಳಿಂದ ಜನ ಸಾಮಾನ್ಯರು ವಲಸೆ ಬರುತಿದ್ದು, ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳ ಸಂಖ್ಯೆ ದಿನದಿಂದ ಹೆಚ್ಚಾಗುತ್ತಿದ್ದು ಆಸ್ಪತ್ರೆಯಲ್ಲಿ ಖಾಯಂ ಡಿ ಮತ್ತು ಸಿ ವರ್ಗದ ಸಿಬ್ಬಂದಿ, ಪ್ಲಾನಿಂಗ್, ವೈದ್ಯರ ನೇಮಕಾತಿ ಮಾಡಿ, ಸಿಬ್ಬಂದಿ ಕೊರತೆ ನೀಲಸಬೇಕು.ಎಂಅರ್‌ಐ, ಸಿಟಿ ಸ್ಕ್ಯಾನಿಂಗ್, ಅಲ್ಟ್ರಾ ಸೌಂಡ್ ಸ್ಕ್ಯಾನಿಂಗ್ ವ್ಯವಸ್ಥೆ ಕಲ್ಪಿಸಿ ಅದಕ್ಕೆ ಬೇಕಾದ ತಜ್ಞರನ್ನು ನೇಮಕ ಮಾಡಿ ಮಾಲೂರು ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಮಲ್ಟಿ ಸ್ಪೆಷಾಲಿಟಿ ಮತ್ತು ಇ.ಎಸ್.ಐ ಆಸ್ಪತ್ರೆಗಳ ಮಂಜೂರು ಮಾಡಿ ಉನ್ನತಿಕರಿಸಬೇಕೆಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಶಾಸಕ ಕೆ.ವೈ ನಂಜೇಗೌಡರ ಸಮ್ಮುಖದಲ್ಲಿ ಮನವಿ ಸಲ್ಲಿಸುತ್ತಿರುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಕ.ದ.ಸ.ಸಂ ತಿರುಮಲೇಶ್, ಯಶವಂತಪುರ ಮುನಿರಾಜು,ಗಾಂಧಿವೃತ್ತ ಬಾಬು, ಹಾರೋಹಳ್ಳಿ ಮುನಿರಾಜು ಇತರರು ಹಾಜರಿದ್ದರು.



# ಪಿಎಲ್‌ಡಿ ಬ್ಯಾಂಕ್‌ಗೆ ಬೀಗ ಜಡಿದ ರೈತಸಂಘ ಹಾಗೂ ಹಸಿರುಸೇನೆ



**ಶಿಡ್ಲಘಟ್ಟ:** ನಗರದ ಪ್ರಾಥಮಿಕ ಕೃಷಿ ಮತ್ತು ಭೂ ಅಭಿವೃದ್ಧಿ ಬ್ಯಾಂಕ್ (ಪಿ.ಎಲ್.ಡಿ.ಬ್ಯಾಂಕ್)ನ ಕಚೇರಿಗೆ ಬೀಗ ಜಡಿದು ರಾಜ್ಯ ರೈತಸಂಘ ಹಾಗೂ ಹಸಿರುಸೇನೆ ಸದಸ್ಯರು ಪ್ರತಿಭಟಿಸಿದರು.

ರೈತ ಸಂಘ ಹಾಗೂ ಹಸಿರು ಸೇನೆ ರಾಜ್ಯ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಬೈರೇಗೌಡ ಮಾತನಾಡಿ, ಪಿಎಲ್‌ಡಿ ಬ್ಯಾಂಕ್‌ನಲ್ಲಿ 6,150 ರೈತರು ಸದಸ್ಯತ್ವ ಪಡೆದಿದ್ದಾರೆ. ಹಲವರು ಸಾಲ ಮಾಡಿದ್ದರೆ, ಇನ್ನ?್ಟು ಮಂದಿ ಠೇವಣಿ ಇಟ್ಟಿದ್ದಾರ ಇದೀಗ ಬ್ಯಾಂಕ್‌ನ ಆಡಳಿತ ಮಂಡಳಿಗೆ ಐದು ವ?ರ್ಗಳ ಅವಧಿಗೆ ಚುನಾವಣೆ ನಿರ್ದೇಶಕರ ಸ್ಥಾನಗಳಿಗಾಗಿ ಘೋ?ಣೆ ಮಾಡಿದಗದು ಮತದಾರರ ಸಂಖ್ಯೆಯನ್ನು 6,150ರಿಂದ 950ಕ್ಕೆ ಇಳಿಸಿ ಉಳಿದವರಿಗೆ ಮತದಾನದ ಹಕ್ಕನ್ನು ಕಡಿತಗೊಳಿಸಿದ್ದಾರೆ.

ಈ ಬಗ್ಗೆ ಅಧಿಕಾರಿಗಳಿಗೆ ಕ್ರಮ ಕೈಗೊಳ್ಳಲು ತಿಳಿಸಿದ್ದರೂ ಬೇಜವಾಬ್ದಾರಿಯಾಗಿ ನಡೆದುಕೊಂಡಿದ್ದರಿಂದ ಬ್ಯಾಂಕ್ ಕಚೇರಿಗೆ ಬೀಗ ಹಾಕಿದ್ದೇವೆ ಎಂದು ಹೇಳಿದರು.

ಬ್ಯಾಂಕ್ ವ್ಯವಸ್ಥಾಪಕ ಶ್ರೀನಾಥ್ ಮಾತನಾಡಿ, ಜನವರಿ 15 ರಂದು ಉನ್ನತ ಅಧಿಕಾರಿಗಳನ್ನು ಕರೆಯಿಸಿ ನಿಮ್ಮ ಬೇಡಿಕೆಗಳನ್ನು ಈಡೇರಿಸುವುದಾಗಿ ಅವರು ಭರವಸೆ ನೀಡಿದರು.

ಬ್ಯಾಂಕ್ ವ್ಯವಹಾರದಲ್ಲಿ ಐದು ಕೋಟಿ ರೂ.ಗಳು ವ್ಯತ್ಯಾಸಗಳು ಬಂದಿದ್ದು, ಅದರ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕಿದೆ ರೈತರ ಹಣ ದುರುಪಯೋಗ ಆಗುವುದು ಅಕ್ಷಮ್ಯ ಅಪರಾಧ ರೈತರ ಮತದಾನದ ಹಕ್ಕನ್ನು ಊರ್ಜಿತಗೊಳಿಸಿ, ಇಲ್ಲವಾದಲ್ಲಿ ?ೇರು ಹಣ ವಾಪಸ್ ನೀಡುವಂತೆ ರಾಜ್ಯ ರೈತಸಂಘದ ಕಾರ್ಯಾದಕ್ಷ ಭಕ್ತರಹಳ್ಳಿ ಬೈರೇಗೌಡ ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರಾಜ್ಯ ರೈತಸಂಘ ಹಾಗೂ ಹಸಿರುಸೇನೆ ತಾಲ್ಲೂಕು ಅಧ್ಯಕ್ಷ ತಾದೂರು ಮಂಜುನಾಥ್, ಉಪಾಧ್ಯಕ್ಷ ವೀರಾಪುರ ಮುನಿನಂಜಪ್ಪ, ಪದಾಧಿಕಾರಿಗಳಾದ ವೇಣುಗೋಪಾಲ್,ಗುಡಿಹಳ್ಳಿ ಕೆಂಪಣ್ಣ, ಹಿತ್ತಲಹಳ್ಳಿ ರಮೇಶ್, ಬಸವರಾಜ್ ಮುಂತಾದವರು ಹಾಜರಿದ್ದರು.

# ನಿವೃತ್ತ ಸರ್ಕಾರಿ ನೌಕರರ ಸಂಘದ ಕ್ಯಾಲೆಂಡರ್ ಬಿಡುಗಡೆ

**ಯಳಂದೂರು:** ಪಟ್ಟಣದ ಸರ್ಕಾರಿ ನೌಕರರ ಭವನದಲ್ಲಿ ಈಚೆಗೆ ರಾಜ್ಯ ನಿವೃತ್ತ ಸರ್ಕಾರಿ ನೌಕರರ ಸಂಘದ ತಾಲೂಕು ಘಟಕದ ವತಿಯಿಂದ 2025 ನೇ ಸಾಲಿನ ದಿನದರ್ಶಿಕೆಯನ್ನು ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಸಂಘದ ಗೌರವಾಧ್ಯಕ್ಷ ರುದ್ರಯ್ಯ ಮಾತನಾಡಿ, ನಮ್ಮ ಸಂಘದ ವತಿಯಿಂದ ನಿವೃತ್ತ ಸರ್ಕಾರಿ ನೌಕರರಿಗೆ ಸರ್ಕಾರದಿಂದ ಲಭಿಸುವ ಸೌಲಭ್ಯಗಳನ್ನು ಪಡೆದುಕೊಳ್ಳಲು ಹೆಚ್ಚು ಆಸಕ್ತಿ ವಹಿಸಲಾಗುವುದು. ಸಂಘದಲ್ಲಿ ಅನೇಕರು ವಯೋವೃದ್ಧರು ಇದ್ದಾರೆ. ಇವರು ಕಚೇರಿ ಕೆಲಸಗಳು ಸೇರಿದಂತೆ ಇತರೆ ಕೆಲಸಗಳಿಗೆ ತೆರಳಲು ಕಷ್ಟವಾಗುತ್ತದೆ. ಇವರ ನೆರವಿಗೆ ಸಂಘವು ಸದಾ ಸಿದ್ಧವಿರುತ್ತದೆ. ಅಲ್ಲದೆ ಇವರಿಗೆ ಬೇಕಾದ ಎಲ್ಲಾ ನೆರವನ್ನು ನೀಡಲು ಹೆಚ್ಚಿನ ಕಾಳಜಿ ವಹಿಸಲಾಗುತ್ತದೆ.



ಇದರ ಜೊತೆಗೆ ಹಲವು ಸಾಮಾಜಿಕ ಕಾರ್ಯಗಳು, ಜನಪರ ಕೆಲಸಗಳನ್ನು ಮಾಡಲು ಸಂಘದ ಎಲ್ಲಾ ಸದಸ್ಯರೂ ನಮ್ಮೊಂದಿಗೆ ಕೈ ಜೋಡಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ನಾಗೇಶ್, ತಾಲೂಕು ಅಧ್ಯಕ್ಷ ನಾರಾಯಣಸ್ವಾಮಿ ಉಪಾಧ್ಯಕ್ಷ ರಾಮಣ್ಣ, ಕಾರ್ಯದರ್ಶಿ ರಾಮಸ್ವಾಮಿ ಸದಸ್ಯರಾದ ವೈ.ಆರ್. ರಂಗಸ್ವಾಮಿ, ಪದ್ಮಾಕ್ಷಿ, ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿ ರವಿ ಸೇರಿದಂತೆ ಅನೇಕರು ಹಾಜರಿದ್ದರು.

ಯಳಂದೂರು ಪಟ್ಟಣ ಸರ್ಕಾರಿ ನೌಕರರ ಭವನದಲ್ಲಿ ಈಚೆಗೆ ನಿವೃತ್ತ ಸರ್ಕಾರಿ ನೌಕರರ ಸಂಘದ 2025 ರ ಕ್ಯಾಲೆಂಡರ್‌ನ್ನು ಬಿಡುಗಡೆ ಮಡಲಾಯಿತು. ಜಿಲ್ಲಾಧ್ಯಕ್ಷ ನಾಗೇಶ್ ತಾಲೂಕು ಗೌರವಾಧ್ಯಕ್ಷ ರುದ್ರಯ್ಯ, ಅಧ್ಯಕ್ಷ ನಾರಾಯಣಸ್ವಾಮಿ ಸೇರಿದಂತೆ ಅನೇಕರು ಇದ್ದರು.

# ಬಿಳಿಗಿರಿರಂಗನಾಥಸ್ವಾಮಿಯವರ ಸಂಕ್ರಾಂತಿ ರಥೋತ್ಸವ ಜ.15ರಂದು

**ಚಾಮರಾಜನಗರ:** ಯಳಂದೂರು ತಾಲೂಕಿನ ಬಿಳಿಗಿರಿರಂಗನ ಬೆಟ್ಟದ ಶ್ರೀ ಬಿಳಿಗಿರಿ ರಂಗನಾಥಸ್ವಾಮಿಯವರ ಸಂಕ್ರಾಂತಿ ರಥೋತ್ಸವ (ಚಿಕ್ಕಜಾತ್ರೆ) ಹಾಗೂ ಇದರ ಅಂಗವಾಗಿ ವಿವಿಧ ಪೂಜಾ ಕೈಂಕರ್ಯಗಳು ಜ.12ರಿಂದ 17 ರವರೆಗೆ ನಡೆಯಲಿದೆ.

ಜನವರಿ 12ರಂದು ಅಂಕುರಾರ್ಪಣ ನಂತರ ರಾತ್ರಿ ಕೊಠಾರೋತ್ಸವ, 13ರಂದು ಹಗಲು ಸರ್ವತ್ರ ಅಭಿಷೇಕ ಧ್ವಜಾರೋಹಣ ರಾತ್ರಿ ಕೊಠಾರೋತ್ಸವ, 14ರಂದು ಸ್ವರ್ಗದ ಬಾಗಿಲು ತೆರೆಯುವುದು ರಾತ್ರಿ 7.30 ಗಂಟೆಗೆ ನಂತರ ಕೊಠಾರೋತ್ಸವ ಜರುಗಲಿದೆ.

ಜನವರಿ 15ರಂದು ಬೆಳಿಗ್ಗೆ 11.55 ರಿಂದ 12.06 ಗಂಟೆ ಒಳಗೆ ಸಲ್ಲುವ ಶುಭ ಮೀನಾ ಲಗ್ನದ ಮೀನಗುರು ನವಾಂಶದ ಶುಭ ಮುಹೂರ್ತದಲ್ಲಿ ರಥಾರೋಹಣ ಮಹೋತ್ಸವ ನಡೆಯಲಿದೆ. ರಾತ್ರಿ ಸಂಧಾನೋತ್ಸವ ಪಾರುವಾಟೆ ಮಂಟಪೋತ್ಸವ, ಮೋಹಿನಿ ಅಲಂಕಾರಸೇವೆ ನಡೆಯಲಿದೆ.

ಜ.16ರಂದು ಸೇವಾರ್ಥ ಗರುಡೋತ್ಸವ ರಾತ್ರಿ ರಂಗ ಮಂಟಪಪೋತ್ಸವ ಶಯನೋತ್ಸವ, 17ರಂದು ಸಂಧಾನಸೇವೆ, ಅವಭೃತಮಂಗಳಸ್ನಾನ ಧ್ವಜಾರೋಹಣ ನೆರವೇರಲಿದೆ ಎಂದು ಪ್ರಕಟಣೆ ತಿಳಿಸಿದೆ.

# ವಿಶ್ವಕರ್ಮರ ಕುಲಕಸುಬನ್ನು ಮುಂದಿನ ಪೀಳಿಗೆಗೆ ಉಳಿಸಿ



**ಶಿಡ್ಲಘಟ್ಟ:** ನಶಿಸಿ ಹೋಗುತ್ತಿರುವ ವಿಶ್ವಕರ್ಮರ ಕುಲಕಸುಬನ್ನು ಮುಂದಿನ ಪೀಳಿಗೆಗೆ ಉಳಿಸಿ, ಬೆಳೆಸಿ, ಮುಂದುವರಿಸಲು ಎಲ್ಲರೂ ಶ್ರಮಿಸಬೇಕು ಎಂದು ತಹಸೀಲ್ದಾರ್ ಬಿ.ಎನ್.ಸ್ವಾಮಿ ತಿಳಿಸಿದರು.

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣೆ ಸಮಿತಿ ಹಾಗೂ ತಾಲೂಕು ಆಡಳಿತ ವತಿಯಿಂದ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಶಿಲ್ಪಕಲೆಗೆ ಅಮರ ಜಕಣಾಚಾರಿ ಅವರು ನೀಡಿರುವ ಕೊಡುಗೆ ಅಪಾರ,ಬೇಲೂರು, ಹಳೇಬೀಡು, ಸೋಮನಾಥಪುರ ದೇವಾಲಯ ಗಳಲ್ಲಿನ ಶಿಲ್ಪಕಲೆ ವಿಶ್ವಕರ್ಮರ ಪ್ರಸ್ತುತತೆಯನ್ನು ಬಿಂಬಿಸುತ್ತಿದೆ ಎಂದರು. ಜಕಣಾಚಾರಿ ತಮ್ಮ ಜೀವನವನ್ನೇ ಶಿಲ್ಪಕಲೆಗಾಗಿ ಮುಡಿಪಿಟ್ಟಿದ್ದವರು ಅವರ ಕೆತ್ತನೆಯ ಬೇಲೂರಿನ ಚನ್ನಕೇಶವ ದೇವಾಲಯ ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಸಿದ್ಧಿ ಪಡೆದಿದೆ, ಅಮರ ಶಿಲ್ಪಿ ಜಕಣಾಚಾರಿ ಅವರ ಪರಂಪರೆಯನ್ನು ಉಳಿಸಿ ಬೆಳೆಸಬೇಕಿದೆ ಎಂದು ನುಡಿದರು.

ಈ ಸಂದರ್ಭದಲ್ಲಿ ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ತಾಲ್ಲೂಕು ಅಧ್ಯಕ್ಷ ಅಮರನಾರಾಯಣಾಚಾರಿ, ಕಾಳಿಕಾಂಭ ಕಮತೇಶ್ವರ ದೇವಾಲಯ ಸಮಿತಿ ಅಧ್ಯಕ್ಷ ಮುನಿರತ್ನಮಾಚಾರ್, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎ.ನರೇಂದ್ರಕುಮಾರ್ ಮತ್ತಿತರರು ಪಾಲ್ಗೊಂಡಿದ್ದರು.

# ಚಿಕ್ಕಲ್ಲೂರು ಜಾತ್ರೆ : ಸೆಕ್ಟರ್ ಅಧಿಕಾರಿಗಳ ನಿಯೋಜಿಸಿ: ಡಿಸಿ ಆದೇಶ

ಚಾಮರಾಜನಗರ: ಕೊಳ್ಳೇಗಾಲ ತಾಲೂಕಿನ ಶ್ರೀ ಕ್ಷೇತ್ರ ಚಿಕ್ಕಲ್ಲೂರು ಘನನೀಲ ಸಿದ್ದಾಪ್ಪಾಜಿಯವರ ಜಾತ್ರಾ ಮಹೋತ್ಸವು ಜನವರಿ 13 ರಿಂದ 17ರವರೆಗೆ ನಡೆಯಲಿದ್ದು, ಪ್ರಾಣಿ ಬಲಿ ನಿಷೇಧದ ಬಗ್ಗೆ ಸಾರ್ವಜನಿಕರಿಗೆ ತಿಳಿವಳಿಕೆ ನೀಡಿ ಕ್ರಮ ಕೈಗೊಳ್ಳುವ ಸಮಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆಯಾಗುವ ಘಟನೆಗಳು ಸಂಭವಿಸಿದರೆ ತಕ್ಷಣ ಆದೇಶಗಳನ್ನು ಮಾಡುವ ಸಲುವಾಗಿ ವಿವಿಧ ಅಧಿಕಾರಿಗಳನ್ನು ಸೆಕ್ಟರ್ ಆಫೀಸರ್‌ಗಳನ್ನಾಗಿ ನಿಯೋಜಿಸಿ ಕರ್ತವ್ಯ ನಿರ್ವಹಿಸಲು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ.

ಕರ್ನಾಟಕ ಪ್ರಾಣಿ ಬಲಿ ಪ್ರತಿಬಂಧಕ ಅಧಿನಿಯಮ ಅನ್ವಯ ಚಿಕ್ಕಲ್ಲೂರು ಸಿದ್ದಾಪ್ಪಾಜಿರವರ ಜಾತ್ರಾ ಮಹೋತ್ಸವದಲ್ಲಿ ಜನವರಿ 13 ರಿಂದ 17ರ ಮಧ್ಯ ರಾತ್ರಿಯವರೆಗೆ ದೇವರ ಹೆಸರಿನಲ್ಲಿ ಯಾವುದೇ ರೀತಿಯ ಪ್ರಾಣಿಬಲಿ ನೀಡುವುದನ್ನು ಮತ್ತು ಮಾರಕಾಸ್ತ್ರಗಳನ್ನು ತರುವುದನ್ನು ತಡೆಗಟ್ಟಲು ಹಾಗೂ ಇದರೊಂದಿಗೆ ಹೈಕೋರ್ಟ್ ನಿರ್ದೇಶನದಂತೆ ಪ್ರಾಣಿಬಲಿಯನ್ನು ಸಂಪೂರ್ಣವಾಗಿ ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲು, ಪ್ರಾಣಿಬಲಿ ನಿಷೇಧಧ ಬಗ್ಗೆ ಸಾರ್ವಜನಿಕರಿಗೆ ತಿಳಿವಳಿಕೆ ನೀಡಿ ಕ್ರಮ ಕೈಗೊಳ್ಳುವ ಸಮಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಗೆ ಧಕ್ಕೆಯಾಗುವ ಘಟನೆಗಳು ಸಂಭವಿಸಿದರೆ ತಕ್ಷಣ ಆದೇಶಗಳನ್ನು ಮಾಡುವ ಸಲುವಾಗಿ ಕೊಳ್ಳೇಗಾಲ ಉಪವಿಭಾಗಾಧಿಕಾರಿಗಳು, ತಹಶೀಲ್ದಾರ್ ಅವರೊಂದಿಗೆ ಇನ್ನಿತರ ಅಧಿಕಾರಿಗಳನ್ನು ಹೆಚ್ಚುವರಿ ಸೆಕ್ಟರ್ ಆಫೀಸರ್‌ಗಳನ್ನಾಗಿ ವಿವಿಧ ಪ್ರದೇಶ ಸ್ಥಳಗಳಿಗೆ ನಿಯೋಜಿಸಿ ಕರ್ತವ್ಯ ನಿರ್ವಹಿಸಲು ಜಿಲ್ಲಾಧಿಕಾರಿಯವರು ಆದೇಶಿಸಿದ್ದಾರೆ.

ಚಿಕ್ಕಲ್ಲೂರು ಹೊಸಮಠದ ತೆರೆದ ಸುತ್ತಮುತ್ತಲಿನ ಪ್ರದೇಶದಲ್ಲಿ ಮೊದಲನೇ ಪಾಳಿಯಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕರಾದ ಶಿವಪ್ರಸಾದ್ (ಮೊ.ಸಂ 9448999221), ಎರಡನೇ ಪಾಳಿಯಲ್ಲಿ ಮಧ್ಯಾಹ್ನ 2 ರಿಂದ ರಾತ್ರಿ 10 ಗಂಟೆಯವರೆಗೆ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಮುನಿರಾಜು (ಮೊ.ಸಂ 8904089006), ಮೂರನೇ ಪಾಳಿಯಲ್ಲಿ ರಾತ್ರಿ 10 ರಿಂದ ಬೆಳಿಗ್ಗೆ 8 ಗಂಟೆಯವರೆಗೆ ಕೊಳ್ಳೇಗಾಲದ ಪಂಚಾಯತ್ ರಾಜ್ ಎಂಜಿನಿಯರಿಂಗ್ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಶಿವಪ್ರಕಾಶ್ (ಮೊ.ಸಂ 9632819249) ಸೆಕ್ಟರ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

ಚಿಕ್ಕಲ್ಲೂರು ಹಳೆಮಠದ ಸುತ್ತಮುತ್ತಲಿನ ಪ್ರದೇಶದಲ್ಲಿ ಮೊದಲನೇ ಪಾಳಿಯಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮೀನುಗಾರಿಕೆ ಇಲಾಖೆ ಉಪ ನಿರ್ದೇಶಕರಾದ ಮಂಜೇಶ್ವರ್ (ಮೊ.ಸಂ 9535733953), ಎರಡನೇ ಪಾಳಿಯಲ್ಲಿ ಮಧ್ಯಾಹ್ನ 2 ರಿಂದ ರಾತ್ರಿ 10 ಗಂಟೆಯವರೆಗೆ ಶ್ರೀ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ, ಜಿಲ್ಲಾ ವ್ಯವಸ್ಥಾಪಕರಾದ ವಿಜಯ್‌ಕುಮಾರ್ (ಮೊ.ಸಂ 9632034524), ಮೂರನೇ ಪಾಳಿಯಲ್ಲಿ ರಾತ್ರಿ 10 ರಿಂದ ಬೆಳಿಗ್ಗೆ 8 ಗಂಟೆಯವರೆಗೆ ಕೊಳ್ಳೇಗಾಲದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಸುಧನ್ವ (ಮೊ.ಸಂ 9590961961) ಸೆಕ್ಟರ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

ಚಿಕ್ಕಲ್ಲೂರು ಸಿದ್ದಾಪ್ಪಾಜಿ ದೇವಸ್ಥಾನದ ಸುತ್ತಮುತ್ತಲಿನ ಪ್ರದೇಶದಲ್ಲಿ ಮೊದಲನೇ ಪಾಳಿಯಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ರಾಮಚಂದ್ರ ರಾಜೇ ಅರಸ್ (ಮೊ.ಸಂ 9448999332), ಎರಡನೇ ಪಾಳಿಯಲ್ಲಿ ಮಧ್ಯಾಹ್ನ 2 ರಿಂದ ರಾತ್ರಿ 10 ಗಂಟೆಯವರೆಗೆ ಚಾಮರಾಜನಗರ ನಗರಸಭೆಯ ಪೌರಾಯುಕ್ತರು ರಾಮದಾಸ್ (ಮೊ.ಸಂ 7975996700), ಮೂರನೇ ಪಾಳಿಯಲ್ಲಿ ರಾತ್ರಿ 10 ರಿಂದ ಬೆಳಿಗ್ಗೆ 8 ಗಂಟೆಯವರೆಗೆ ಕೊಳ್ಳೇಗಾಲದ ಕೃಷಿ ಇಲಾಖೆ ಸಹಾಯಕ ಕೃಷಿ ನಿರ್ದೇಶಕರಾದ ರಂಗಸ್ವಾಮಿ (ಮೊ.ಸಂ 8277930783, 9035590436) ಸೆಕ್ಟರ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

ಕೊತ್ತನೂರು, ಬಾಣೂರು, ಸುಂಡಳ್ಳಿ ಗ್ರಾಮಗಳ ಸುತ್ತಮುತ್ತಲ ಪ್ರದೇಶದಲ್ಲಿ ಮೊದಲನೇ ಪಾಳಿಯಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಪರಿಸರ ಅಧಿಕಾರಿ ಉಮಾಶಂಕರ್ (ಮೊ.ಸಂ 9448160267), ಮಧ್ಯಾಹ್ನ 2 ರಿಂದ ರಾತ್ರಿ 10 ಗಂಟೆಯವರೆಗೆ ಎರಡನೇ ಪಾಳಿಯಲ್ಲಿ ಜಿಲ್ಲಾ ನೋಂದಣಾಧಿಕಾರಿಗಳು ಎಸ್. ಶ್ರೀಧರ್ (ಮೊ.ಸಂ 9483697649), ರಾತ್ರಿ 10 ರಿಂದ ಬೆಳಿಗ್ಗೆ 8 ಗಂಟೆಯವರೆಗೆ ಮೂರನೇ ಪಾಳಿಯಲ್ಲಿ ಕೊಳ್ಳೇಗಾಲ ತಾಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ರಾಜೇಶ್ (ಮೊ.ಸಂ 8722526412) ಸೆಕ್ಟರ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

ರಾಚಪ್ಪಾಜಿ ನಗರದ ಸುತ್ತಮುತ್ತಲ ಪ್ರದೇಶದಲ್ಲಿ ಮೊದಲನೇ ಪಾಳಿಯಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಮಂಜುನಾಥ್, (ಮೊ.ಸಂ 7259374868) ಮಧ್ಯಾಹ್ನ 2 ರಿಂದ ರಾತ್ರಿ 10 ಗಂಟೆಯವರೆಗೆ ಎರಡನೇ ಪಾಳಿಯಲ್ಲಿ ಕೊಳ್ಳೇಗಾಲ ನಗರಸಭೆ ಪೌರಾಯುಕ್ತರಾದ ರಮೇಶ್ (ಮೊ.ಸಂ 9483306166) ರಾತ್ರಿ 10 ರಿಂದ ಬೆಳಿಗ್ಗೆ 8 ಗಂಟೆಯವರೆಗೆ ಮೂರನೇ ಪಾಳಿಯಲ್ಲಿ ಹನೂರು ತಾಲೂಕು ಮಲೆ ಮಹದೇಶ್ವರ ಬೆಟ್ಟದ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಪಿ. ಸಿನ್ನಣ್ಣನ್ (ಮೊ.ಸಂ 8277313954) ಸೆಕ್ಟರ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.

ಬಂಡಳ್ಳಿ ರಸ್ತೆ ಮಾರ್ಗದ ಸುತ್ತ ಮುತ್ತಲ ಪ್ರದೇಶದಲ್ಲಿ ಬೆಳಿಗ್ಗೆ 8 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಮೊದಲನೇ ಪಾಳಿಯಲ್ಲಿ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ತಮ್ಮಣ್ಣಗೌಡ ಪಾಟೀಲ್ (ಮೊ.ಸಂ 8826045698), ಮಧ್ಯಾಹ್ನ 2 ರಿಂದ ರಾತ್ರಿ 10 ಗಂಟೆಯವರೆಗೆ ಎರಡನೇ ಪಾಳಿಯಲ್ಲಿ ಕೆ.ಆರ್.ಐ.ಡಿ.ಎಲ್ ಕಾರ್ಯಪಾಲಕ ಅಭಿಯಂತರರಾದ ಚಿಕ್ಕಲಿಂಗಯ್ಯ (ಮೊ.ಸಂ 9108252502), ರಾತ್ರಿ 10 ರಿಂದ ಬೆಳಿಗ್ಗೆ 8 ಗಂಟೆಯವರೆಗೆ ಮೂರನೇ ಪಾಳಿಯಲ್ಲಿ ಕೊಳ್ಳೇಗಾಲದ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಪುರುಷೋತ್ತಮ (ಮೊ.ಸಂ 9731443285) ಸೆಕ್ಟರ್ ಅಧಿಕಾರಿಯಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.


# 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಚಾಮರಾಜನಗರ:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯ ಹನೂರು ತಾಲೂಕಿನ ಮಂಗಲ ಗ್ರಾಮದ ಏಕಲವ್ಯ ಮಾದರಿ ವಸತಿ ಶಾಲೆಗೆ 2025–26ನೇ ಸಾಲಿಗೆ 6 ನೇ ತರಗತಿ ಪ್ರವೇಶಕ್ಕಾಗಿ 5ನೇ ತರಗತಿಯಲ್ಲಿ ವ್ಯಾಸಾಂಗ ಮಾಡುತ್ತಿರುವ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಥಿಗಳನ್ನು ಪ್ರವೇಶ ಪರೀಕ್ಷೆಯ ಮೂಲಕ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುತ್ತದೆ. ಅರ್ಜಿಯನ್ನು ಭರ್ತಿ ಮಾಡಿ ಅಗತ್ಯ ದಾಖಲಾತಿಗಳೊಂದಿಗೆ ಜನವರಿ 31 ರೊಳಗೆ ಮಂಗಲ ಗ್ರಾಮದ ಏಕಲವ್ಯ ಮಾದರಿ ವಸತಿ ಶಾಲೆಗೆ ಸಲ್ಲಿಸಬೇಕು. ಪ್ರವೇಶ ಪರೀಕ್ಷೆಯನ್ನು ಫೆಬ್ರವರಿ 17 ರಂದು ನಡೆಸಲಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಏಕಲವ್ಯ ಮಾದರಿ ವಸತಿ ಶಾಲೆಯ ಪ್ರಾಂಶುಪಾಲರಾದ ಶ್ಯಾಮ್ ಲಾಲ್ (ಮೊ.ಸಂ 9871248685), ಪಿ.ಜಿ.ಟಿ. ಶಿಕ್ಷಕರಾದ ರೇಖಾ ರಾಣಿ (ಮೊ.ನಂ 9211343432) ಅವರನ್ನು ಸಂಪರ್ಕಿಸುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿ ಬಿಂದ್ಯಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೈಕುಂಠ ಏಕಾದಶಿ: ಸಪ್ತದ್ವಾರ ದರ್ಶನ



**ಶಿಡ್ಲಘಟ್ಟ:** ನಗರದ ಹೊರ ವಲಯದ ಬೆಳ್ಳೂಟಿ ಗೇಟ್ ಬಳಿಯ ಶ್ರೀಲಕ್ಷ್ಮಿವೆಂಕಟೇಶ್ವರಸ್ವಾಮಿ ದೇವಾಲಯದಲ್ಲಿ ಶ್ರೀವೈಕುಂಠ ಏಕಾದಶಿ ಪ್ರಯುಕ್ತ ಸಪ್ತದ್ವಾರ ದರ್ಶನ ಹಾಗೂ ಶ್ರೀಲಕ್ಷ್ಮಿವೆಂಕಟೇಶ್ವರಸ್ವಾಮಿ ವೈಕುಂಠ ಏಕಾದಶಿ ಮಹೋತ್ಸವವನ್ನು ಹಮ್ಮಿಕೊಳ್ಳಲಾಗಿತ್ತು.

ಬೆಳಿಗ್ಗೆ 6.30ಕ್ಕೆ ವೈಕುಂಠ ದ್ವಾರಪೂಜೆ, ಮಹಾಮಂಗಳಾರತಿ, ವೈಕುಂಠ ದ್ವಾರದರ್ಶನ ಹಾಗೂ ಶ್ರೀ ಲಕ್ಷ್ಮಿವೆಂಕಟೇಶ್ವರಸ್ವಾಮಿಗೆ ವಿಶೇ? ಹೂವಿನ ಅಲಂಕಾರ, ದೇವಾಲಯಕ್ಕೆ ವಿದ್ಯುತ್ ದೀಪಾಲಂಕಾರ, ದೇವಾಲಯಕ್ಕೆ ಬಂದಂತಹ ಭಕ್ತಾದಿಗಳಿಗೆ ತೀರ್ಥ ಪ್ರಸಾದ ವಿನಿಯೋಗ ಆಯೋಜನೆ ಮಾಡಲಾಗಿತ್ತು.

ತಿರುಪತಿಯ ಮೂಲ ದೇವರೆಂದೇ ಖ್ಯಾತಿ ಪಡೆದಿರುವಂತಹ ಶ್ರೀ ಭೂನಿಳ ವೆಂಕಟರಮಣಸ್ವಾಮಿ ದೇವಾಲಯ ತಲಕಾಯಲಬೆಟ್ಟದಲ್ಲಿ ನೆಲೆಸಿರುವ ಪುರಾತನ ಪ್ರಸಿದ್ಧ ದೇವಾಲಯವಾದ ಇಂದು ವೈಕುಂಠ ಏಕಾದಶಿ ಪ್ರಯುಕ್ತ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು.

ಕೆಪಿಸಿಸಿ ಸಂಯೋಜಕರಾದ ರಾಜೀವ್ ಗೌಡ ಮಾತನಾಡಿ, ಭಗವಂತ ಪ್ರತಿಯೊಬ್ಬರ ಬಾಳು ಬೆಳಗಿಸಿ, ಉತ್ತಮ ಬೆಳೆ ,ಆಯುರ್ ಆರೋಗ್ಯ ನೀಡಲಿ ಎಂದು ಅವರು ಕೋರಿದರು.

ಬಿಜೆಪಿ ಮುಖಂಡ ರಾಮಚಂದ್ರಗೌಡ ಮಾತನಾಡಿ, ವೈಕುಂಠ ಏಕಾದಶಿ ಪ್ರತೀತಿಯಲ್ಲಿ ಇವತ್ತಿನ ದಿವಸ ವೈಕುಂಠದಲ್ಲಿ ಬಾಗಿಲು ತೆರೆದಿರುತ್ತದೆ ಒಂದು ಪದ್ಧತಿ ಹಾಗಾಗಿ ಎಲ್ಲಾ ಭಕ್ತಾದಿಗಳು ಇಂದಿನ ದಿನವನ್ನು ವಿಶೇಷ ವಾಗಿ ಆಚರಣೆ ಮಾಡುತ್ತಾರೆ.

ಹೊಸ ವರ್ಷ 2025ರಲ್ಲಿ ವಿಶೇಷವಾಗಿ ನಮ್ಮಶಿಡ್ಲಘಟ್ಟ ವಿಧಾನ ಸಭಾ ಕ್ಷೇತ್ರದ ಪ್ರತಿಯೊಬ್ಬ ರೈತರಿಗೂ ನಾಗರಿಕರಿಗೂ ಎಲ್ಲರಿಗೂ ಏಡು ಕೋಂಡಲವಾಡು ಒಳ್ಳೆಯದು ಮಾಡಲಿ ಎಂದರು.

ಬಿಜೆಪಿ ಗ್ರಾಮಾಂತರ ಮಂಡಲ ಅಧ್ಯಕ್ಷರಾದ ಸೀಕಲ್ ಆನಂದಗೌಡ ಮಾತನಾಡಿ ರೈತರು ಬೆಳೆದಿರುವ ಬೆಳೆಗೆ ಒಳ್ಳೆ ಬೆಲೆ ಬರಲಿ ನಮ್ಮ ರೈತರ ಮುಖದಲ್ಲಿ ಒಂದು ಒಳ್ಳೆ ಮಂದಹಾಸ ಮೂಡುವುದರ ಮುಖಾಂತರ ಆ ಪರಮಾತ್ಮ ಅವರನ್ನು ಕಾಪಾಡಲಿ ಎಂದು ಏಡುಕೊಂಡಲವಾಡ ಸ್ವಾಮಿಯನ್ನು ನಾವೆಲ್ಲರೂ ಪ್ರಾರ್ಥಿಸುತ್ತೇವೆ ಎಂದರು.

ಧರ್ಮದರ್ಶಿ ಬೂದಾಳ ರವೀಂದ್ರ ರವರು ಮಾತನಾಡಿ ಬೆಳಿಗ್ಗೆ 6 ಗಂಟೆಯಿಂದಲೇ ಉತ್ತರ ದ್ವಾರ ದರ್ಶನ ಪ್ರಾರಂಭವಾಗಿ ಭಕ್ತಾದಿಗಳು ಸಕಾಲಕ್ಕೆ ಬಂದು ಸ್ವಾಮಿಯ ದರ್ಶನವನ್ನು ಪಡೆಯುತ್ತಿದ್ದಾರೆ,ಸ್ವಾಮಿಯ ದರ್ಶನಕ್ಕೆ ವಿಶೇಷ ದರ್ಶನವನ್ನು ಏರ್ಪಡಿಸಲಾಗಿದೆ ವಿಶೇಷ ದೇವರ ದರ್ಶನ ಪಡೆದವರಿಗೆ ತಿರುಪತಿ ಲಡ್ಡು ಉಚಿತವಾಗಿ ನೀಡಲಾಗುತ್ತಿದೆ ಎಂದು ತಿಳಿಸಿದರು.

ಭಕ್ತಾದಿಗಳು ಸ್ವಾಮಿಯ ದರ್ಶನ ಪಡೆದು ದೇವರ ಕೃಪೆಗೆ ಪಾತ್ರರಾದರು.

# ಮಕ್ಕಳ ಆರೋಗ್ಯದ ಬಗ್ಗೆ ಪೋಷಕರು ಗಮನ ಹರಿಸಿ



**ಕೆ.ಆರ್.ಪೇಟೆ:** ವಿದ್ಯಾರ್ಥಿಗಳು ಪ್ರಾಥಮಿಕ ಹಂತದಲ್ಲಿಯೇ ಉತ್ತಮ ಅಧ್ಯಯನ ಮಾಡುವ ಹವ್ಯಾಸ ರೂಡಿಸಿಕೊಳ್ಳಬೇಕು. ಹಾಗೂ ಮಕ್ಕಳ ಆರೋಗ್ಯ ಸ್ವಚ್ಛತೆಯ ಬಗ್ಗೆ ಪೋ?ಕರು ಹೆಚ್ಚು ಗಮನ ಹರಿಸಬೇಕು ಎಂದು ನಾರಾಯಣ ಆಸ್ಪತ್ರೆಯ ಮುಖ್ಯಸ್ಥರಾದ ನಿರ್ಮಲಾಮಾದಪ್ಪ ಕರೆ ನೀಡಿದರು.

ಅವರು ತಾಲೂಕಿನ ಅಕ್ಕಿಹೆಬ್ಬಾಳು ಹೋಬಳಿಯ ಸೋಮನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಪುರ ಶಾಲೆಗೆ ಮೈಸೂರಿನ ನಾರಾಯಣ ಹೆಲ್ತ್ ಸಂಸ್ಥೆಯ ಸಿಆರ್‌ಎಫ್ ನಿಧಿಯಿಂದ ಆರ್‌ಎಫ್‌ಸಿ ಸರ್ಕಾರೇತರ ಸಂಸ್ಥೆಯ ಮೂಲಕ ಎಂಟು ಲಕ್ಷಕ್ಕೂ ಹೆಚ್ಚಿನ ನೆರವು ನೀಡಿ ಮಾತನಾಡಿದರು.

ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳನ್ನು ಗಮನದಲ್ಲಿಟ್ಟುಕೊಂಡು ಅವರಿಗೆ ವಿಜ್ಞಾನ ಪ್ರಯೋಗಾಲಯ, ಶುದ್ಧ ಕುಡಿಯುವ ನೀರಿನ ಘಟಕ ಹಾಗೂ ಸೋಲಾರ್ ಪ್ಯಾನೆಲ್, ಶಾಲಾ ಕಾಂಪೌಂಡ್, ಕೊಠಡಿ ಗೋಡೆಗಳಿಗೆ ಚಿತ್ರ ಬರಹ, ಮಕ್ಕಳಿಗೆ ಕುಳಿತುಕೊಳ್ಳಲು ಡೆಸ್ಕ್‌ಗಳು, ನಲಿಕಲಿ ಚೇರ್, ಟೇಬಲ್, ಕಂಪ್ಯೂಟರ್, ಶೌಚಾಲಯ ನವೀಕರಣ, ಬ್ಯಾಗ್‌ಗಳು, ಕ್ರಯನ್ಸ್, ವಾಟರ್‌ಬಾಟಲ್ ಹೀಗೆ ನಮ್ಮ ಸಂಸ್ಥೆ ಸರ್ಕಾರಿ ಶಾಲೆಗಳಿಗೆ ಅಗತ್ಯ ನೆರವು ನೀಡುತ್ತಾ ಬಂದಿದ್ದೇವೆ. ಮುಂದಿನ ದಿನಗಳಲ್ಲಿ ತಾಲೂಕಿನಲ್ಲಿ ಅಗತ್ಯವಿರುವ ಶಾಲೆಗಳಿಗೂ ಸೌಲಭ್ಯ ನೀಡುವುದಾಗಿ ಭರವಸೆ ನೀಡಿದರು.

ಪ್ರತಿಯೊಬ್ಬರೂ ಆರೋಗ್ಯವಂತರಾಗಬೇಕು. ದಿನನಿತ್ಯ ವ್ಯಾಯಾಮ, ನಡಿಗೆ ಸೇರಿದಂತೆ ಒಳ್ಳೆಯ ಹವ್ಯಾಸಗಳನ್ನು ಕಾಪಾಡಿಕೊಳ್ಳಬೇಕು. 30 ವ?ದ ನಂತರ ಪ್ರತಿ ವ? ಒಮ್ಮೆಯಾದರೂ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ತಪಾಸಣೆ ಬಗ್ಗೆ ಭಯ ಬಿಟ್ಟು ಆರೋಗ್ಯದ ಕಾಳಜಿ ವಹಿಸಬೇಕು ಎಂದು ಸಲಹೆ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ವೈ.ಕೆ.ತಿಮ್ಮೇಗೌಡ ಮಾತನಾಡಿ ನಾರಾಯಣ ಹೆಲ್ತ್ ಸಂಸ್ಥೆಯು ನೀಡಿರುವ ಕೊಡುಗೆಗಳನ್ನು ವಿದ್ಯಾರ್ಥಿಗಳು ಸದ್ಬಳಕೆ ಮಾಡಿಕೊಳ್ಳಬೇಕು ಹಾಗೂ ಪೋಷಕರು ವಿದ್ಯಾರ್ಥಿಗಳ ಪ್ರಗತಿಯನ್ನು ವೀಕ್ಷಿಸಬೇಕು. ಹುಟ್ಟಿದ ಮೇಲೆ ಸಮಾಜಕ್ಕೆ ಏನಾದರೂ ಕೊಡುಗೆ ನೀಡಬೇಕು. ನಮ್ಮ ಸಾಧನೆ ಮಾತುಗಳಾಗಬೇಕು ನಾರಾಯಣ ಹೆಲ್ತ್ ಸಂಸ್ಥೆ ಶಾಲೆಗಳ ಶೈಕ್ಷಣಿಕ ಅಭಿವೃದ್ಧಿಗೆ ಸಹಕರಿಸಿ ಸಾಧಿಸುತ್ತದೆ, ಆರ್‌ಎಫ್‌ಸಿ ಸಂಸ್ಥೆ ಇದಕ್ಕೆ ಅಗತ್ಯ ಸಹಕಾರ ನೀಡಿದೆ. ಎರಡು ಸಂಸ್ಥೆಗೆ ಧನ್ಯವಾದ ಅರ್ಪಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಶಿಕ್ಷಕಿ ನೇತ್ರಾವತಿ ಐಯ್ಯಣ್ಣ, ಎಸ್‌ಡಿಎಂಸಿ ಅಧ್ಯಕ್ಷ ಪಿ.ಎಚ್‌ರವಿ ಕುಮಾರ್, ನಾರಾಯಣಹೆಲ್ತ್ ಸಂಸ್ಥೆಯ ಸೀನಿಯರ್ ಮ್ಯಾನೇಜರ್‌ಸೋಮನಾಥ, ರೈಟ್ ಫಾರ್ ಕಾಸ್ ಸಂಸ್ಥೆ ಅಧ್ಯಕ್ಷ ಮಧು ಬಿ ಕೃ?ಮೂರ್ತಿ, ಇಸಿಓ ವೀರಭದ್ರಯ್ಯ, ಸಿಆರ್‌ಪಿ ಗಳಾದ ಮಹೇಶ್ ಹಾಗೂ ಕೇಶವಮೂರ್ತಿ ಸಹ ಶಿಕ್ಷಕರಾದ ವಸಂತ್‌ಕುಮಾರ್ ಎಸ್.ಪಿ. ನೇತ್ರಾವತಿ. ಹೇಮಾವತಿ, ಎಸ್‌ಡಿಎಂಸಿ ಉಪಾಧ್ಯಕ್ಷರು. ಸದಸ್ಯರು. ಗ್ರಾ.ಪಂ.ಸದಸ್ಯರು. ಯುವಕರು. ಪೋಷಕರು. ಅಡುಗೆ ಸಿಬ್ಬಂದಿ ಹಾಗೂ ಪುರ ಗ್ರಾಮಸ್ಥರು ಹಾಜರಿದ್ದರು.

# ಮಾರ್ಟಳ್ಳಿ ಗ್ರಾ.ಪಂ.ಸಮಸ್ಯೆಗಳ ಕುರಿತು ಜಿಲ್ಲಾಧಿಕಾರಿಗೆ ಮನವಿ



**ಚಾಮರಾಜನಗರ/ಹನೂರು:** ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಸಂಬಂಧಪಟ್ಟ ಸಚಿವರ ಜೋತೆ ಚರ್ಚಿಸಿ ತಾಲೂಕಿನ ಮಾರ್ಟಳ್ಳಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿನ ಹಲವಾರು ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ಮಾರ್ಟಳ್ಳಿ ಗ್ರಾಮ ಪಂಚಾಯತ್ ಆಡಳಿತ ಮಂಡಳಿ ವತಿಯಿಂದ ಜಿಲ್ಲಾಧಿಕಾರಿ ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಹನೂರು ತಾಲೂಕಿನ ಮಾರ್ಟಳ್ಳಿ ಗ್ರಾಮ ಪಂಚಾಯತ್ ಅಧ್ಯಕ್ಷ ಇನ್ನಾಸಿಮುತ್ತು, ಮಾಜಿ ಉಪಾಧ್ಯಕ್ಷ ಹಾಲಿ ಸದಸ್ಯ ರಾಮಲಿಂಗಂ, ಸದಸ್ಯ ಸುರೇಶ್, ಮುಖಂಡರು ಪಿ.ಜಿ ಮಣಿ, ಬಿದರಹಳ್ಳಿ ಶಿವು ಅವರು ಜಿಲ್ಲಾಧಿಕಾರಿ ಶಿಲ್ಪನಾಗ್ ಅವರಿಗೆ ಮನವಿ ಸಲ್ಲಿಸಿದ್ದಾರೆ.

ಪಂಚಾಯಿತಿ ಸಾಮಾನ್ಯ ಸಭೆಯಲ್ಲಿ ಸರ್ವಾನುಮತದಿಂದ ತೀರ್ಮಾನ ಕೈಗೊಂಡು ಈ ಬಗ್ಗೆ ಮಾನ್ಯ ಜಿಲ್ಲಾಧಿಕಾರಿಗಳಿಗೆ ಮತ್ತು ಸಚಿವ ಸಂಪುಟದಲ್ಲಿ ಕ್ರಮ ಕೈಗೊಳ್ಳಬೇಕೆಂದು ತಿಳಿಸಿದ್ದಾರೆ.

ಕಾವೇರಿ ನದಿ ಏತ ನೀರಾವರಿ ಯೋಜನೆಗೆ ಆಕಖ ಮಜೂರಾಗಿದ್ದು ಆಡಳಿತಾತ್ಮಕ ಮಂಜೂರು ಮಾಡಿ ಕಾಮಗಾರಿ ಅನು?ನ ಮಾಡುವುದು:

ಹನೂರು ತಾಲ್ಲೂಕಿನ ರಾಮಾಪುರ ಹೋಬಳಿಯ ಪಾಳ್ಯ ಹೋಬಳಿ ಮತ್ತು ಬರ ಪಡಿತ ಪ್ರದೇಶವಾಗಿದ್ದು, ಮಳೆಯ ಅಭಾವದಿಂದಾಗಿ ಅಂತರ್ಜಲ ಮಟ್ಟವು ಅತೀ ಕಡಿಮೆ ಇದ್ದು, ಕುಡಿಯುವ ನೀರಿಗಾಗಿ ಸುಮಾರು 800 ಅಡಿಗಳಿಂದ 1000 ಅಡಿಗಳ?ಟ್ಟು ಕೊಳವೆಬಾವಿ ಕೊರೆಯಬೇಕಾಗುತ್ತದೆ.

ಈ ರೀತಿ ಅತಿ ಆಳದಿಂದ ಪಡೆದ ನೀರು ಕುಡಿಯಲು ಯೋಗ್ಯವಿಲ್ಲದ ಕ್ಲೋರೈಡ್ ಅಂಶವು ಹೊಂದಿರುತ್ತದೆ. ಸದರಿ ತಾಲ್ಲೂಕುಗಳಲ್ಲಿ 10 ಕೆರೆಗಳಾದ ಸರಗೂರು ಕೆರೆ, ಪಾಳ್ಯ ಚಿಕ್ಕ ಕೆರೆ, ಪಾಳ್ಯ ದೊಡ್ಡ ಕೆರೆ, ಲಿಂಗಮ್ಮನ ಕೆರೆ, ಕೊತ್ತನೂರು ಕೆರೆ, ಮಣಗಳ್ಳಿ ಕೆರೆ, ಬಂಡಳ್ಳಿ ಕೆರೆ, ಹಳ್ಳಪಕೆರೆ, ಮತ್ತು ಮಾರ್ಟಳ್ಳಿಯ ಕೆರೆ (ಹಾಲೇರಿ ಕೆರೆ) ಮತ್ತು ಕೀರಪಾತಿ ಕೆರೆಗಳು ಕಳೆದ 20 ವರ್ಷಗಳಿಂದ ಮಳೆಯ ಅಭಾವದಿಂದಾಗಿ ತುಂಬಿರುವುದಿಲ್ಲ ಹಾಗಾಗಿ ಈ ಪ್ರದೇಶದಲ್ಲಿ ನೀರಿನಂಶ ಅತೀ ಕಡಿಮೆ ಇದ್ದು ರೈತ ವರ್ಗದವರು ತುಂಬ ಕಷ್ಟಪಡುವಂತಾಗಿದೆ.

ಈ 10 ಕೆರೆಗಳಿಗೆ 6 ಕಟ್ಟೆಗಳು ಹಾಗೂ 16 ಪಿಕಪ್ ಗಳಿಗೆ ನೀರು ತುಂಬಿಸಲು ಮತ್ತು 3 ಪಿಕಪ್ ಗಳನ್ನು ಹೊಸದಾಗಿ ನಿರ್ಮಿಸಿ ಅವುಗಳಿಗೆ ನೀರು ತುಂಬಿಸಲು ಉದ್ದೇಶಿಸಲಾಗಿರುತ್ತದೆ.

ಈ ಒಂದು ಯೋಜನೆಯು ತಾಲ್ಲೂಕಿನ ಸರಗೂರು ಕೆರೆ ಗ್ರಾಮದಿಂದ ಮಾರ್ಟಳ್ಳಿ ಗ್ರಾಮದ ಹಾಲೇರಿ ಕೆರೆಯವರೆಗೆ ನೀರು ತುಂಬಿಸುವ ಕಾಮಗಾರಿಯು ಸುಮಾರು ರೂ. 185.00 ಕೋಟಿ ಮೊತ್ತದ ಆಕಖ ಪುಸ್ತಾವಣೆಯನ್ನು ಮಂಡಿಸಿ ಕುಡಿಯುವ ನೀರಿನ ಅಭಾವವನ್ನು ಮನಗಂಡು ಕಾಮಗಾರಿಯನ್ನು ಅತೀ ತುರ್ತಾಗಿ ಕ್ರಮವಹಿಸಲು ಆಡಳಿತ್ಮಾಕ ಅನುಮೋದನೆ ನೀಡಬೇಕೆಂದು ಮನವಿ ಸಲ್ಲಿಸಿದ್ದಾರೆ.

# ಸಡಗರದ ವೈಕುಂಠ ಏಕಾದಶಿ



**ಕೆ.ಆರ್.ಪೇಟೆ:** ತಾಲ್ಲೂಕಿನ ವಿವಿಧಡೆಗಳಲ್ಲಿ ವೈಕುಂಠ ಏಕಾದಶಿಯನ್ನು ಭಕ್ತರು ಸಡಗರ ಸಂಭ್ರಮದಿಂದ ಆಚರಿಸಿದರು.

ಶ್ರೀಹರಿ ನಾರಾಯಣನು ವೈಕುಂಠ ದ್ವಾರವನ್ನು ತೆರೆದು ತನ್ನ ಭಕ್ತರಿಗೆ ದರ್ಶನವನ್ನು ನೀಡುವ ದಿನವೇ ಈ ವೈಕುಂಠ ಏಕಾದಶಿ. ಈ ಏಕಾದಶಿ ವ್ರತವು ಹಿಂದೂ ಧರ್ಮೀಯರಿಗೆ ಅತ್ಯಂತ ವಿಶೇ?ವಾಗಿದೆ. ವಿವಿಧ ದೇವಾಲಯಗಳಿಗೆ ಆಗಮಿಸಿದ ಭಕ್ತರು ವೈಕುಂಠದ್ವಾರದಲ್ಲಿ ಸ್ವಾಮಿಗೆ ನಮಸ್ಕರಿಸಿ ನಂತರ ದೇವಾಲಯ ಪ್ರವೇಶಿಸಿ ಭಗವಂತನ ಕೃಪೆಗೆ ಪಾತ್ರರಾಗುತ್ತಿದ್ದರು. ಸಿಂಧಘಟ್ಟ, ಶೀಳನೆರೆ, ಅಕ್ಕಿಹೆಬ್ಬಾಳು, ಸಂತೇಬಾಚಹಳ್ಳಿ, ಕಿಕ್ಕೇರಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ವೈಕುಂಠ ಏಕಾದಶಿಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಭೃಗುಮುನಿಗಳ ತಪೋಭೂಮಿ ಹೇಮಗಿರಿಯ ಶ್ರೀ ಕಲ್ಯಾಣ ವೆಂಕಟರಮಣಸ್ವಾಮಿಯ ದೇವಾಲಯದಲ್ಲಿ ಮುಂಜಾನೆಯಿಂದಲೇ ವಿಶೇ? ಪೂಜೆ ಪುನಸ್ಕಾರಗಳು ಜರುಗಿದವು. ಹೇಮಗಿರಿ ಬಿಜಿಎಸ್ ಡಾ:ಜೆ.ಎನ್.ರಾಮಕೃ?ಗೌಡ ನೇತೃತ್ವದಲ್ಲಿ ವಿರಾಜಮಾನನಾಗಿ ಕುಳಿತಿರುವ ಸ್ವಾಮಿಗೆ ವಿವಿಧ ಅಭಿಷೇಕಗಳನ್ನು ನಡೆಸಲಾಯಿತು. ಕಲ್ಯಾಣವೆಂಕಟರಣಸ್ವಾಮಿಗೆ ವಿವಿಧ ಬಗೆಯ ಹೂವುಗಳಿಂದ ಅಲಂಕಾರಿಸಲಾಗಿತ್ತು. ಸುತ್ತಮುತ್ತಲಿನ ಗ್ರಾಮಗಳ ಸಾವಿರಾರು ಭಕ್ತರು ಸರತಿ ಸಾಲಿನಲ್ಲಿ ನಿಂತು ವೈಕುಂಠ ದ್ವಾರ ದರ್ಶನ ಪಡೆದರು. ಇದೇ ಸಂದರ್ಭದಲ್ಲಿ ಭಕ್ತರಿಗೆ ಪ್ರಸಾದದ ವ್ಯವಸ್ಥೆ ಕಲ್ಪಿಸಲಾಗಿತ್ತು.

# ಕಾಮಗಾರಿಗೆ ಶಾಸಕರಿಂದ ಭೂಮಿ ಪೂಜೆ



**ಹನೂರು:** ತಾಲೂಕಿನ ಮಲೆ ಮಹದೇಶ್ವರ ಬೆಟ್ಟದ ಸಾಲೂರು ಮಠದ ಮುಖ್ಯ ರಸ್ತೆಯ ಹಳ್ಳಕ್ಕೆ ಸೇತುವೆ ನಿರ್ಮಾಣ ಅಭಿವೃದ್ಧಿ ಕಾರ್ಯಕ್ಕೆ ಶಾಸಕ ಎಂಆರ್ ಮಂಜುನಾಥ್ ಅವರು ಗುದ್ದಲಿ ಪೂಜೆ ನೆರವೇರಿಸಿದರು.

ಇದೇ ವೇಳೆ ಶಾಸಕ ಎಂಆರ್ ಮಂಜುನಾಥ್ ಮಾತನಾಡಿ ಸಣ್ಣ ನೀರಾವರಿ ಇಲಾಖೆಯಿಂದ ಸುಮಾರು 1.5 ಕೋಟಿ ರು ವೆಚ್ಚದಲ್ಲಿ ತಡೆಗೋಡೆ ಸೇತುವೆ ನಿರ್ಮಾಣ ಅಭಿವೃದ್ಧಿ ಕಾಮಗಾರಿ ಮಾಡಲಾಗುತ್ತದೆ. ಅದೇ ರೀತಿ ಮಲೆ ಮಹದೇಶ್ವರ ಬೆಟ್ಟ ಇನ್ನೂ ಹಲವಾರು ಅಭಿವೃದ್ಧಿ ಕೆಲಸಗಳು ಮಠಕ್ಕೆ ಅವಶ್ಯಕತೆ ಇದೆ.

ರಸ್ತೆಗೆ ಡಾಂಬರೀಕರಣ ಹಾಕುವಂತೆ ಅನುಮೋದನೆ ಆಗಿದ್ದು, ಮುಂದಿನ ದಿನಗಳಲ್ಲಿ ಭೂಮಿ ಪೂಜೆ ಮಾಡಲಾಗುತ್ತದೆ. ಇನ್ನ?ಟ್ಟು ಅಭಿವೃದ್ಧಿ ಕೆಲಸಗಳು ಸಾಲೂರು ಮಠದ ಬಾಗಕ್ಕೆ ಅಭಿವೃದ್ಧಿಯಾ ಗಲೆಂದು ಬೇಡಿಕೊಳ್ಳುತ್ತೇನೆ.

ಮಾದಪ್ಪನ ಆಶೀರ್ವಾದ ಮತ್ತು ಬುದ್ದಿಯರ ಆಶೀರ್ವಾದದಿಂದ ಸಾಲೂರು ಮಠ ಹಾಗೂ ಮಲೆ ಮಹದೇಶ್ವರ ಬೆಟ್ಟ ಇನ್ನ?ಟ್ಟು ಅಭಿವೃದ್ಧಿ ಆಗಲೆಂದು ಆಶಿಸುತ್ತೇನೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಸಾಲೂರು ಬೃಹನ್ ಮಠಾಧ್ಯಕ್ಷರಾದ ಶ್ರೀ ಡಾ. ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ, ಪ್ರಾಧಿಕಾರದ ಕಾರ್ಯದರ್ಶಿ ಎ ಈ ರಘು, ಇಂಜಿನಿಯರ್ ಗಳಾದ ಮಹೇಶ್, ಚಿನ್ನಣ್ಣ, ಉಪ ಕಾರ್ಯದರ್ಶಿ ಚಂದ್ರಶೇಖರ್, ಸೋಮಶೇಖರ್, ಅಭಿಲಾ?, ಮುಖಂಡರು, ಪೊನ್ನಾಚಿ ಡಿಕೆ ರಾಜು. ಡಿಆರ್ ಮಾದೇಶ್, ಮಂಜೇಶ್ ಹಾಗೂ ಇನ್ನಿತರರು ಇದ್ದರು.

# ತಮಿಳುನಾಡು ಸರ್ಕಾರದ ವಿರುದ್ಧ ಕನ್ನಡಪರ ಸಂಘಟನೆ ಪ್ರತಿಭಟನೆ

**ಚಾಮರಾಜನಗರ:** ತಮಿಳುನಾಡು ವಿಧಾನಸಭೆಯಲ್ಲಿ ರಾ?ಗೀತೆಯನ್ನು ಹಾಡಲು ನಿರಾಕರಣೆ ಮಾಡಿ ರುವುದನ್ನು ಖಂಡಿಸಿ ಕನ್ನಡಪರ ಸಂಘಟನೆಗಳ ವತಿಯಿಂದ ಚಾ.ನಗರದಲ್ಲಿ ಪ್ರತಿಭಟನೆ ನಡೆಯಿತು.

ಚಾಮರಾಜನಗರದ ಶ್ರೀಚಾಮರಾಜೇಶ್ವರ ದೇವಸ್ಥಾನದ ಬಳಿ ಜಮಾಯಿಸಿದ ಪ್ರತಿಭಟ ನಾಕಾರರು ಅಲ್ಲಿಂದ ಮೆರವಣಿಯು ರಾಷ್ಟ್ರೀಯ ಹೆದ್ದಾರಿ 209ರ ಶ್ರೀಭುವನೇಶ್ವರಿ ವೃತ್ತದಲ್ಲಿ ರಸ್ತೆ ತಡೆ ನಡೆಸಿ, ರಾಜ್ಯಪಾಲರು ಇದ್ದ ವೇಳೆಯಲ್ಲಿ ತಮಿಳುನಾಡು ಸರ್ಕಾರ ನಾಡಗೀತೆಯನ್ನು ಹೇಳಿ ಣಿಗೆಯಲ್ಲಿ ಪಚ್ಚಪ್ಪ ವೃತ್ತಕ್ಕೆ ತೆರಳಿ ರಾ?ಗೀತೆ ಹಾಡಲು ನಿರಾಕರಿಸಿರುವುದು ಖಂಡನೀಯ ಎಂದರು.

ತಮಿಳುನಾಡು ಸರ್ಕಾರದ ಕ್ರಮವನ್ನು ಅಲ್ಲಿನ ರಾಜ್ಯಪಾಲರೇ ವಿರೋಧಿಸಿ ಸಭೆಯಿಂದ ಹೊರಗೆ ಹೋಗಿದ್ದಾರೆ. ತಮಿಳುನಾಡು ಸರ್ಕಾರ ತಮಿಳುನಾಡು ಸರ್ಕಾರದ ದೇಶದ ಒಕ್ಕೂಟದ ವ್ಯವಸ್ಥೆಗೆ ಅಗೌರವ ತೋರಿಸುತ್ತಿದೆ. ಮೊದಲಿನಿಂದಲೂ ಉದ್ಧಟತನ ವಿರುದ್ಧ ಘೋ?ಣೆ ಕೂಗಿ ತೋರಿಸುತ್ತಿದೆ. ರಾ?ಗೀತೆಗೆ ಅಪಮಾನ ಮಾಡಿರುವ ತಮಿಳುನಾಡು ಸರ್ಕಾರವನ್ನು ರಾ?ಪತಿಗಳು ಆಕ್ರೋಶ ವ್ಯಕ್ತಪಡಿಸಿದರು. ಕೂಡಲೇ ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಚಾ.ರಾಜಗೋಪಾಲ್, ಚಾ.ರ0.ಶ್ರೀನಿವಾಸಗೌಡ ನಿಜಧ್ವನಿ ಗೋವಿಂದರಾಜು, ಆಟೋ ಲಿಂಗರಾಜು, ತಾಂಡವಮೂರ್ತಿ, ವೀರಭದ್ರ, ಮಾತನಾಡಿ, ಇತ್ತೀಚೆಗೆ ತಮಿ ರವಿಚಂದ್ರಪ್ರಸಾದ್ ಕಹಳೆ, ಪುಣಜನೂರು ಸುರೇಶ್, ರಾಜಪ್ಪ, ಚಂದ್ರು, ಸಿದ್ದರಾಜು ಸೇರಿದಂತೆ ಳುನಾಡು ವಿಧಾನಸಭೆಯಲ್ಲಿ ಇತರರು ಭಾಗವಹಿಸಿದ್ದರು.

# ಜ.19ಕ್ಕೆ ಪಿಎಲ್‌ಡಿ ಬ್ಯಾಂಕ್ ಚುನಾವಣೆ

ಶಿಡ್ಲಘಟ್ಟ: ತಾಲ್ಲೂಕಿನ ಪ್ರಾಥಮಿಕ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್(ಪಿಎಲ್‌ಡಿ ಬ್ಯಾಂಕ್)ನ ಆಡಳಿತ ಮಂಡಳಿಗೆ ಐದು ವ?ಗಳ ಅವಧಿಗೆ ನಿರ್ದೇಶಕರ ಸ್ಥಾನಗಳಿಗೆ ಚುನಾವಣೆ ಘೋ?ಣೆಯಾಗಿದ್ದು ಜ.19 ರ ಭಾನುವಾರ ಚುನಾವಣೆ ನಡೆಯಲಿದೆ.

ಚುನಾವಣೆಯನ್ನು ನಡೆಸಲು ತಾಲ್ಲೂಕು ಸಹಕಾರಿ ಅಭಿವೃದ್ಧಿ ಅಧಿಕಾರಿ ಎಂ.ಮಂಜುನಾಥ್ ಅವರನ್ನು ಚುನಾವಣಾಧಿಕಾರಿಯನ್ನಾಗಿ ನೇಮಿಸಿ ಸಹಕಾರ ಸಂಘಗಳ ಬೆಂಗಳೂರು ಪ್ರಾಂತದ ಜಂಟಿ ನಿಬಂಧಕರು ಹಾಗೂ ಚುನಾವಣಾಧಿಕಾರಿ ಆದೇಶಿಸಿದ್ದಾರೆ.

ಒಟ್ಟು 14 ಮಂದಿ ನಿರ್ದೇಶಕರುಗಳ ಸ್ಥಾನಕ್ಕೆ ಚುನಾವಣೆ ನಡೆಯಲಿದ್ದು ಜ.10ರ ಶುಕ್ರವಾರ ಮತ್ತು 11 ರ ಶನಿವಾರ ಎರಡು ದಿನಗಳ ಕಾಲ ನಿರ್ದೇಶಕರುಗಳ ಸ್ಥಾನಕ್ಕೆ ಸ್ಪರ್ಧಿಸುವ ಆಕಾಂಕ್ಷಿ ಅಭ್ಯರ್ಥಿಗಳು ತಮ್ಮ ಉಮೇದುವಾರಿಕೆಯನ್ನು ಪಿಎಲ್‌ಡಿ ಬ್ಯಾಂಕ್‌ನಲ್ಲಿ ಚುನಾವಣಾಧಿಕಾರಿಗೆ ಸಲ್ಲಿಸಬಹುದು.

ಜ.12ರ ಭಾನುವಾರ ನಾಮಪತ್ರಗಳ ಪರಿಶೀಲನೆ ನಡೆದು ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಅಂದೆ ಪ್ರಕಟಿಸಲಾಗುವುದು. ಜ.13 ರಂದು ನಾಮಪತ್ರ ವಾಪಸ್ ಪಡೆಯಲು ಕಡೆಯ ದಿನವಾಗಿರುತ್ತದೆ,ಆ ದಿನವೇ ನಾಮಪತ್ರ ವಾಪಸ್ ಪಡೆದವರ ಪಟ್ಟಿ ಪ್ರಕಟಿಸಲಾಗುತ್ತದೆ.

ಜ.15ರಂದು ಚಿಹ್ನೆಯೊಂದಿಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಲಾಗುವುದು.

ಜ.19ರಂದು ಭಾನುವಾರ ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆಯವರೆಗೂ ನಗರದ ಸರಕಾರಿ ಪ್ರೌಢಶಾಲೆಯಲ್ಲಿ ಮತದಾನ ನಡೆಯಲಿದೆ ಮತದಾನದ ನಂತರ ಅಂದೇ ಮತ ಎಣಿಕೆ ಮತ್ತು ಮತ ಎಣಿಕೆ ನಂತರ ಫಲಿತಾಂಶ ಘೋಷಣೆ ಆಗಲಿದೆ ಎಂದು ಸಹಕಾರಿ ಅಭಿವೃದ್ಧಿ ಅಧಿಕಾರಿ ಎಂ.ಮಂಜುನಾಥ್ ಅವರು ತಿಳಿಸಿದ್ದಾರೆ.

# ಬೆ.ವಿ.ಕಂ: ಅಧ್ಯಕ್ಷ–ಉಪಾಧ್ಯಕ್ಷರ ಅವಿರೋಧ ಆಯ್ಕೆ



**ಕುಣಿಗಲ್:** ತಾಲೂಕು ಬೆ.ವಿ.ಕಂ ಮತ್ತು ಕ.ವಿ.ಪ್ರ.ನಿ.ನಿ ನೌಕರರ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಸಿ.ಚನ್ನಕೃಷ್ಣಯ್ಯ, ಉಪಾಧ್ಯಕ್ಷ ಟಿ.ಕೃಷ್ಣಮೂರ್ತಿ ಅವಿರೋಧ ಆಯ್ಕೆಯಾಗಿದ್ದಾರೆ.

ಇಲ್ಲಿನ ಕಚೇಯಲ್ಲಿ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಸಿ.ಚನ್ನಕೃಷ್ಣಯ್ಯ, ಉಪಾಧ್ಯಕ್ಷ ಸ್ಥಾನಕ್ಕೆ ಟಿ.ಕೃಷ್ಣಮೂರ್ತಿ ಅವರು ಹೊರತು ಪಡಿಸಿ ಯಾವೊಬ್ಬ ನಿರ್ದೇಶಕರು ನಾಮಪತ್ರ ಸಲ್ಲಿಸದ ಕಾರಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.


ಸಂಘದ ಸಂಸ್ಥಾಪಕ ಅಧ್ಯಕ್ಷ ಹೆಚ್. ಎನ್.ಶ್ರೀನಿವಾಸ್‌ಗೌಡ ಮಾತನಾಡಿ ನೌಕರರ ಕ್ಷೇಮಾಭಿವೃದ್ದಿಗಾಗಿ ಪತ್ತಿನ ಸಹಕಾರ ಸಂಘ ಸ್ಥಾಪನೆ ಮಾಡಲಾಗಿದೆ, ಸಂಘದ ಎಲ್ಲಾ ಪದಾಧಿಕಾರಿಗಳು, ಆಡಳಿತ ಮಂಡಲಿಯ ಸದಸ್ಯರು ಮತ್ತು ಎಲ್ಲಾ ಸದಸ್ಯರು ಸಣ್ಣ ಪುಟ್ಟ ಭಿನ್ನಾಭಿಪ್ರಾಯ ಬಿಟ್ಟು ಎಲ್ಲರೂ ಒಗಟ್ಟಿನಿಂದ ಸಂಘದ ಅಭಿವೃದ್ದಿಗೆ ಶ್ರಮಿಸಬೇಕೆಂದರು, ನೂತನ ಆಡಳಿತ ಮಂಡಲಿಯು ಪಾರದರ್ಶಕವಾಗಿ ಆಡಳಿತ ನಡೆಸುವ ಮೂಲಕ ಪ್ರತಿಯೊಬ್ಬ ನೌಕರರ ಆರ್ಥಿಕ ಅಭಿವೃದ್ದಿಗೆ ಶ್ರಮಿಸಬೇಕೆಂದು ಹೇಳಿದರು.

ಇದೇ ವೇಳೆ ನೂತನ ಪದಾಧಿಕಾರಿಗಳಿಗೆ ಮತ್ತು ಆಡಳಿತ ಮಂಡಲಿ ಸದಸ್ಯರಿಗೆ ಅವರು ಅಭಿನಂದನೆ ಸಲ್ಲಿಸಿದರು.

ನೂತನ ಅಧ್ಯಕ್ಷ ಸಿ.ಚನ್ನಕೃಷ್ಣಯ್ಯ ಮಾತನಾಡಿ ಬೆ.ವಿ.ಕಂ ಮತ್ತು ಕ.ವಿ.ಪ್ರ.ನಿ.ನಿ ನೌಕರರ ಕ್ಷೇಮಾಭಿವೃದ್ದಿಯನ್ನು ಮನಸ್ಸಿನಲ್ಲಿ ಇಟ್ಟುಕೊಂಡು ಸಂಘದ ಸಂಸ್ಥಾಪಕ ಅಧ್ಯಕ್ಷ ಹೆಚ್.ಎನ್.ಶ್ರೀನಿವಾಸ್‌ಗೌಡ ಅವರು ಪತ್ತಿನ ಸಹಕಾರ ಸಂಘ ಸ್ಥಾಪನೆ ಮಾಡಿದ್ದಾರೆ ಅವರು ಯಾವ ಉದ್ದೇಶ ಇಟ್ಟುಕೊಂಡು ಸ್ಥಾಪನೆ ಮಾಡಿದ್ದಾರೋ ಆ ಉದ್ದೇಶಕ್ಕೆ ಚ್ಯುತಿ ಬರದ ಹಾಗೆ ಎಲ್ಲಾ ಸದಸ್ಯರ ವಿಶ್ವಾಸದೊಂದಿಗೆ ಪ್ರಾಮಾಣಿಕವಾಗಿ ಕೆಲಸ ಮಾಡುವುದ್ದಾಗಿ ಅವರು ತಿಳಿಸಿದರು.

ಇದಕ್ಕೂ ಮುನ್ನ ನಡೆದ ಆಡಳಿತ ಮಂಡಲಿಯ ನಿರ್ದೇಶಕ ಚುನಾವಣೆಯಲ್ಲಿ ವಿ.ಮಹೇಶ್, ಡಿ.ಆರ್.ರಮೇಶ್, ಕೆ.ರಾಜಶೇಖರ್, ಬೆಟ್ಟಸ್ವಾಮಿ, ಡಿ.ರಾಜು, ಜಿ.ಪರಶುರಾಮ್, ಹೆಚ್.ಪಿ.ರಾಜು, ಹೆಚ್. ಆರ್ ಅನ್ನಪೂರ್ಣ, ಎ.ಆರ್.ವೀಣಾ,ಬಿ. ಎಸ್. ಯೋಗೇಶ್, ತನ್ನೂರ್‌ಖಾನ್,ಜೆ. ಪವನ್ ಕುಮಾರ್, ಪಾತ್ರದ ಲಕ್ಷ್ಮಣನಿರ್ದೇಶಕ ರಾಗಿ ಆಯ್ಕೆಯಾದರೂ ಈ ವೇಳೆ ಸ್ಥಳೀಯ ಸಮಿತಿಯ ಅಧ್ಯಕ್ಷ ಕೆ.ಎಲ್.ರಾಜಶೇಖರ್, ಉಪಾಧ್ಯಕ್ಷ ಎ.ಜಿ.ಸುರೇಶ್, ಕಾರ್ಯದರ್ಶಿ ಎ.ಎನ್.ಗಿರೀಶ್ ಮೊದಲಾದವರು ಇದ್ದರು.

# ವೈಕುಂಠ ಏಕಾದಶಿ: ವಿವಿಧ ದೇವಾಲಯಗಳಿಗೆ ಶಾಸಕರ ಭೇಟಿ





**ಮಾಲೂರು:** ಎಲ್ಲೆಡೆ ವೈಕುಂಠ ಏಕಾದಶಿ ಪ್ರಯುಕ್ತ ಚಿಕ್ಕತಿರುಪತಿ ಶ್ರೀ ಪ್ರಸನ್ನ ವೆಂಕಟರಮಣಸ್ವಾಮಿ ದೇವಾಲಯ ಹಾಗೂ ಪಟ್ಟಣದ ರೈಲ್ವೆ ಸೇತುವೆ ಬಳಿರುವ ಶ್ರೀ ವೀರಾಂಜನೇಯ ಸ್ವಾಮಿ ದೇವಾಲಯದಲ್ಲಿ ವೈಕುಂಠ ಏಕಾದಶಿ ಸಂಭ್ರಮ ಮನೆಮಾಡಿದ್ದು ಮುಂಜಾನೆ ಯಿಂದಲೇ ಸಾವಿರಾರು ಸಂಖ್ಯೆಯಲ್ಲಿ ಭಕ್ತರ ದಂಡು ಹರಿದುಬಂದು ಶ್ರೀ ಪ್ರಸನ್ನ ವೆಂಕಟರಮಣಸ್ವಾಮಿ ದರ್ಶನ ಪಡೆದರು.

ವೈಕುಂಠ ಏಕಾದಶಿ ಪ್ರಯುಕ್ತ ತಾಲ್ಲೂಕಿನ ವಿವಿಧ ದೇವಾಲಯಗಳಿಗೆ ಶಾಸಕ ಕೆ ವೈ ನಂಜೇಗೌಡ ಭೇಟಿ ನೀಡಿ ದೇವರ ದರ್ಶನ ಪಡೆದರು,

ಈ ವೇಳೆ ಶಾಸಕ ಕೆ ವೈ ನಂಜೇಗೌಡ ಮಾತನಾಡಿ, ವೈಕುಂಠ ಏಕಾದಶಿ ಹಿಂದೂ ಧರ್ಮದಲ್ಲಿ ಪವಿತ್ರ ದಿನವಾಗಿದೆ ಈ ದಿನದಂದು ದೇವಾನುದೇವತೆಗಳಿಗೆ ಪೂಜೆ ಸಲ್ಲಿಸಿ ಶ್ರೀ ವೆಂಕಟೇಶ್ವರನ ದರ್ಶನ ಪಡೆಯುತ್ತಾರೆ ದೇವರ ರೂಪದಲ್ಲಿ ನೆಲೆಸಿರುವ ತಿರುಪತಿಯಲ್ಲಿ ವೈಕುಂಠ ದ್ವಾರದ ಮೂಲಕ ದೇವರ ದರ್ಶನ ಪಡೆದರೆ ಸಕಲ ಸಂಪತ್ತು ಪುಣ್ಯ ಹಾಗೂ ಮೋಕ್ಷ ಪ್ರಾಪ್ತಿಯಾಗಲಿದೆ ಎಂಬ ನಂಬಿಕೆಯಿದೆ. ಇದೇ ಕಾರಣಕ್ಕೆ ವೈಕುಂಠ ಏಕಾದಶಿಯ ದಿನವಾದ ಇಂದು ತಿರುಪತಿ ತಿಮ್ಮಪ್ಪನ ದೇವಾಲಯಕ್ಕೆ ಭಕ್ತ ಸಾಗರವೇ ಹರಿದು ಬಂದಿದೆ. ಕರ್ನಾಟಕ, ಆಂಧ್ರ, ತಮಿಳುನಾಡು ಸೇರಿದಂತೆ ಹಲವೆಡೆಯಿಂದ ಭಕ್ತರು ಬರುತ್ತಿದ್ದು ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದಿದ್ದಾರೆ ಎಂದು ತಿಳಿಸಿದರು,

ಈ ಸಂದರ್ಭದಲ್ಲಿ ದೇವಾಲಯ ಸಮಿತಿ ಅಧ್ಯಕ್ಷ ಶ್ಯಾಮಣ್ಣ, ಕಾರ್ಯಾಧ್ಯಕ್ಷ ಎಸ್.ವಿ.ಗೋವರ್ಧನ್ ರೆಡ್ಡಿ, ತಬಲನಾರಾಯಣಪ್ಪ, ಸಮಾಜ ಸೇವಕ ಡಾ.ಕಿರಣ್ ಸೋಮಣ್ಣ, ಪುರಸಭಾ ಅಧ್ಯಕ್ಷೆ ಕೋಮಲ, ಸ್ಥಾಯಿ ಸಮಿತಿ ಅಧ್ಯಕ್ಷ ಎ.ರಾಜಪ್ಪ, ಸದಸ್ಯ ಎನ್.ವಿ.ಮುರಳೀಧರ್, ಪೆರಮಾಳ್, ಗಣೇಶ್ ಸೇರಿದಂತೆ ಹಲವಾರು ಗಣ್ಯರು ವಿವಿಧ ದೇವಾಲಯಗಳಿಗೆ ಆಗಮಿಸಿ ದೇವರ ದರ್ಶನ ಪಡೆದರು.

# ದೆಹಲಿ: ದಟ್ಟ ಮಂಜು ರೈಲು ಸಂಚಾರದಲ್ಲಿ ವಿಳಂಬ

**ನವದೆಹಲಿ:** ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಶನಿವಾರ ಬೆಳಗ್ಗಿನ ಜಾವ ದಟ್ಟ ಮಂಜು ಆವರಿಸಿದ ವಾತಾವರಣವಿದ್ದು, ಪರಿಣಾಮ ಗೋಚರತೆಯ ಮಟ್ಟ ಬಹಳ ಕಡಿಮೆ ಇತ್ತು. ಮಾತ್ರವಲ್ಲದೇ ಹಲವಾರು ರೈಲುಗಳ ಕಾರ್ಯಾಚರಣೆ ಮೇಲೂ ಪರಿಣಾಮ ಬೀರಿದೆ. ದಟ್ಟ ಮಂಜಿನಿಂದಾಗಿ 45 ರೈಲುಗಳ ಸಂಚಾರ ವಿಳಂಬವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಆದರೆ, ಯಾವುದೇ ವಿಮಾನಗಳ ಹಾರಾಟದ ಮೇಲೆ ಇದು ಪರಿಣಾಮ ಬೀರಿಲ್ಲ ಎಂದು ವರದಿಯಾಗಿದೆ. "ರನ್ ವೇ ಗೋಚರತೆ ಸುಧಾರಿಸಿರುವ ಕಾರಣ ಎಲ್ಲಾ ವಿಮಾನಗಳು ಎಂದಿನಂತೆ ಕಾರ್ಯನಿರ್ವಹಿಸುತ್ತಿವೆ. ಪ್ರಯಾಣಿಕರು ನವೀಕರಿಸಿದ ವಿಮಾನ ಮಾಹಿತಿಗಾಗಿ ಸಂಬಂಧಪಟ್ಟ ವಿಮಾನಯಾನ ಸಂಸ್ಥೆಯನ್ನು ಸಂಪರ್ಕಿಸಲು ವಿನಂತಿಸಲಾಗಿದೆ" ಎಂದು ಇಂದಿರಾ ಗಾಂಧಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಅಧಿಕಾರಿಗಳು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರಯಾಣಿಕರಿಗೆ ಅಧಿಕೃತ ಮಾಹಿತಿ ನೀಡಿದೆ.



ಸಫ್ದರ್ಜಂಗ್‌ನಲ್ಲಿ ಗೋಚರತೆಯ ಮಟ್ಟ ಆರಂಭದಲ್ಲಿ ಬೆಳಗ್ಗೆ 12.30ರಿಂದ 1.30 ರವರೆಗೆ 50 ಮೀಟರ್‌ಗೆ ಇಳಿದಿದ್ದರೆ. ನಂತರದಲ್ಲಿ 200 ಮೀಟರ್‌ಗೆ ಸುಧಾರಿಸಿ, ಬೆಳಗ್ಗೆ 7.30 ರವರೆಗೆ ಹೀಗೆ ಮುಂದುವರೆದಿತ್ತು. ಭಾರತೀಯ ಹವಾಮಾನ ಇಲಾಖೆಯ ಪ್ರಕಾರ, ದೆಹಲಿಯ ಕನಿಷ್ಠ ತಾಪಮಾನ 7.7 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

ಶೀತ ವಾತಾವರಣ ಮುಂದುವರಿಯುವ ನಿರೀಕ್ಷೆಯಿದ್ದು, ದಟ್ಟವಾದ ಮಂಜು ಮತ್ತು ಶೀತ ಅಲೆಗಳಿಂದ ತಕ್ಷಣಕ್ಕೆ ಪರಿಹಾರ ದೊರೆಯುವುದಿಲ್ಲ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಪ್ರದೇಶದಲ್ಲಿ ಮೋಡ ಕವಿದ ವಾತಾವರಣ ಮತ್ತು ಹಗುರ ಮಳೆಯಾಗುವ ಸಾಧ್ಯತೆ ಇದ್ದು, ಗರಿಷ್ಠ ತಾಪಮಾನ 15 ಡಿಗ್ರಿ ಸೆಲ್ಸಿಯಸ್‌ಗೆ ಇಳಿಯುವ ಸಾಧ್ಯತೆಯಿದೆ.

ಇದರ ಮಧ್ಯೆ ಶನಿವಾರ ಬೆಳಗ್ಗೆ ಉತ್ತರ ಭಾರತದ ಹೆಚ್ಚಿನ ಭಾಗಗಳಲ್ಲಿ ದಟ್ಟವಾದ ಮಂಜು ಮುಸುಕಿವ ವಾತಾವರಣವಿತ್ತು. ಐತಿಹಾಸಿಕ ತಾಜ್ ಮಹಲ್ ಕೂಡ ಮಂಜಿನಿಂದ ಆವೃತವಾಗಿತ್ತು. ಅದೇ ರೀತಿ, ಕಾನ್ಪುರ ಮತ್ತು ಗ್ವಾಲಿಯರ್‌ನಂತಹ ನಗರಗಳು ಸಹ ದಟ್ಟವಾದ ಮಂಜಿನಿಂದ ಆವೃತವಾಗಿದ್ದವು. ಕಾನ್ಪುರದಲ್ಲಿ, ವೃದ್ಧರ ಗುಂಪುಗಳು ಬೆಂಕಿ ಮುಂದೆ ಚಳಿ ಕಾಯಿಸುತ್ತಿರುವ ದೃಶ್ಯಗಳು ಕಂಡುಬಂದಿವೆ.

# ಫ್ರಿಡ್ಜ್‌ನಲ್ಲಿ ಮಹಿಳೆ ಮೃತದೇಹ ಪತ್ತೆ

**ಮಧ್ಯಪ್ರದೇಶ:** ಮನೆಯಿಂದ ದುರ್ನಾತ ಬರುತ್ತಿರುವ ಹಿನ್ನಲೆಯಲ್ಲಿ ಮನೆಯ ನೆರೆ ಹೊರೆಯವರು ನೀಡಿದ ದೂರಿನ ಆಧಾರದ ಮೇಲೆ ಶೋಧ ನಡೆಸಿದಾಗ ಫ್ರಿಡ್ಜ್‌ನಲ್ಲಿ ಮಹಿಳೆಯ ಮೃತದೇಹವೊಂದು ಪತ್ತೆಯಾಗಿರುವ ಆಘಾತಕಾರಿ ಘಟನೆ ಮಧ್ಯಪ್ರದೇಶದ ದೇವಾಸ್‌ನಲ್ಲಿನ ವೃಂದಾವನ್ ಕಾಲೋನಿಯಿಂದ ವರದಿಯಾಗಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಇಲ್ಲಿನ ಸ್ಥಳೀಯ ನಿವಾಸಿಗಳು ನೀಡಿದ ತುರ್ತು ದೂರಿನ ಸೇವೆ ಆಧಾರದ ಮೇಲೆ ಬ್ಯಾಂಕ್ ನೋಟ್ ಪ್ರೆಸ್ ಪೊಲೀಸ್ ಠಾಣಾ ತಂಡ ಸ್ಥಳಕ್ಕೆ ಆಗಮಿಸಿ ತಪಾಸಣೆ ನಡೆಸುವ ವೇಳೆ ಮೃತದೇಹ ಪತ್ತಯಾಗಿದೆ.

ಪ್ರಕರಣದ ತನಿಖೆಗೆ ಉಜ್ಜೈನಿಯಿಂದ ವಿಧಿ ವಿಜ್ಞಾನ ಪ್ರಯೋಗಾಲಯದ ಅಧಿಕಾರಿಗಳು ಕೂಡ ಆಗಮಿಸಿದ್ದು, ತನಿಖೆ ಚುರುಕು ಪಡೆದುಕೊಂಡಿದೆ.

ಮೃತಪಟ್ಟ ಮಹಿಳೆಯ ಮೃತ ದೇಹದ ಗುರುತು ಇನ್ನೂ ಪತ್ತೆಯಾಗಿಲ್ಲ. ಮಹಿಳೆಯ ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ದೇವಾಸ್ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಗಿದ್ದು, ಮನೆಯನ್ನು ಪೊಲೀಸರು ಸೀಲ್ ಮಾಡಿದ್ದಾರೆ.

ಘಟನೆ ಕುರಿತು ವಿವರಣೆ ನೀಡಿದ ಪೊಲೀಸ್ ಅಧಿಕಾರಿಗಳು, ಮನೆಯಿಂದ ದುರ್ನಾತ ಬರುತ್ತಿದ್ದ ಹಿನ್ನೆಲೆ ಸ್ಥಳೀಯರು ದೂರು ನೀಡಿದ್ದರು. ಮನೆಯು ಧೀರೇಂದ್ರ ಶ್ರೀವಾತ್ಸವ್ ಎಂಬುವವರಿಗೆ ಸೇರಿದ್ದು, ಅವರು ಕಳೆದ ಜುಲೈನಲ್ಲಿ ಸಂಜಯ್ ಪಾಟಿದಾರ್ ಎಂಬುವವರಿಗೆ ಬಾಡಿಗೆ ನೀಡಿದ್ದರು. ಇದೀಗ ಮಾಲೀಕರ ಹೇಳಿಕೆ ದಾಖಲಿಸಿದ್ದು, ಬಾಡಿಗೆದಾರನಿಗೆ ಹುಡುಕಾಟ ಆರಂಭವಾಗಿದೆ ಎಂದರು.

ಮಹಿಳೆ ಯಾರು ಎಂಬುದು ಪತ್ತೆಯಾಗಿಲ್ಲ. 30–35 ವಯೋಮಾನದರಾಗಿದ್ದು, ಆಕೆ ಕೊಲೆ ಹೇಗೆ ಆಯಿತು. ಎಷ್ಟು ದಿನದಿಂದ ಮೃತದೇಹ ಫ್ರಿಡ್ಜ್‌ನಲ್ಲಿತ್ತು ಎಂಬ ಕುರಿತು ವರದಿ ಬರಬೇಕಿದ್ದು, ತನಿಖೆ ಸಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಮೀರತ್ ಸಾಮೂಹಿಕ ಹತ್ಯೆ: ಆರೋಪಿ ಸುಳಿವು ನೀಡಿದವರಿಗೆ 25,000 ಘೋಷಣೆ

**ಮೀರತ್:** ಇಲ್ಲಿನ ಲಿಸಾಡಿ ಗೇಟ್‌ನ ಸುಹೇಲ್ ಗಾರ್ಡನ್ ಕಾಲೋನಿಯಲ್ಲಿ ಸಾಮೂಹಿಕ ಹತ್ಯೆಗೊಳಗಾದ ಐವರ ಮೃತದೇಹಗಳಿಗೆ ಇಂದು ಅಂತ್ಯಕ್ರಿಯೆ ನಡೆಯಿತು. ದಂಪತಿ ಹಾಗೂ ಮೂವರು ಪುತ್ರಿಯರನ್ನು ಹತ್ಯೆ ಮಾಡಿದ ಪ್ರಕರಣದಲ್ಲಿ ಮೋಯಿನ್ ಸಹೋದರನನ್ನ ಹಿಡಿದುಕೊಟ್ಟವರಿಗೆ ಪೊಲೀಸರು 25 ಸಾವಿರ ರೂಪಾಯಿ ಬಹುಮಾನ ಘೋಷಿಸಿದ್ದಾರೆ.

ಹತ್ಯಾಕಾಂಡದ ಬಗ್ಗೆ ಎಲ್ಲರ ಬಾಯಲ್ಲೂ ಚರ್ಚೆ : ಶುಕ್ರವಾರ ಮರಣೋತ್ತರ ಪರೀಕ್ಷೆ ಬಳಿಕ ಮೃತದೇಹಗಳೆಲ್ಲ ಆಂಬ್ಯುಲೆನ್ಸ್??ನಲ್ಲಿ ಕಾಲೋನಿಗೆ ತಲುಪಿದವು. ಕುಟುಂಬ ಸದಸ್ಯರ ಅಂತಿಮ ದರ್ಶನಕ್ಕಾಗಿ ಎಲ್ಲ ಮೃತ ದೇಹಗಳನ್ನು ಸಮೀಪದ ಮದುವೆ ಮಂಟಪದಲ್ಲಿ ಕೆಲಕಾಲ ಇರಿಸಲಾಗಿತ್ತು. ನಂತರ ಅಂತ್ಯಕ್ರಿಯೆಗಾಗಿ ಸ್ಮಶಾನಕ್ಕೆ ಕೊಂಡೊಯ್ಯಲಾಯಿತು. ಈ ವೇಳೆ, ಅಲ್ಲಿ ಜನಸಾಗರವೇ ನೆರೆದಿತ್ತು.

ಈ ಬಗ್ಗೆ ಸ್ಥಳೀಯರೊಬ್ಬರು ಮಾತನಾಡಿ, ಮೋಯಿನ್ ಒಳ್ಳೆಯ ವ್ಯಕ್ತಿ. ಅವನು ಯಾರೊಂದಿಗೂ ಜಗಳವಾಡುತ್ತಿರಲಿಲ್ಲ. ಇಲ್ಲಿಗೆ ಬಂದು 2 ತಿಂಗಳ ಹಿಂದೆಯಷ್ಟೇ ಸೊಹೈಲ್ ಗಾರ್ಡನ್?ನಲ್ಲಿ ವಾಸ ಆರಂಭಿಸಿದ್ದರು. ಮನೆ ಕಟ್ಟಲು ಸಿದ್ಧತೆ ನಡೆಸಿದ್ದರು. ಮನೆಯ ಹಬ್ಬದ ನಿಮಿತ್ತ ಎಲ್ಲರಿಗೂ ಸಿಹಿ ಬಡಿಸಿದ್ದರು. ಕೊಂದವರಿಗೆ ಕಠಿಣ ಶಿಕ್ಷೆಯಾಗಬೇಕು ಎಂದು ಒತ್ತಾಯಿಸಿದ್ದಾರೆ.

ಎಸ್‌ಎಸ್‌ಪಿ ಡಾ. ವಿಪಿನ್ ತಾಡಾ ಮಾತನಾಡಿ, ಮೋಯಿನ್ ಅವರ ಇತರ ಸಂಬಂಧಿಕರು ಸ್ಥಳಕ್ಕೆ ತಲುಪಿದ್ದಾರೆ. ಆದರೆ, ಅವರ ಸಹೋದರ ನಯೀಮ್ ತಲೆಮರೆಸಿಕೊಂಡಿದ್ದಾನೆ. ಅಸ್ಮಾ ಅವರ ಸಹೋದರ ಶಮೀಮ್ ಅವರು ತಮ್ಮ ಸೋದರ ಮಾವನ ಸಹೋದರ ನಯೀಮ್, ತಸ್ಲೀಮ್ ಮತ್ತು ಸೊಸೆ ನಜ್ರಾನಾ ವಿರುದ್ಧ ಕ್ರಮ ಜರುಗಿಸುವಂತೆ ದೂರು ದಾಖಲಿಸಿದ್ದರು ಎಂದರು.



ಘಟನೆಗೆ ಸಂಬಂಧಿಸಿದಂತೆ ತಸ್ಲೀಂ ಮತ್ತು ನಜ್ರಾನಾ ಅವರನ್ನು ಬಂಧಿಸಿದ್ದೇವೆ. ಪ್ರಮುಖ ಆರೋಪಿ ನಯೀಮ್ ತಲೆಮರೆಸಿಕೊಂಡಿದ್ದಾನೆ. ಪ್ರಾಥಮಿಕ ತನಿಖೆಯಲ್ಲಿ 4 ಲಕ್ಷ ರೂಪಾಯಿ ವ್ಯವಹಾರ ಮತ್ತು ಕೌಟುಂಬಿಕ ಕಲಹವೇ ಕೊಲೆಗೆ ಕಾರಣ ಎಂಬುದು ತಿಳಿದು ಬಂದಿದೆ ಎಂದಿದ್ದಾರೆ. ನಯೀಮ್ ಬಂಧನಕ್ಕೆ 25,000 ರೂಪಾಯಿ ಬಹುಮಾನ ಘೋಷಿಸಲಾಗಿದೆ.

**ಬಂಧನಕ್ಕೆ 4 ತಂಡಗಳ ರಚನೆ :** ಮೋಯಿನ್‌ಗೆ ಸಲೀಂ, ಅಮ್ಜದ್, ಕಲೀಂ, ಮೊಮಿನ್ ಎಂಬ 4 ಜನ ಸಹೋದರರಿದ್ದು, ಇಬ್ಬರು ಮಲ ಸಹೋದರರಿದ್ದಾರೆ. ಅವರಲ್ಲಿ ಒಬ್ಬನ ಹೆಸರು ನಯೀಮ್ ಆಗಿದ್ದರೆ ಇನ್ನೊಬ್ಬನ ಹೆಸರು ತಸ್ಲೀಮ್. ಇದುವರೆಗಿನ ಪೊಲೀಸ್ ತನಿಖೆಯಲ್ಲಿ ನಯೀಮ್ ಪ್ರಮುಖ ಆರೋಪಿಯಾಗಿದ್ದಾನೆ. ಆತನ ಬಂಧನಕ್ಕೆ ನಾಲ್ಕು ತಂಡಗಳನ್ನು ರಚಿಸಲಾಗಿದೆ. ದೆಹಲಿ, ಉತ್ತರಾಖಂಡ ಸೇರಿದಂತೆ ಇತರೆಡೆ ಶೋಧ ನಡೆಸಲಾಗುತ್ತಿದೆ. ಆರೋಪಿಯ ಫೋನ್ ಸ್ವಿಚ್ಡ್ ಆಫ್ ಆಗಿದೆ.

**ಏನಿದು ಘಟನೆ:** ಲಿಸಾಡಿ ಗೇಟ್‌ನ ಸುಹೇಲ್ ಗಾರ್ಡನ್ ಕಾಲೋನಿಯಲ್ಲಿ ಮೋಯಿನ್, ಅವರ ಪತ್ನಿ ಅಸ್ಮಾ ಮತ್ತು 3 ಮಕ್ಕಳಾದ ಅಫ್ಸಾ (8), ಅಜೀಜಾ (4) ಮತ್ತು ಅದೀಬಾ (1) ಗುರುವಾರ ಬರ್ಬರವಾಗಿ ಕೊಲೆ ಮಾಡಲಾಗಿತ್ತು. ಮಕ್ಕಳ ಮೃತ ದೇಹಗಳನ್ನು ಬೆಡ್ ಬಾಕ್ಸ್‌ನಲ್ಲಿ ಬಚ್ಚಿಟ್ಟಿದ್ದರು. ಘಟನೆಯ ನಂತರ ಎಸ್‌ಎಸ್‌ಪಿ ಮತ್ತು ಇತರ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದರು. ಫೋರೆನ್ಸಿಕ್ ಮತ್ತು ಶ್ವಾನ ದಳದ ತಂಡಗಳು ಸ್ಥಳದಿಂದ ಸಾಕ್ಷ್ಯಗಳನ್ನು ಸಂಗ್ರಹಿಸಿದ್ದವು.

# ಟಿಟಿಪಿ ಉಗ್ರರಿಂದ ಕಾರ್ಮಿಕರ ಅಪಹರಣ, 8 ಜನರ ರಕ್ಷಣೆ

**ಇಸ್ಲಾಮಾಬಾದ್:** ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿ ತೆಹ್ರೀಕ್–ಇ–ತಾಲಿಬಾನ್ ಪಾಕಿಸ್ತಾನ್ (ಟಿಟಿಪಿ) ಬಂಡುಕೋರರು ಪಾಕಿಸ್ತಾನ ಪರಮಾಣು ಶಕ್ತಿ ಆಯೋಗದ (ಪಿಎಇಸಿ) 16 ಉದ್ಯೋಗಿಗಳನ್ನು ಅಪಹರಿಸಿದ್ದಾರೆ ಎಂದು ವರದಿಯಾಗಿದೆ.

ಅಪಹರಣದ ಮಾಹಿತಿ ತಿಳಿಯುತ್ತಿದ್ದಂತೆಯೇ ಶೋಧ ಕಾರ್ಯಾಚರಣೆ ಆರಂಭಿಸಿದ ಪೊಲೀಸರು ಎಂಟು ಒತ್ತೆಯಾಳುಗಳನ್ನು ಯಶಸ್ವಿಯಾಗಿ ರಕ್ಷಿಸಿದ್ದಾರೆ. ನಿರಂತರ ಉಗ್ರಗಾಮಿ ಚಟುವಟಿಕೆ ಗಳಿಂದ ಬಾಧಿತವಾಗಿರುವ ಲಕ್ಕಿ ಮಾರ್ವತ್ ಜಿಲ್ಲೆಯಲ್ಲಿ ಈ ಘಟನೆ ನಡೆದಿದೆ.

ಖಬುಲ್ ಖೇಲ್ ಅಣುಶಕ್ತಿ ಗಣಿಗಾರಿಕೆ ಯೋಜನಾ ಸ್ಥಳದ ಕಡೆಗೆ ಪ್ರಯಾಣಿಸುತ್ತಿದ್ದ ಉದ್ಯೋಗಿಗಳನ್ನು ಭಾರಿ ಶಸ್ತ್ರಸಜ್ಜಿತ ಉಗ್ರರು ರಸ್ತೆ ಮಧ್ಯದಲ್ಲಿ ತಡೆದು ದಾಳಿ ನಡೆಸಿದ್ದಾರೆ. ನಂತರ ಅವರೆಲ್ಲರನ್ನು ಅಪಹರಿಸಿ ಅವರು ಪ್ರಯಾಣಿಸುತ್ತಿದ್ದ ವಾಹನಕ್ಕೆ ಬೆಂಕಿ ಇಟ್ಟು ಸ್ಥಳದಿಂದ ಪರಾರಿಯಾಗಿದ್ದಾರೆ.

ಘಟನೆಯ ಮಾಹಿತಿ ಪಡೆದ ಸ್ಥಳೀಯ ಪೊಲೀಸರು ತಕ್ಷಣ ಕಾರ್ಯಾಚರಣೆ ನಡೆಸಿ ಎಂಟು ಜನರನ್ನು ರಕ್ಷಿಸಿದ್ದಾರೆ. ರಕ್ಷಣಾ ಕಾರ್ಯಾಚರಣೆಯ ವೇಳೆ ಮೂವರು ಗಾಯಗೊಂಡಿದ್ದು, ಅದರಲ್ಲಿ ಓರ್ವನ ಸ್ಥಿತಿ ಗಂಭೀರವಾಗಿದೆ. ಇನ್ನುಳಿದಒತ್ತೆಯಾಳು ಗಳನ್ನು ರಕ್ಷಿಸಲು ಕಾರ್ಯಾಚರಣೆ ಮುಂದುವರೆದಿದೆ.

ಅಪಹರಣದ ಜವಾಬ್ದಾರಿ ಹೊತ್ತುಕೊಂಡಿರುವ ಟಿಟಿಪಿ, ಅಪಹರಣಕ್ಕೊಳಗಾದ ಉದ್ಯೋಗಿಗಳನ್ನು ತೋರಿಸುವ ವೀಡಿಯೊವನ್ನು ಬಿಡುಗಡೆ ಮಾಡಿದೆ. ಪಾಕಿಸ್ತಾನದ ಜೈಲುಗಳಲ್ಲಿರುವ ಟಿಟಿಪಿ ಕೈದಿಗಳನ್ನು ಬಿಡುಗಡೆ ಮಾಡುವುದು ಸೇರಿದಂತೆ ಸಂಘಟನೆಯ ಇತರ ಬೇಡಿಕೆಗಳನ್ನು ಈಡೇರಿಸುವ ಮೂಲಕ ತಮ್ಮನ್ನು ಬಿಡುಗಡೆ ಮಾಡಿಸಿಕೊಳ್ಳ ಬೇಕೆಂದು ಒತ್ತೆಯಾಳುಗಳು ವೀಡಿಯೊದಲ್ಲಿ ಮನವಿ ಮಾಡಿರುವುದು ಕಾಣಿಸುತ್ತದೆ. ವೀಡಿಯೊ ಅಥವಾ ಉಗ್ರಗಾಮಿಗಳ ಹೇಳಿಕೆಗಳ ಸಾಚಾತನದ ಬಗ್ಗೆ ಇನ್ನಷ್ಟೇ ಪರಿಶೀಲನೆ ನಡೆಯಬೇಕಿದೆ.





ಅಪಹರಣಕ್ಕೊಳಗಾದ ಉದ್ಯೋಗಿಗಳು ಇಂಧನ, ಕೃಷಿ ಮತ್ತು ಔಷಧದಂತಹ ಕ್ಷೇತ್ರಗಳಲ್ಲಿ ಶಾಂತಿಯುತ ಪರಮಾಣು ಬಳಕೆಯನ್ನು ಅಭಿವೃದ್ಧಿಪಡಿಸುವ ಉದ್ದೇಶದ ಪಿಎಇಸಿ ಅಡಿಯಲ್ಲಿನ ಗಣಿಗಾರಿಕೆ ಯೋಜನೆಗಳಲ್ಲಿ ಕೆಲಸ ಮಾಡುವವರಾಗಿದ್ದಾರೆ. ಸರ್ಕಾರಿ ಮತ್ತು ಖಾಸಗಿ ಉದ್ಯೋಗಿಗಳಿಗೆ ಈ ಪ್ರದೇಶದಲ್ಲಿ ಆಗಾಗ ಭದ್ರತಾ ಅಪಾಯ ಎದುರಾಗುತ್ತಿರುವುದನ್ನು ಈ ಘಟನೆಯು ಎತ್ತಿ ತೋರಿಸಿದೆ.

ಇತ್ತೀಚಿನ ತಿಂಗಳುಗಳಲ್ಲಿ ಪಾಕಿಸ್ತಾನದಲ್ಲಿ ಉಗ್ರಗಾಮಿ ಚಟುವಟಿಕೆಗಳು ವ್ಯಾಪಕವಾಗುತ್ತಿವೆ. ಈ ಅಪಹರಣ ಘಟನೆಯ ಒಂದು ದಿನ ಮೊದಲು, ಬಲೂಚ್ ಲಿಬರೇಶನ್ ಆರ್ಮಿ (ಬಿಎಲ್‌ಎ) ಯ ಪ್ರತ್ಯೇಕತಾವಾದಿ ಉಗ್ರಗಾಮಿಗಳು ಬಲೂಚಿಸ್ತಾನದಲ್ಲಿ ಸರ್ಕಾರಿ ಕಚೇರಿಗಳು ಮತ್ತು ದುರ್ಗಮ ಪ್ರದೇಶದ ಜಿಲ್ಲೆಗಳಲ್ಲಿನ ಬ್ಯಾಂಕ್ ಮೇಲೆ ದಾಳಿ ಮಾಡಿದ್ದರು.

ಈ ಘಟನೆಗಳಲ್ಲಿ ಯಾವುದೇ ಸಾವುನೋವುಗಳು ವರದಿಯಾಗಿಲ್ಲವಾದರೂ, ಈ ದಾಳಿಯು ದೇಶಾದ್ಯಂತ ಭಯೋತ್ಪಾದಕ ಕೃತ್ಯಗಳ ತೀವ್ರತೆಯನ್ನು ಪ್ರತಿಬಿಂಬಿಸುತ್ತದೆ. ಟಿಟಿಪಿ ಮತ್ತು ಬಲೂಚ್ ದಂಗೆಕೋರರು ಅಫ್ಘಾನಿಸ್ತಾನದ ಬೆಟ್ಟಗುಡ್ಡಗಳಲ್ಲಿ ಅವಿತುಕೊಂಡು ಕಾರ್ಯಾಚರಣೆ ನಡೆಸುತ್ತಿದ್ದಾರೆ ಎಂದು ಪಾಕಿಸ್ತಾನ ಅಧಿಕಾರಿಗಳು ಆರೋಪಿಸಿದ್ದಾರೆ.

# ಹೆಂಡತಿ ಕೊಂದು, ಸುಟ್ಟು ಹಾಕಿದ ವ್ಯಕ್ತಿ ಬಂಧನ

**ಶ್ರೀನಗರ:** ಹೆಂಡತಿಯನ್ನು ಅಮಾನುಷವಾಗಿ ಕೊಂದ ವ್ಯಕ್ತಿಯೊಬ್ಬ ಆಕೆಯ ದೇಹವನ್ನು ಹಲವು ತುಂಡುಗಳಾಗಿ ಮಾಡಿ, ತಾಯಿಯ ಸಹಾಯದಿಂದ ಕೊಟ್ಟಿಗೆಯಲ್ಲಿ ಸುಟ್ಟು ಹಾಕಿರುವ ಘಟನೆ ದಕ್ಷಿಣ ಕಾಶ್ಮೀರದ ಅನಂತ್‌ನಾಗ್‌ನಲ್ಲಿನ ಐಶ್‌ಮುಕಂ ಪಹಲ್ಗಾಮ್‌ನಲ್ಲಿ ನಡೆದಿದ್ದು, ಈ ಸಂಬಂಧ ಆರೋಪಿಗಳನ್ನು ಬಂಧಿಸಲಾಗಿದೆ.



ಇಮ್ರಾನ್ ಅಹ್ಮದ್ ಖಾನ್ ಮತ್ತು ಆತನ ತಾಯಿ ಬಂಧಿತ ಆರೋಪಿಗಳು ಶಾಬನಮ್ ಅಖ್ತರ್ ಸಾವನ್ನಪ್ಪಿದ ಮಹಿಳೆ ಆಗಿದ್ದಾರೆ. ಕಳೆದ ಅಕ್ಟೋಬರ್‌ನಲ್ಲಿ ಇಮ್ರಾನ್ ಈ ಕೃತ್ಯ ಎಸಗಿದ್ದು, ಈ ಭೀಕರ ಕೊಲೆಯ ತನಿಖೆ ನಡೆಸಿದ ಪೊಲೀಸರು, ಗಂಡನಿಂದಲೇ ಈ ಹೀನ ಕೃತ್ಯ ನಡೆದಿದೆ ಎಂಬುದನ್ನು ಪತ್ತೆ ಹಚ್ಚಿ ಇದೇ ಜನವರಿ 10 ರಂದು ಆತನನ್ನು ಬಂಧಿಸಿದ್ದಾರೆ. ತನಿಖೆಯಲ್ಲಿ ಅಕ್ಟೋಬರ್ 4ರಂದು ತನ್ನ ಹೆಂಡತಿ ಕೊಂದು ಆಕೆಯನ್ನು ಬಳಿಕ ಕೊಟ್ಟಿಗೆಯಲ್ಲಿ ಸುಟ್ಟುಹಾಕಿರುವುದಾಗಿ ಆರೋಪಿ ತಪ್ಪೊಪ್ಪಿಕೊಂಡಿದ್ದಾನೆ.

ಹೆಂಡತಿ ಕಾಣೆಯಾಗಿದ್ದಾಳೆ ಎಂದು ದೂರು ನೀಡಿದ್ದ ಆರೋಪಿ: ಈ ಕೃತ್ಯ ಎಸಗಿದ ಬಳಿಕ ಇಮ್ರಾನ್ ತನ್ನ ಹೆಂಡತಿ ಕಾಣೆಯಾಗಿದ್ದಾಳೆ ಎಂದು ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದ. ತನಿಖೆಗೆ ಮುಂದಾದ ಪೊಲೀಸರಿಗೆ 10 ದಿನದ ಬಳಿಕ ಆತನ ಮನೆಯ ಕೊಟ್ಟಿಗೆಯಲ್ಲೇ ಮೃತ ದೇಹದ ಮೂಳೆ ಸೇರಿದಂತೆ ಇನ್ನಿತರ ಕುರುಹುಗಳು ಪತ್ತೆಯಾಗಿದ್ದವು.

ಮೃತಪಟ್ಟ ಮಹಿಳೆ ತನ್ನ ಎರಡನೇ ಹೆಂಡತಿಯಾಗಿದ್ದು, ಎರಡನೇ ಹೆಂಡತಿ ಕೊಲೆ ಮಾಡಿದ ಬಳಿಕ ಆತ ಮೊದಲ ಹೆಂಡತಿ ಜೊತೆ ಜೀವನ ನಡೆಸಲು ಶುರು ಮಾಡಿದ್ದ ಎಂಬುದು ತನಿಖೆಯಿಂದ ಬಯಲಾಗಿದೆ.

ಸ್ಥಳಕ್ಕೆ ಆಗಮಿಸಿದ ವಿಧಿ ವಿಜ್ಞಾನ ಪರೀಕ್ಷಾ ತಂಡ ಸ್ಥಳದಲ್ಲಿದ್ದ ಕೊಲೆಯಾದ ಮಹಿಳೆಯ ಮೂಳೆ, ಕೂದಲ ಕುರುಹು ಹಾಗೂ ಮೊಬೈಲ್ ಫೋನ್ ವಶಕ್ಕೆ ಪಡೆದಿದ್ದಾರೆ. ಇನ್ನು ಈತನ ಈ ಹೀನ ಕೃತ್ಯಕ್ಕೆ ಸಹಾಯ ಮಾಡಿದ 35 ವರ್ಷದ ಇಮ್ರಾನ್ ತಾಯಿಯನ್ನು ಪೊಲೀಸರು ಬಂಧಿಸಿದ್ದಾರೆ. ಈ ಕೃತ್ಯ ಸಂಬಂಧ ಬಿಎನ್‌ಎಸ್ ಕಾಯ್ದೆ ಅಡಿ ಆರೋಪಿ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

# ಟ್ರಂಪ್ ಸೋಲಿಸುತ್ತಿದ್ದೆ: ನಿರ್ಗಮಿತ ಅಧ್ಯಕ್ಷ ಜೋ ಬೈಡನ್

**ವಾಷಿಂಗ್ಟನ್:** ಕಳೆದ ನವೆಂಬರ್ ನಡೆದ ಸಾರ್ವತ್ರಿಕ ಚುನಾವಣೆಯಲ್ಲಿ ನಾನು ಡೊನಾಲ್ಡ್ ಟ್ರಂಪ್ ಅವರನ್ನು ಸೋಲಿಸುತ್ತಿದ್ದೆ ಎಂದು ನಿರ್ಗಮಿತ ಅಧ್ಯಕ್ಷ ಜೋ ಬೈಡನ್ ಹೇಳಿದ್ದಾರೆ. ಡೆಮಾಕ್ರಟಿಕ್ ಪಕ್ಷದ ಒಗ್ಗಟ್ಟನ್ನು ಕಾಪಾಡುವ ನಿಟ್ಟಿನಲ್ಲಿ ಸ್ಪರ್ಧೆಯಿಂದ ಅರ್ಧದಲ್ಲೇ ಹಿಂದೆ ಸರಿಯಲು ನಿರ್ಧರಿಸಿದೆ ಎಂದು ಅವರು ಹೇಳಿಕೊಂಡಿದ್ದಾರೆ.

ಅಧ್ಯಕ್ಷರೇ, ಮರು ಚುನಾವಣೆಗೆ ಸ್ಪರ್ಧಿಸದಿರುವ ನಿಮ್ಮ ನಿರ್ಧಾರಕ್ಕೆ ನೀವು ವಿಷಾದಿಸುತ್ತೀರಾ ಎಂದು ಶ್ವೇತಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಬೈಡನ್ ಅವರನ್ನು ಪ್ರಶ್ನಿಸಲಾಯಿತು. ಮಾಧ್ಯಮಗಳ ಈ ಪ್ರಶ್ನೆಗೆ ಉತ್ತರಿಸಿದ ಅವರು, ನಾನು ಹಾಗೆ ಯೋಚಿಸುವುದಿಲ್ಲ. ಆದರೆ, ಟ್ರಂಪ್ ಅವರನ್ನು ಸೋಲಿಸಬಹುದಿತ್ತು, ಕಮಲಾ ಹ್ಯಾರಿಸ್ ಕೂಡಾ ಟ್ರಂಪ್ ಅವರನ್ನ ಪರಾಜಯಗೊಳಿಸಬಹುದಿತ್ತು ಎಂದು ನಾನು ಭಾವಿಸುತ್ತೇನೆ ಎಂದರು.

**ಅಮೆರಿಕ ಅಧ್ಯಕ್ಷರಾಗಿದ್ದು ನನ್ನ ಜೀವನದ ಅತ್ಯಂತ ದೊಡ್ಡ ಗೌರವ:** ಅಮೆರಿಕ ಸಂಯುಕ್ತ ಸಂಸ್ಥಾನದ ಅಧ್ಯಕ್ಷರಾಗಿರುವುದು ನನ್ನ ಜೀವನದ ಅತ್ಯಂತ ದೊಡ್ಡ ಗೌರವವಾಗಿದೆ. ಆದರೆ, ಚುನಾವಣೆಯಲ್ಲಿ ಪಕ್ಷವನ್ನು ಒಗ್ಗಟ್ಟಿನಿಂದ ಒಯ್ಯುವುದಕ್ಕಾಗಿ ಈ ನಿರ್ಧಾರ ಕೈಗೊಂಡೆ, ಮತ್ತು ಕಮಲಾ ಹ್ಯಾರಿಸ್ ಗೆಲ್ಲಬಹುದೆಂಬ ವಿಶ್ವಾಸವಿತ್ತು ಎಂದು ಬೈಡನ್ ಹೇಳಿದರು.

ಜೂನ್‌ನಲ್ಲಿ ಚುನಾವಣಾ ಕಣದಿಂದ ಹಿಂದೆ ಸರಿದಿದ್ದ ಜೋ ಬೈಡನ್: ಜೂನ್‌ನಲ್ಲಿ ಅಟ್ಲಾಂಟಾದಲ್ಲಿ ನಡೆದ ಅಧ್ಯಕ್ಷೀಯ ಸಂವಾದದ ವೇಳೆ 82 ವರ್ಷದ ಬೈಡನ್ ಅಧ್ಯಕ್ಷೀಯ ಚುನಾವಣೆಯಿಂದ ಹಿಂದೆ ಸರಿಯುವ ತೀರ್ಮಾನ ಕೈಗೊಂಡಿದ್ದರು. ತಮ್ಮದೇ ಪಕ್ಷದ ನಾಯಕರಿಂದ ಸಾಕಷ್ಟು ಟೀಕೆಗಳನ್ನು ಎದುರಿಸಿದ್ದರಿಂದ ಬೈಡನ ಅವರು ಚುನಾವಣಾ ಕಣದಿಂದ ಮಧ್ಯದಲ್ಲೇ ಹಿಂದೆ ಸರಿಯುವ ತೀರ್ಮಾನ ಕೈಗೊಂಡಿದ್ದರು. ಹಾಗೂ ಡೆಮಾಕ್ರಟಿಕ್ ಪಕ್ಷದ ಅಧ್ಯಕ್ಷೀಯ ಅಭ್ಯರ್ಥಿಯಾಗಲು ಅವರ ಸಹವರ್ತಿ ಉಪಾಧ್ಯಕ್ಷೆ ಕಮಲಾ ಹ್ಯಾರಿಸ್ ಅವರಿಗೆ ಅವಕಾಶ ಮಾಡಿಕೊಟ್ಟಿದ್ದರು.



ಆದರೆ ಕಮಲಾ ಹ್ಯಾರಿಸ್ ಟ್ರಂಪ್ ವಿರುದ್ಧ ಸೋಲು ಅನುಭವಿಸಿದ್ದರು. ಸಾರ್ವತ್ರಿಕ ಚುನಾವಣೆಯಲ್ಲಿ ರಿಪಬ್ಲಿಕನ್ ಪಕ್ಷ ಕ್ಲೀನ್ ಸ್ವೀಪ್ ಮಾಡಿ ಅಧಿಕಾರಕ್ಕೆ ಏರಿದೆ. ಮಾತ್ರವಲ್ಲದೇ ಹೌಸ್ ಆಫ್ ರೆಪ್ರೆಸೆಂಟೇಟಿವ್ಸ್‌ನಲ್ಲಿ ಬಹುಮತ ಉಳಿಸಿಕೊಂಡಿದೆ.

**ಜನವರಿ 20 ರಂದು ಟ್ರಂಪ್ ಅಧಿಕಾರ ಸ್ವೀಕಾರ, ಬೈಡನ್ ನಿರ್ಗಮನ:** ಜನವರಿ 20 ರಂದು ಡೊನಾಲ್ಡ್ ಟ್ರಂಪ್ 2ನೇ ಬಾರಿಗೆ ಅಮೆರಿಕ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಲಿದ್ದಾರೆ. ಅದಕ್ಕೂ ಮೊದಲು ಜೋ ಬೈಡನ್ ಶ್ವೇತಭವನ ತೊರೆಯಲಿದ್ದಾರೆ. ಜೋ ಬೈಡನ್ ನಾಲ್ಕು ವರ್ಷಗಳ ಅವಧಿ ಮುಗಿಸಿದ್ದು, ವಯಸ್ಸಿನ ಕಾರಣ ಚುನಾವಣಾ ಕಣದಿಂದ ಅರ್ಧದಲ್ಲೇ ಹಿಂದೆ ಸರಿದು, ಕಮಲಾ ಹ್ಯಾರಿಸ್‌ಗೆ ಅವಕಾಶ ಮಾಡಿಕೊಟ್ಟಿದ್ದರು.

# ಕ್ಯಾಲಿಫೋರ್ನಿಯಾ ಕಾಳ್ಗಿಚ್ಚು: ಮನೆಗಳ ಅಸ್ತಿತ್ವ ಹುಡುಕುತ್ತಿರುವ ಜನರು

**ಲಾಸ್ ಏಂಜಲೀಸ್:** ಯುನೈಟೆಡ್ ಸ್ಟೇಟ್‌ನ ಎರಡನೇ ಅತಿದೊಡ್ಡ ನಗರ ಲಾಸ್ ಏಂಜಲೀಸ್‌ನಲ್ಲಿ ಹರಡುತ್ತಿರುವ ಕಾಳ್ಗಿಚ್ಚಿಗೆ ತಮ್ಮ ಮನೆಗಳು ಆಹುತಿಯಾಗುತ್ತಿರುವುದನ್ನು ಕಂಡ ಅನೇಕರು ಆಘಾತಕ್ಕೆ ಒಳಗಾಗಿದ್ದಾರೆ. ಈ ದುರಂತದಲ್ಲಿ 13 ಮಿಲಿಯನ್ ಜನರು ಸ್ಥಳಾಂತಗೊಂಡಿದ್ದು, ಇದೀಗ ಬೆಂಕಿಯಲ್ಲಿ ಸುಟ್ಟು ಕರಕಲಾದ ಮನೆಗಳನ್ನು ಕಂಡು ಮರಗುತ್ತಿದ್ದು, ಹೊಸ ಬದುಕು ಕಟ್ಟಿಕೊಳ್ಳುವ ಸವಾಲನ್ನು ಎದುರಿಸುತ್ತಿದ್ದಾರೆ.

ಕಳೆದ ಏಂಟು ತಿಂಗಳಿನಿಂದ ಮಳೆ ಕಾಣದ ಲಾಸ್ ಏಂಜಲೀಸ್‌ನಲ್ಲಿ ಶುಕ್ರವಾರ ಬೆಂಕಿ ಆರಿಸುವ ಪ್ರಕ್ರಿಯೆಗೆ ಗಾಳಿ ಶಾಂತವಾಗುವ ಮೂಲಕ ಕೊಂಚ ಸಹಾಯ ಮಾಡಿತು. ಪಾಲಿಸೇಡ್‌ನ ಪೂರ್ವ ಭಾಗದಲ್ಲಿ ಬೆಂಕಿ ಕೆನ್ನಾಲಿಗೆ ಹರಡಿದ್ದು ಶುಕ್ರವಾರ ಸಂಜೆ ಕೂಡ ಸ್ಥಳಾಂತರ ಕೆಲಸ ಮುಂದುವರೆದಿದೆ. ಕಾಡ್ಗಿಚ್ಚಿನ ಭೀಕರತೆ (ಎಪಿ)



ಅಲ್ಟಡೆನಾನಲ್ಲಿ ಬೆಂಕಿ ಕೆನ್ನಾಲಿಗೆ ಕಾಣಿಸಿಕೊಂಡು ತಮ್ಮ ಮನೆ ಕೂಡ ಆಹುತಿಯಾಗುವುದನ್ನು ಕಂಡ ಬ್ರಿಡ್ಜೆಟ್ ಬರ್ಗ್, ಎರಡು ದಿನದ ಬಳಿಕ ಕುಟುಂಬದೊಂದಿಗೆ ಮನೆಯಿದ್ದ ಸ್ಥಳಕ್ಕೆ ಮರಳಿದ್ದಾರೆ. ಇಲ್ಲಿ ಆಕೆ ತನ್ನ ಮನೆಯ ನೆನಪುಗಳನ್ನು ಮೆಲುಕು ಹಾಕಿದ್ದು, ಕಂಬನಿ ಮಿಡಿದಿದ್ದಾರೆ.

ಎಲ್‌ಎಯಿಂದ 25 ಮೈಲಿವರೆಗೆ ಹರಡಿರುವ ಕಾಳ್ಗಿಚ್ಚಿನಿಂದ ಮನೆ, ಅಪಾರ್ಟ್‌ಮೆಂಟ್ ಕಟ್ಟಡ, ಉದ್ಯಮ ಸೇರಿದಂತೆ 12,000ಕ್ಕೂ ಹೆಚ್ಚು ಕಟ್ಟಡಗಳು, ಹಲವು ಕಾರುಗಳು ಸುಟ್ಟು ಕರಕಲಾಗಿದ್ದು, ಈ ಭೀಕರ ಕಾಳ್ಗಿಚ್ಚಿಗೆ ಕಾರಣವನ್ನು ಯಾರು ಕೂಡ ಪತ್ತೆ ಮಾಡಿಲ್ಲ.

ನಾಯಕತ್ವದ ವೈಫಲ್ಯದ ಕುರಿತು ಆರೋಪ ಕೇಳಿ ಬಂದಿದ್ದು, ರಾಜಕೀಯ ಟೀಕೆಗಳಿಗೆ ಕಾರಣವಾಗಿರುವ ಘಟನೆಗೆ ಸಂಬಂಧಿಸಿದಂತೆ ತನಿಖೆ ಸಾಗಿದೆ. ಗವರ್ನರ್ ಗವಿನ್ ನ್ಯೂಸಮ್ ಶುಕ್ರವಾರ, ದೀರ್ಘ ತೊಂದರೆಗೆ ಕಾರಣವಾಗುತ್ತಿರುವ ಈ ಕಾಳ್ಗಿಚ್ಚನ್ನು ನಂದಿಸಲು ಸುಮಾರು 117 ಮಿಲಿಯನ್ ಗ್ಯಾಲನ್ ನೀರನ್ನು ಅಣೆಕಟ್ಟುಗಳಿಂದ ಬಳಸುವಂತೆ ಆದೇಶಿಸಿದ್ದಾರೆ.

ಈ ನಡುವೆ ಲಾಸ್ ಏಜಂಲೀಸ್ ಅಗ್ನಿ ಶಾಮಕದಳದ ಮುಖ್ಯಸ್ಥ ಕ್ರಿಸ್ಟಿನ ಕ್ರೌಲಿ, ಅಗ್ನಿಶಾಮಕದಳದ ಸಿಬ್ಬಂದಿಗೆ ಸಾಕಷ್ಟು ಹಣ ನೀಡಿಲ್ಲ ಎಂದು ಆರೋಪಿಸಿದ್ದು, ನೀರಿನ ಬಿಕ್ಕಟ್ಟಿನ ಕುರಿತು ಕೂಡ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಕಾಳ್ಗಿಚ್ಚಿಗೆ ಪಾಲಿಸಡೇಸ್‌ನಲ್ಲಿ 11 ಜನರು ಸಾವನ್ನಪ್ಪಿದ್ದು, ಈಟೋನ್ ಫೈರ್‌ನಲ್ಲಿ ಆರು ಮಂದಿ ಮೃತಪಟ್ಟಿದ್ದಾರೆ ಎಂದು ಎಲ್‌ಎ ಕಂಟ್ರಿ ಮೆಡಿಕಲ್ ಪರೀಕ್ಷಕ ಅಧಿಕಾರಿ ತಿಳಿಸಿದ್ದಾರೆ. ಈ ನಡುವೆ ಕಣ್ಮರೆಯಾಗಿರುವವರ ಕುರಿತು ವರದಿ ನೀಡುವಂತೆ ತಿಳಿಸಲಾಗಿದ್ದು, ಇನ್ನೂ 10 ಸಾವಿರ ಮಂದಿ ಸ್ಥಳಾಂತರವಾಗಬೇಕಿದೆ.

ಈ ದುರಂತವೂ ಹೋಟೆಲ್ ವೈಟರ್‌ರಿಂದ ಸಿನಿಮಾ ತಾರೆಯರವರೆಗೆ ಪ್ರತಿಯೊಬ್ಬರ ಮನೆಯನ್ನು ಕಿತ್ತುಕೊಂಡಿದ್ದು, ಸರ್ಕಾರ ಇದರ ಹಾನಿಯನ್ನು ಇನ್ನು ಅಂದಾಜಿಸಬೇಕಿದೆ. ಖಾಸಗಿ ಘಟಕಗಳು ಅಂದಾಜಿಸಿದಂತೆ 10 ಬಿಲಿಯನ್ ಡಾಲರ್ ನಷ್ಟವಾಗಿದೆ. ಈ ನಡುವೆ, ವಾಲ್ಟ್ ಡಿಸ್ನಿ ಕಾಳ್ಗಿಚ್ಚಿನ ಸಂತ್ರಸ್ತರಿಗೆ 15 ಮಿಲಿಯನ್ ಡಾಲರ್ ನೆರವು ನೀಡಿದ್ದು, ಪುನರ್ ನಿರ್ಮಾಣದಲ್ಲಿ ಸಹಾಯ ಮಾಡುವುದಾಗಿ ತಿಳಿಸಿದೆ.

ಶಾಲೆಗಳು, ಚರ್ಚ್‌ಗಳು, ಲೈಬ್ರರಿಗಳು, ಬೂಟೀಕ್‌ಗಳು, ಬಾರ್‌ಗಳು, ರೆಸ್ಟೋರೆಂಟ್‌ಗಳು, ಬ್ಯಾಂಕ್‌ಗಳು, ಇಲ್ಲಿನ ಇತಿಹಾಸ ಸಾರುತ್ತಿದ್ದ ಸ್ಥಳೀಯ ಗುರುತುಗಳು ಬೆಂಕಿಗೆ ಆಹುತಿಯಾಗಿದೆ.


# ಗಣಿ ಸ್ಫೋಟದಲ್ಲಿ ನಾಲ್ವರು ಸಾವು

**ಕ್ವೆಟ್ಟಾ:** ಕ್ವೆಟ್ಟಾದ ಸಂಜ್ಡಿ ಪ್ರದೇಶದಲ್ಲಿ ಕಲ್ಲಿದ್ದಲು ಗಣಿಯಲ್ಲಿ ಅನಿಲ ಸ್ಫೋಟ ಸಂಭವಿಸಿ ನಾಲ್ವರು ಗಣಿ ಕಾರ್ಮಿಕರು ಮೃತಪಟ್ಟಿದ್ದಾರೆ. ಗಣಿಯೊಳಗೆ ಇನ್ನೂ ಎಂಟು ಮಂದಿ ಸಿಲುಕಿರುವ ಶಂಕೆ ಇದ್ದು, ಅವರೆಲ್ಲರನ್ನೂ ರಕ್ಷಣೆ ಮಾಡುವ ಪ್ರಯತ್ನಗಳು ಮುಂದುವರೆದಿವೆ ಎಂದು ಅಲ್ಲಿನ ರಕ್ಷಣಾ ತಂಡಗಳು ಹೇಳಿವೆ ಎಂದು ಅಲ್ಲಿನ ಸುದ್ದಿ ಮಾಧ್ಯಮಗಳು ಶುಕ್ರವಾರ ವರದಿ ಮಾಡಿವೆ.

ಸ್ಫೋಟ ಸಂಭವಿಸಿದ ತಕ್ಷಣಾ ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದ್ದು, 27 ಗಂಟೆಗಳಿಗೂ ಹೆಚ್ಚು ಕಾಲದಿಂದ ಕಾರ್ಯಾಚರಣೆ ಮುಂದುವರೆದಿದೆ. ಗಣಿಯೊಳಗೆ ಸಿಕ್ಕಿಬಿದ್ದ ಗಣಿಗಾರರನ್ನು ತಲುಪಲು ಅಧಿಕಾರಿಗಳು ಅವಿರತವಾಗಿ ಶ್ರಮಿಸುತ್ತಿದ್ದಾರೆ. ಪ್ರಾಂತೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಗಣಿಯಿಂದ ಮೂರು ಮೃತದೇಹಗಳನ್ನು ವಶಕ್ಕೆ ಪಡೆದಿದೆ ಎಂದು ದೃಢಪಡಿಸಿದೆ. ಒಟ್ಟು ನಾಲ್ವರು ಕಾರ್ಮಿಕರು ಮೃತಪಟ್ಟಿದ್ದಾರೆ.

ಸ್ಥಳೀಯ ಕಾಲಮಾನ ಗುರುವಾರ ಸಂಜೆ 4:00 ಗಂಟೆಗೆ ಈ ದುರ್ಘಟನೆ ಸಂಭವಿಸಿದ್ದು, ಅನಿಲ ಸ್ಫೋಟದಿಂದಾಗಿ ಕಲ್ಲಿದ್ದಲು ಗಣಿಯ ಒಂದು ಭಾಗ ಕುಸಿದು 12 ಕಾರ್ಮಿಕರು ಸಿಲುಕಿಕೊಂಡಿದ್ದರು. ಈ ಎಲ್ಲ ಕಾರ್ಮಿಕರು ಗಣಿಯ ಸುಮಾರು 4300 ಅಡಿ ಆಳದಲ್ಲಿ ಕೆಲಸ ಮಾಡುತ್ತಿದ್ದರು.ಗಣಿಯೊಳಗೆ ದೊಡ್ಡ ಸ್ಫೋಟ ಸಂಭವಿಸಿದ್ದರಿಂದ ಅಲ್ಲಿ ಸಿಲುಕಿದವರ ರಕ್ಷಣೆಗೆ ಪರ್ಯಾಯ ಮಾರ್ಗ ರಚನೆಗೆ ರಕ್ಷಣಾ ತಂಡಗಳು ಕೆಲಸ ಮಾಡುತ್ತಿವೆ.

ಗಣಿಯೊಳಗಿನ ಅನಿಲ ಮತ್ತು ಸವಾಲಿನ ಹವಾಮಾನದ ಕಾರಣದಿಂದಾಗಿ ಕಾರ್ಯಾಚರಣೆ ಕಷ್ಟಕರವಾಗಿದ್ದು, ಸ್ಥಳೀಯ ಗಣಿ ಕೆಲಸಗಾರರು ಕಆಓಂ ತಂಡಗಳಿಗೆ ಸಹಾಯ ಮಾಡುತ್ತಿದ್ದಾರೆ. ಮಾರ್ಚ್ 2024 ರಲ್ಲಿ, ಬಲೂಚಿಸ್ತಾನದ ಹರ್ನೈನಲ್ಲಿ ಕಲ್ಲಿದ್ದಲು ಗಣಿಯಲ್ಲಿ 18 ಗಣಿಗಾರರು ಸಿಕ್ಕಿಬಿದ್ದಾಗ ಇದೇ ರೀತಿಯ ಘಟನೆ ನಡೆದಿತ್ತು. ಪಾರುಗಾಣಿಕಾ ತಂಡಗಳು 12 ಶವಗಳನ್ನು ಯಶಸ್ವಿಯಾಗಿ ಹೊರತೆಗೆಯುವಲ್ಲಿ ಯಶಸ್ವಿಯಾಗಿದ್ದರೆ, ಗಾಯಗೊಂಡ ಸ್ಥಿತಿಯಲ್ಲಿದ್ದ ಆರು ಕಾರ್ಮಿಕರನ್ನು ರಕ್ಷಣೆ ಮಾಡಲಾಗಿತ್ತು.



# ಅರಿಶಿಣ ಶಾಸ್ತ್ರವೋ, ಮೊದಲ ರಾತ್ರಿಯೊ?

ನಟ ಮತ್ತು ನಿರ್ದೇಶಕ ಅನುರಾಗ್ ಕಶ್ಯಪ್ ಮತ್ತು ಮಾಜಿ ಪತ್ನಿ ಆರತಿ ಬಜಾಜ್ ಅವರ ಮಗಳು ಆಲಿಯಾ ಕಶ್ಯಪ್ ಇತ್ತೀಚೆಗೆ ಮದುವೆಯಾದರು. ಕಳೆದ ಡಿಸೆಂಬರ್ ತಿಂಗಳಿನಲ್ಲಿ ಈ ಜೋಡಿಯ ಮದುವೆಯಾಗಿದೆ. ಆಲಿಯಾ ಅವರು, ವಿದೇಶಿ ಯುವಕ ಶೇನ್ ಗ್ರೆಗೊಯಿರ್ ಅವರ ಜೊತೆ ದೀರ್ಘ ಕಾಲ ಡೇಟಿಂಗ್‌ನಲ್ಲಿದ್ದರು. ಕೊನೆಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದಾರೆ.



ಡಿಸೆಂಬರ್ 11ರಂದು ಇವರ ಮದುವೆ ಮುಂಬೈನ ಮಹಾಲಕ್ಷ್ಮೀ ರೇಸ್ ಕೋರ್ಸ್‌ನಲ್ಲಿರುವ ಬಾಂಬೆ ಕ್ಲಬ್‌ನಲ್ಲಿ ನಡೆದಿದೆ. ಆದರೆ ಇದೀಗ ಮದುವೆಗೂ ಮುನ್ನ ನಡೆದ ಅರಿಶಿಣ ಶಾಸ್ತ್ರದ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ಇದರಲ್ಲಿ ಜೋಡಿ ಮಂಚದ ಮೇಲೆ ಮುದ್ದು ಮಾಡುವುದನ್ನು ನೋಡಬಹುದು. ಮಂಚವನ್ನು ಮೊದಲ ರಾತ್ರಿಯ ಹಾಗೆ ಹೂವಿನಿಂದ ಶೃಂಗಾರ ಮಾಡಲಾಗಿದೆ. ಹಳದಿ ಹೂವುಗಳನ್ನು ಈ ಜೋಡಿಯ ಮೇಲೆ ಎಸೆಯಲಾಗುತ್ತಿದೆ. ಮಂಚದ ಮೇಲೆ ಜೋಡಿ ನೋಡಿ ಇದು ಅರಿಶಿಣ ಶಾಸ್ತ್ರವೋ, ಮೊದಲ ರಾತ್ರಿಯೋ ಎಂದು ನೆಟ್ಟಿಗರು ಪ್ರಶ್ನಿಸುತ್ತಿದ್ದಾರೆ. ಅಂದಹಾಗೆ, ಶೇನ್ ಗ್ರೆಗೊಯಿರ್ ರಾಕೆಟ್ ಪವರ್ಡ್ ಸೌಂಡ್‌ನ ಸಂಸ್ಥಾಪಕ. 23 ವರ್ಷದ ಈತ ಅಮೆರಿಕಾದ ಮೂಲದ ಉದ್ಯಮಿಯು ಹೌದು. ಆಲಿಯಾ ಮತ್ತು ಶೇನ್ ನಡುವೆ ಇಂಡೋನೇಷ್ಯಾದ ಬಾಲಿಯಲ್ಲಿ ಪ್ರೀತಿ ಚಿಗುರೊಡೆಯಿತು. ಬಳಿಕ ಡೇಟಿಂಗ್ ಮಾಡಲು ಪ್ರಾರಂಭಿಸಿದ್ದರು.

ಇನ್ನು ಇವರ ಮದುವೆಯ ದಿನದ ವಿಡಿಯೋಗಳು ಕೂಡ ಸೋಷಿಯಲ್ ಮೀಡಿಯಾದಲ್ಲಿ ಹರಿದಾಡಿದ್ದವು. ಈ ವಿಡಿಯೋದಲ್ಲಿ ಅನುರಾಗ್ ಕಶ್ಯಪ್ ಡಿಜೆ ಕನ್ಸೋಲ್ ಹಿಂದೆ ನಿಂತು ಕಾಕ್‌ಟೇಲ್ ಪಾರ್ಟಿಯಲ್ಲಿ ಸಿಕ್ಕಾಪಟ್ಟೆ ಡಾನ್ಸ್ ಮಾಡಿದ್ದರು. ಅನುರಾಗ್ ಮತ್ತು ಗಣೇಶ್ ಅಗ್ನಿಪಥ್ ಅವರು ಚಿಕನಿ ಚಮೇಲಿ ಹಾಡಿ ಎಲ್ಲರನ್ನೂ ರಂಜಿಸಿದ್ದರು.

ಅನುರಾಗ್ ಸಿಂಗ್ ಕಶ್ಯಪ್ ಅವರು ಕುರಿತು ಹೇಳುವುದಾದರೆ, ಇವರು ಚಲನಚಿತ್ರ ನಿರ್ದೇಶಕ, ನಿರ್ಮಾಪಕ ಮತ್ತು ಚಿತ್ರಕಥೆಗಾರ. ಕಶ್ಯಪ್ ಅವರು ಪಾಂಚ್ ಚಿತ್ರದ ಮೂಲಕ ನಿರ್ದೇಶನಕ್ಕೆ ಪದಾರ್ಪಣೆ ಮಾಡಿದರು. ಚಲನಚಿತ್ರ ನಿರ್ಮಾಪಕರಾಗಿ ಸಾಕಷ್ಟು ಹೆಸರು ಮಾಡಿರುವ ಅವರು, 1993 ರ ಮುಂಬೈ ಬಾಂಬ್ ದಾಳಿಯ ಬಗ್ಗೆ ವಿವಾದಾತ್ಮಕ ಮತ್ತು ಪ್ರಶಸ್ತಿ ವಿಜೇತ ಹಿಂದಿ ಚಿತ್ರ ಬ್ಲ್ಯಾಕ್ ಫ್ರೈಡೇ (2004)ಯಿಂದ ಫೇಮಸ್ ಆದವರು. ಬಳಿಕ ನೋ ಸ್ಮೋಕಿಂಗ್ (2007), ದೇವ್ ಡಿ (2009), ಗುಲಾಲ್ (2009), ದಟ್ ಗರ್ಲ್ ಇನ್ ಯೆಲ್ಲೊ ಬೂಟ್ಸ್ (2011) ಮತ್ತು ಗ್ಯಾಂಗ್ಸ್ ಆಫ್ ವಾಸ್ಸೇಪುರ್ (2012) ಚಿತ್ರಗಳಿಗೆ ಹೆಸರುವಾಸಿಯಾಗಿದ್ದಾರೆ.



ಚಿತ್ರಕಥೆಗಾರರಾಗಿ, ಅವರು ಫಿಲ್ಮ್‌ಫೇರ್ ಪ್ರಶಸ್ತಿ ವಿಜೇತ ಸತ್ಯ (1998) ಮತ್ತು ಅಕಾಡೆಮಿ ಪ್ರಶಸ್ತಿಗೆ ನಾಮನಿರ್ದೇಶಿತ ಕೆನಡಾದ ಚಲನಚಿತ್ರ ವಾಟರ್ (2005) ಚಿತ್ರಕಥೆಗಳನ್ನು ಬರೆದಿದ್ದಾರೆ. ಅವರು 2009 ರಲ್ಲಿ ಅನುರಾಗ್ ಕಶ್ಯಪ್ ಫಿಲ್ಮ್ಸ್ ಪ್ರೈವೇಟ್ ಲಿಮಿಟೆಡ್ ಎಂಬ ತಮ್ಮ ಚಲನಚಿತ್ರ ನಿರ್ಮಾಣ ಕಂಪನಿಯನ್ನು ಸ್ಥಾಪಿಸಿದರು. ಇವರ ಪುತ್ರಿ ಆಲಿಯಾ ಸಿನಿ ಪ್ರಪಂಚದಿಂದ ದೂರ ಇದ್ದಾರೆ.

# 'ನನಗೆ ವಿಷ ಹಾಕಿದ್ರು': ಆರೋಪ!

**ಮೆಲ್ಬರ್ನ್:** 2022ರ ಆಸ್ಟ್ರೇಲಿಯನ್ ಓಪನ್ ಗ್ರ್ಯಾನ್ ಸ್ಲಾಂ ಟೆನಿಸ್ ವೇಳೆ ತಮ್ಮ ಆಹಾರಕ್ಕೆ ವಿಷ ಬೆರೆಸಲಾಗಿತ್ತು ಎಂದು 24 ಗ್ರ್ಯಾನ್‌ಸ್ಲಾಂ ಪ್ರಶಸ್ತಿಗಳ ಒಡೆಯ ನೋವಾಕ್ ಜೋಕೋವಿಚ್ ಗಂಭೀರ ಆರೋಪ ಮಾಡಿದ್ದಾರೆ. 2022ರ ಆಸ್ಟ್ರೇಲಿಯನ್ ಓಪನ್‌ನಲ್ಲಿ ಪಾಲ್ಗೊಳ್ಳಲು ಸರ್ಬಿಯಾದ ಜೋಕೋ ಮೆಲ್ಬರ್ನ್‌ಗೆ ಆಗಮಿಸಿದ್ದರು. ಆದರೆ ಕೋವಿಡ್ ಲಸಿಕೆ ಹಾಕಲು ನಿರಾಕರಿಸಿದ್ದಕ್ಕೆ ಜೋಕೋಗೆ ಟೂರ್ನಿಯಲ್ಲಿ ಆಡಲು ಅವಕಾಶ ಸಿಕ್ಕಿರಲಿಲ್ಲ. ಬದಲಾಗಿ ಅವರನ್ನು ಮೆಲ್ಬರ್ನ್‌ನಲ್ಲೇ ದಿಗ್ಬಂಧನದಲ್ಲಿರಿಸಿ, ಬಳಿಕ ಗಡೀಪಾರು ಮಾಡಲಾಗಿತ್ತು.



ಈ ಬಗ್ಗೆ ಸಂದರ್ಶನವೊಂದರಲ್ಲಿ ಮಾತನಾಡಿರುವ ಮಾಜಿ ವಿಶ್ವನಂ.1 ಜೋಕೋ, 'ಮೆಲ್ಬರ್ನ್ ಹೋಟೆಲ್ ನಲ್ಲಿದ್ದಾಗ ನನ್ನ ಆಹಾರಕ್ಕೆ ಸೀಸ ಹಾಗೂ ಪಾದರಸ ಬೆರೆಸಲಾಗಿತ್ತು. ಇದರಿಂದಾಗಿ ನನ್ನ ಆರೋಗ್ಯದಲ್ಲಿ ಏರುಪೇರಾಗಿತ್ತು.ಸರ್ಬಿಯಾಗೆ ಮರಳಿದ ಬಳಿಕ ಪರೀಕ್ಷೆ ಮಾಡಿಸಿದಾಗ ನನ್ನ ದೇಹದಲ್ಲಿ ಭಾರಿ ಪ್ರಮಾಣದ ಲೋಹದ ಅಂಶ ಪತ್ತೆಯಾಗಿತ್ತು. ಆಹಾರದಲ್ಲೇ ಸೀಸ, ಪಾದರಸ ಬೆರೆಸಿದ್ದು ಆಗ ಗೊತ್ತಾ ಯಿತು. ಆದರೆ ಈ ಬಗ್ಗೆ ನಾನು ಯಾವತ್ತೂ ಸಾರ್ವಜನಿಕವಾಗಿ ಮಾತನಾಡಿಲ್ಲ' ಎಂದು ಆರೋಪಿಸಿದ್ದಾರೆ. 2022ರಲ್ಲಿ ಗಡೀಪಾರಾಗಿದ್ದ ಜೋಕೋವಿಚ್, 2023ರಲ್ಲಿ ಆಸ್ಟ್ರೇಲಿಯನ್ ಓಪನ್ ಗೆದ್ದಿದ್ದರು. ಕಳೆದ ವರ್ಷ ಸೆಮಿಫೈನಲ್‌ನಲ್ಲಿ ಸೋತಿದ್ದರು. ಅವರು ಈ ವರೆಗೂ 10 ಬಾರಿ ಆಸ್ಟ್ರೇಲಿಯನ್ ಓಪನ್ ಚಾಂಪಿಯನ್ ಆಗಿದ್ದಾರೆ. 2025ರ ಮೊದಲ ಗ್ರಾನ್‌ಸ್ಲಾಂ ಟೂರ್ನಿಯಾಗಿರುವ ಆಸ್ಟ್ರೇಲಿಯನ್ ಓಪನ್ ಟೆನಿಸ್ ನ ಡ್ರಾ ಬಿಡುಗಡೆಗೊಂಡಿದ್ದು, 10 ಬಾರಿ ಚಾಂಪಿಯನ್ ನೋವಾಕ್ ಜೋಕೋವಿಚ್ ಪುರುಷರ ಸಿಂಗಲ್ ಮೊದಲ ಸುತ್ತಿನಲ್ಲಿ ಭಾರತೀಯ ಮೂಲದ ನಿಶೇಶ್ ಬಸವರೆಡ್ಡಿ ವಿರುದ್ಧ ಸೆಣಸಾಡಲಿದ್ದಾರೆ. ಜೋಕೋ ಹಾಗೂ ಕಾರ್ಲೊಸ್ ಆಲ್ಕರಜ್ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಮುಖಾಮುಖಿಯಾಗುವ ಸಾಧ್ಯತೆಯಿದೆ.

# ಸಾತ್ವಿಕ್-ಚಿರಾಗ್ ಸೆಮಿಫೈನಲ್‌ಗೆ ಲಗ್ಗೆ


**ಕೌಲಾಲಂಪುರ:** ಭಾರತದ ತಾರಾ ಡಬಲ್ಸ್ ಜೋಡಿ ಸಾತ್ವಿಕ್ –ಚಿರಾಗ್ ಶೆಟ್ಟಿ ಮಲೇಷ್ಯಾ ಓಪನ್ ಸೂಪರ್ 1000 ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಸೆಮಿಫೈನಲ್ ಪ್ರವೇಶಿಸಿದೆ.

ಕಳೆದ ಬಾರಿ ಟೂರ್ನಿಯಲ್ಲಿ ರನ್ನರ್ –ಅಪ್ ಆಗಿದ್ದ ಭಾರತೀಯ ಜೋಡಿ ಶುಕ್ರವಾರ ನಡೆದ ಈ ಬಾರಿ ಟೂರ್ನಿಯ ಕ್ವಾರ್ಟರ್ ಫೈನಲ್‌ನಲ್ಲಿ ಮಲೇಷ್ಯಾದ ಯೆವ್ ಸಿನ್ ಒಂಗ್ ಹಾಗೂ ಯೇ ಯಿ ಟಿಯೊ ವಿರುದ್ಧ 26–24, 21–15ರಲ್ಲಿ ಗೆಲುವು ಸಾಧಿಸಿತು. ಸೆಮಿಫೈನಲ್‌ನಲ್ಲಿ 7ನೇ ಶ್ರೇಯಾಂಕಿತ ಜೋಡಿಗೆ ದಕ್ಷಿಣ ಕೊರಿಯಾದ ವೊನ್ ಹೋಕಿಮ್ ಹಾಗೂ ಸ್ಯುಂಗ್ ಜಾಯ್‌ಸಿಯೊ ಸವಾಲು ಎದುರಾಗಲಿದೆ.

ಕ್ವಾರ್ಟರ್ ಪಂದ್ಯ 49 ನಿಮಿಷಗಳ ಕಾಲ ನಡೆಯಿತು. ಮೊದಲ ಗೇಮ್‌ನಲ್ಲಿ ಒಂದು ಹಂತದಲ್ಲಿ ಭಾರತದ ಜೋಡಿ ಮುನ್ನಡೆ ಯಲ್ಲಿದ್ದರೂ, ಮಲೇಷ್ಯಾದ ಶಟ್ಲರ್‌ಗಳು ಹೋರಾಟ ಬಿಡಲಿಲ್ಲ. ಆದರೆ ಕೊನೆಯಲ್ಲಿ ಸತತ 4 ಗೇಮ್ ಪಾಯಿಂಟ್ ಉಳಿಸಿಕೊಂಡು ಜಯಗಳಿಸಿತು. 2ನೇ ಗೇಮ್‌ನಲ್ಲಿ ಭಾರತಕ್ಕೆ ಸುಲಭ ಗೆಲುವು ಲಭಿಸಿತು. ಇದಕ್ಕೂ ಮೊದಲು ಸಾತ್ವಿಕ್ –ಚಿರಾಗ್ ಶೆಟ್ಟಿ ಮಲೇಷ್ಯಾ ಓಪನ್ ಸೂಪರ್ 1000 ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಪ್ರೀ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಮಲೇಷ್ಯಾದ ಅಜಿಯಾನ್–ಟ್ಯಾನ್ ಡಬ್ಲ್ಯುಕೆ ವಿರುದ್ಧ ಭಾರತೀಯ ಜೋಡಿ 21–15, 21–15ರಲ್ಲಿ ಗೆಲುವು ಸಾಧಿಸಿತು. ಇನ್ನು ಪುರುಷರ ಸಿಂಗಲ್ಸ್ 2ನೇ ಸುತ್ತಿನಲ್ಲಿ 32 ವರ್ಷದ ಪ್ರಣಯ್ ಚೀನಾದ ಲಿ ಶಿ ಫೆಂಗ್ ವಿರುದ್ಧ 8–21, 21–15, 21–23ರಲ್ಲಿ ವೀರೋಚಿತ ಸೋಲು ಕಂಡರು. ಮಹಿಳಾ ಸಿಂಗಲ್ಸ್‌ನಲ್ಲಿ ಮಾಳವಿಕಾ ಅವರು ಚೀನಾದ ಹ್ಯಾನ್ ಯುವಿರುದ್ಧ 18–21, 11–21ರಲ್ಲಿ ಪರಾಭವಗೊಂಡರು. ಮಹಿಳಾ ಡಬಲ್ಸ್‌ನಲ್ಲಿ ಜಾಲಿ–ಗಾಯತ್ರಿ ಗೋಪಿಚಂದ್, ಮಿಶ್ರ ಡಬಲ್ಸ್‌ನಲ್ಲಿ ಸತೀಶ್ ಕರುಣಾಕರಣ್–ಆದ್ಯ ವಾರಿಯತ್, ಧ್ರುವ್ ಕಪಿಲಾ–ತನಿಶಾ ಕ್ರಾಸ್ಟೋ ಜೋಡಿ ಸೋತು ಹೊರಬೀಳುವ ಮೂಲಕ ನಿರಾಸೆ ಅನುಭವಿದೆ.

# ಸ್ಟಾರ್ ಕ್ರಿಕೆಟಿಗ ದಿಢೀರ್ ನಿವೃತ್ತಿ!





**ಢಾಕಾ:** 2025ರ ಐಸಿಸಿ ಚಾಂಪಿಯನ್ಸ್ ಟ್ರೋಫಿಯು ಮುಂಬರುವ ಫೆಬ್ರವರಿ 19ರಿಂದ ಆರಂಭವಾಗಲಿದೆ. ಈ ಟೂರ್ನಿಯಲ್ಲಿ ನೆರೆಯ ಬಾಂಗ್ಲಾದೇಶ ತಂಡ ಕೂಡಾ ಪಾಲ್ಗೊಳ್ಳುತ್ತಿದೆ. ಮಿನಿ ವಿಶ್ವಕಪ್ ಎಂದೇ ಕರೆಸಿಕೊಳ್ಳುವ ಐಸಿಸಿ ಚಾಂಪಿಯನ್ಸ್ ಟ್ರೋಫಿಗೂ ಮುನ್ನ ಬಾಂಗ್ಲಾದೇಶ ತಂಡದ ಪಾಲಿಗೆ ಬಲವಾದ ಪೆಟ್ಟು ಬಿದ್ದಿದ್ದು, ತಂಡದ ಸ್ಟಾರ್ ಕ್ರಿಕೆಟಿಗ ದಿಢೀರ್ ಎನ್ನುವಂತೆ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಘೋಷಿಸಿದ್ದಾರೆ.

ಬಾಂಗ್ಲಾದೇಶ ಕ್ರಿಕೆಟ್ ತಂಡದ ಮಾಜಿ ನಾಯಕ ತಮೀಮ್ ಇಕ್ಬಾಲ್, ಐಸಿಸಿ ಚಾಂಪಿಯನ್ಸ್ ಟ್ರೋಫಿ ಆರಂಭಕ್ಕೆ ಕೆಲವೇ ದಿನಗಳು ಬಾಕಿ ಇರುವಾಗಲೇ ದಿಢೀರ್ ಎನ್ನುವಂತೆ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಘೋಷಿಸಿದ್ದಾರೆ.

ತಮೀಮ್ ಇಕ್ಬಾಲ್ ಸದ್ಯ ಬಾಂಗ್ಲಾದೇಶ ಕ್ರಿಕೆಟ್ ಆಯ್ಕೆ ಸಮಿತಿಯ ಜತೆ ಮಾತುಕತೆ ನಡೆಸಿದ್ದಾರೆ. ಇದೀಗ ಚಾಂಪಿಯನ್ಸ್ ಟ್ರೋಫಿ ಟೂರ್ನಿಗೆ ಬಾಂಗ್ಲಾದೇಶ ತಂಡ ಪ್ರಕಟವಾಗುವ ಮೊದಲೇ ತಮೀಮ್ ಇಕ್ಬಾಲ್ ದಿಢೀರ್ ಎನ್ನುವಂತೆ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಘೋಷಿಸಿದ್ದಾರೆ.

ಭಾವನಾತ್ಮಕ ಪತ್ರ ಬರೆದ ತಮೀಮ್:

35 ವರ್ಷದ ತಮೀಮ್ ಇಕ್ಬಾಲ್ ತಮ್ಮ ಅಧಿಕೃತ ಫೇಸ್‌ಬುಕ್ ಪೇಜ್‌ನಲ್ಲಿ ಭಾವನಾತ್ಮಕವಾಗಿ ನಿವೃತ್ತಿ ನಿರ್ಧಾರವನ್ನು ಪ್ರಕಟಿಸಿದ್ದಾರೆ. 'ನಾನು ಸಾಕಷ್ಟು ಸಮಯದಿಂದ ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ದೂರ ಉಳಿದಿದ್ದೇನೆ. ಇಲ್ಲಿಗೆ ನನ್ನ ಅಂತಾರಾಷ್ಟ್ರೀಯ ಕ್ರಿಕೆಟ್ ಬದುಕು ಕೊನೆಗೊಂಡಿದೆ. ನಾನು ನಿವೃತ್ತಿಯ ಕುರಿತಂತೆ ಸಾಕಷ್ಟು ಸಮಯದಿಂದ ಯೋಚಿಸುತ್ತಿದ್ದೆ. ಚಾಂಪಿಯನ್ಸ್ ಟ್ರೋಫಿಗೆ ಕೆಲವೇ ದಿನಗಳು ಬಾಕಿ ಇರುವಾಗ, ನನ್ನ ಕುರಿತಂತೆ ಚರ್ಚೆಗಳಾಗಿ ತಂಡದ ಗಮನ ಹಾಳಾಗಬಾರದು ಎನ್ನುವ ಉದ್ದೇಶದಿಂದ ಮೊದಲೇ ತೀರ್ಮಾನ ತೆಗೆದುಕೊಂಡಿದ್ದೇನೆ. ಇದೇ ಕಾರಣಕ್ಕಾಗಿಯೇ ನಾನು ಈ ಮೊದಲೇ ಕೇಂದ್ರಿಯ ಗುತ್ತಿಗೆಯಿಂದಲೂ ಹೊರಗುಳಿದಿದ್ದೇನೆ' ಎಂದು ತಮೀಮ್ ಇಕ್ಬಾಲ್ ತಮ್ಮ ವಿದಾಯ ಪತ್ರವನ್ನು ಬರೆದಿದ್ದಾರೆ.

'ಕ್ಯಾಪ್ಟನ್ ನಜ್ಮುಲ್ ಹುಸೈನ್ ಅವರು ಪ್ರಾಮಾಣಿಕವಾಗಿ ನನ್ನನ್ನು ತಂಡಕ್ಕೆ ಕಮ್‌ಬ್ಯಾಕ್ ಮಾಡಿ ಎಂದು ಕೇಳಿಕೊಂಡಿದ್ದರು. ನಾನು ಆಯ್ಕೆ ಸಮಿತಿಯ ಜತೆಯೂ ಚರ್ಚೆ ನಡೆಸಿದ್ದೇನೆ. ನಾನು ಆಡಲು ಇನ್ನೂ ಸಮರ್ಥನಿದ್ದೇನೆ ಎಂದು ನನ್ನ ಮೇಲೆ ನಂಬಿಕೆಯಿಟ್ಟಿದ್ದಕ್ಕೆ ನಾನು ಅವರೆಲ್ಲರಿಗೂ ಚಿರಋಣಿ. ಆದರೆ ನಾನು ನನ್ನ ಹೃದಯದ ಮಾತನ್ನು ಕೇಳಲು ತೀರ್ಮಾನಿಸಿದ್ದೇನೆ' ಎಂದು ತಮೀಮ್ ಇಕ್ಬಾಲ್ ಹೇಳಿದ್ದಾರೆ.

ತಮೀಮ್ ಇಕ್ಬಾಲ್ ಈ ಮೊದಲು ಕೂಡಾ ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ವಿದಾಯ ಘೋಷಿಸಿದ್ದರು. ಆದರೆ ಇದಾದ ಕೆಲ ಸಮಯದ ಬಳಿಕ ತಮ್ಮ ನಿವೃತ್ತಿ ನಿರ್ಧಾರದಿಂದ ಹಿಂದೆ ಸರಿದಿದ್ದರು.

# ಹೊಸ ದಾಖಲೆ ಬರೆದ ಸ್ಮೃತಿ





**ರಾಜ್‌ಕೋಟ್:** ಭಾರತದ ತಾರಾ ಆಟಗಾರ್ತಿ ಸ್ಮೃತಿ ಮಂಧನಾ ಮಹಿಳಾ ಅಂತಾರಾಷ್ಟ್ರೀಯ ಏಕದಿನ ಕ್ರಿಕೆಟ್‌ನಲ್ಲಿ ಅತಿವೇಗವಾಗಿ 4,000 ರನ್ ಪೂರ್ಣಗೊಳಿಸಿದ ಆಟಗಾರ್ತಿ ಎನ್ನುವ ದಾಖಲೆ ಬರೆಯುವಲ್ಲಿ ಯಶಸ್ವಿಯಾಗಿದ್ದಾರೆ. ಇದರೊಂದಿಗೆ ಮಾಜಿ ನಾಯಕಿ ಮಿಥಾಲಿ ರಾಜ್ ಹೆಸರಿನಲ್ಲಿದ್ದ ದಾಖಲೆ ಅಳಿಸಿ ಹಾಕುವಲ್ಲಿ ಯಶಸ್ವಿಯಾಗಿದ್ದಾರೆ.

ಶುಕ್ರವಾರ ಐರ್ಲೆಂಡ್ ವಿರುದ್ಧ ಮೊದಲ ಏಕದಿನದಲ್ಲಿ ಸ್ಮೃತಿ ಈ ಮೈಲುಗಲ್ಲು ಸಾಧಿಸಿದರು.

ಮಾಜಿ ನಾಯಕಿ ಮಿಥಾಲಿ ರಾಜ್ 112 ಇನ್ನಿಂಗ್ಸ್‌ಗಳನ್ನಾಡಿ ನಾಲ್ಕು ಸಾವಿರ ರನ್ ಪೂರೈಸಿದ್ದರು. ಆದರೆ ಇದೀಗ ಆರ್‌ಸಿಬಿ ಕ್ಯಾಪ್ಟನ್ ಆಗಿರುವ ಸ್ಮೃತಿ ಮಂಧನಾ ಕೇವಲ 95 ಏಕದಿನ ಇನ್ನಿಂಗ್ಸ್‌ಗಳನ್ನಾಡಿ 4000 ರನ್ ಪೂರೈಸುವಲ್ಲಿ ಯಶಸ್ವಿಯಾಗಿದ್ದಾರೆ.

ಏಕದಿನದಲ್ಲಿ 4000 ಸಾವಿರ ರನ್ ಪೂರೈಸಿದ ಸಾಧನೆ ಮಾಡಿದ ಭಾರತದ 2ನೇ ಹಾಗೂ ವಿಶ್ವದ 15ನೇ ಬ್ಯಾಟರ್ ಎಂಬ ಹೆಗ್ಗಳಿಕೆಗೆ ಸ್ಮೃತಿ ಮಂಧನಾ ಪಾತ್ರರಾಗಿದ್ದಾರೆ. ಅವರು 95 ಪಂದ್ಯಗಳಲ್ಲಿ 4001 ರನ್ ಬಾರಿಸಿದ್ದಾರೆ. ಇದರಲ್ಲಿ 9 ಶತಕ, 29 ಅರ್ಧಶತಕಗಳೂ ಒಳಗೊಂಡಿವೆ. ಭಾರತದ ಮಾಜಿ ನಾಯಕಿ ಮಿಥಾಲಿ ರಾಜ್ 211 ಇನ್ನಿಂಗ್ಸ್‌ಗಳಲ್ಲಿ 7805 ರನ್ ಕಲೆಹಾಕಿದ್ದು, ಭಾರತ ಮಾತ್ರವಲ್ಲದೇ ವಿಶ್ವದಲ್ಲೇ ಮಹಿಳಾ ಏಕದಿನ ಕ್ರಿಕೆಟ್‌ನ ಗರಿಷ್ಠ ರನ್ ಸಾಧಕಿ ಎನಿಸಿಕೊಂಡಿದ್ದಾರೆ. ಅವರು 7 ಶತಕ, 64 ಅರ್ಧಶತಕ ಬಾರಿಸಿದ್ದಾರೆ.

ಹರ್ಮನ್‌ಪ್ರೀತ್ ಕೌರ್ ಭಾರತೀಯ ಬ್ಯಾಟರ್‌ಗಳ ಪೈಕಿ 3ನೇ ಗರಿಷ್ಠ ರನ್ ಸಾಧಕಿ. ಅವರು 141 ಇನ್ನಿಂಗ್ಸ್‌ಗಳಲ್ಲಿ 3803 ರನ್ ಕಲೆಹಾಕಿದ್ದಾರೆ. ಅಂಜುಮ್ ಚೋಪ್ರಾ 2856, ಪೂನಂ ರಾವತ್ 2299, ದೀಪ್ತಿ ಶರ್ಮಾ 2143 ರನ್ ಗಳಿಸಿದ್ದಾರೆ.



# ಒಂದೇ ಹಾಡಿಗೆ ಒಂದು ಚಿತ್ರ ನಿರ್ಮಿಸಬಹುದಾದಷ್ಟು ವೆಚ್ಚ!

'ಗೇಮ್ ಚೇಂಜರ್' ಚಿತ್ರದ ನಿರ್ಮಾಪಕ ದಿಲ್ ರಾಜು ತಮ್ಮ ಚಿತ್ರದ 5 ಹಾಡುಗಳ ಬಜೆಟ್ 75 ಕೋಟಿ ರೂ. ಒಂದು ಸಿನೆಮಾನೇ ಮಾಡಬಹುದು ಎಂದು ಸುದ್ದಿಯಾಗಿದೆ. ಆದರೆ ಬಾಲಿವುಡ್ ನಲ್ಲೂ ಇಂಥದ್ದೊಂದು ಸಿನಿಮಾ ತಯಾರಾಗಿತ್ತು, ಅದರಲ್ಲಿ ಒಂದೇ ಒಂದು ಹಾಡನ್ನು ಇಷ್ಟು ದೊಡ್ಡ ಮೊತ್ತದಲ್ಲಿ ಚಿತ್ರೀಕರಿಸಲಾಗಿದ್ದು, ಅದರಲ್ಲಿ ಇಡೀ ಸಿನಿಮಾ ಮಾಡ ಬಹುದು. ಇಲ್ಲಿಯವರೆಗೂ ಯಾವುದೇ ಚಿತ್ರ ಅಥವಾ ಆಲ್‌ಬಾಮ್ ಹಾಡು ಆ ಹಾಡಿನ ದಾಖಲೆಯನ್ನು ಮುರಿಯಲು ಸಾಧ್ಯವಾಗಿಲ್ಲ. ವಿಶೇಷವೆಂದರೆ ಈ ಚಿತ್ರ ಬಿಡುಗಡೆಯಾಗಿ 64 ವರ್ಷಗಳಾಗಿದೆ. ಇಂದಿಗೂ ಜನರು ಚಿತ್ರ ಮಾತ್ರವಲ್ಲದೆ ಅದರ ಹಾಡುಗಳನ್ನೂ ಕಲ್ಟ್ ಕ್ಲಾಸಿಕ್ ಎಂದು ಪರಿಗಣಿಸುತ್ತಾರೆ. ನಾವು ಮಾತನಾಡುತ್ತಿರುವ ಹಾಡು 'ಜಬ್ ಪ್ಯಾರ್ ಕಿಯಾ ತೊ ಡರ್ನಾ ಕ್ಯಾ', ಇದನ್ನು 1960 ರಲ್ಲಿ ಬಿಡುಗಡೆಯಾದ 'ಮುಘಲ್–ಎ–ಆಜಮ್' ಚಿತ್ರದಲ್ಲಿ ಚಿತ್ರೀಕರಿಸಲಾಗಿದೆ. ಚಿತ್ರವನ್ನು ಕೆ. ಆಸಿಫ್ ಮತ್ತು ಇದರಲ್ಲಿ ಪೃಥ್ವಿರಾಜ್ ಕಪೂರ್, ದಿಲೀಪ್ ಕುಮಾರ್ ಮತ್ತು ಮಧುಬಾಲಾ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ಚಿತ್ರದ ಸಂಗೀತವನ್ನು ನೌಸಾದ್ ನೀಡಿದ್ದು ಈ ಹಾಡನ್ನು ಲತಾ ಮಂಗೇಶ್ಕರ್ ಹಾಡಿದ್ದಾರೆ. 'ಜಬ್ ಪ್ಯಾರ್ ಕಿಯಾ ತೊ ಡರ್ನಾ ಕ್ಯಾ' ಹಾಡಿಗೆಂದೇ ವಿಶೇಷ ಸೆಟ್ ಹಾಕಲಾಗಿತ್ತು. ಮುಂಬೈನ ಮೋಹನ್ ಸ್ಟುಡಿಯೋದಲ್ಲಿ ಈ ಸೆಟ್ ಅನ್ನು 2 ವರ್ಷಗಳಲ್ಲಿ ಪೂರ್ಣಗೊಳಿಸಲಾಯಿತು. ಸೆಟ್ 150 ಅಡಿ ಉದ್ದ, 80 ಅಡಿ ಅಗಲ ಮತ್ತು 35 ಅಡಿ ಎತ್ತರವಿತ್ತು. ಈ ಹಾಡಿಗೆ ಸೆಟ್ ನಿರ್ಮಾಣ, ಚಿತ್ರೀಕರಣ ಸೇರಿದಂತೆ 1 ಕೋಟಿ ರೂ. ಬಂಡವಾಳ ಹಾಕಲಾಗಿತ್ತು. ಇವತ್ತಿನ ಹೊಗಳಿಕೆಯಲ್ಲಿ 'ಜಬ್ ಪ್ಯಾರ್ ಕಿಯಾ ತೋ ಡರ್ನಾ ಕ್ಯಾ' ಚಿತ್ರೀಕರಣ ಮಾಡಿದ್ದರೆ ಅದು 1 ಕೋಟಿಯಲ್ಲ 55 ಕೋಟಿಗೆ ತಯಾರಾಗುತ್ತಿತ್ತು, ಅದರಲ್ಲಿ ಒಂದು ಒಳ್ಳೆಯ ಚಿತ್ರ ಮಾಡಬಹುದಿತ್ತು. ಸಂಗೀತ ಸಂಯೋಜಕ ನೌಸಾದ್ ಅವರು 'ಜಬ್ ಪ್ಯಾರ್ ಕಿಯಾ ತೋ ಡರ್ನಾ ಕ್ಯಾ' ನಲ್ಲಿ ಪರಿಸರ ವಾತಾವರಣದ ಎಫೆಕ್ಟ್ ಬಯಸಿದ್ದರು ಎಂದು ಹೇಳಲಾಗುತ್ತದೆ. ಆದರೆ ಆ ಸಮಯದಲ್ಲಿ ಅಂತಹ ಸೌಂಡ್ ಎಫೆಕ್ಟ್ ಇರಲಿಲ್ಲ. ಆದ್ದರಿಂದ ನೌಸಾದ್ ಬಾತ್ರೂಮ್ನಲ್ಲಿ ಈ ಹಾಡನ್ನು ರೆಕಾರ್ಡ್ ಮಾಡಲು ಲತಾ ಮಂಗೇಶ್ಕರ್ ಅವರನ್ನು ಕರೆದರು. ಅದನ್ನು ನಿರ್ಮಿಸಿ ಪ್ರೇಕ್ಷಕರ ಮುಂದೆ ಬಂದಾಗ, ಅದು ಎಷ್ಟು ಇಷ್ಟವಾಯಿತು ಎಂದರೆ ಇಂದಿಗೂ ಜನರು ಅದರ ಬಗ್ಗೆ ಹುಚ್ಚರಾಗಿದ್ದಾರೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. **RNI.KAR/KAN/2009/31934,** ದೂರವಾಣಿ: **9448074878**

Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123

**RNI.KAR/KAN/2009/31934.**VOLUME-16/ISSUE-**48** Email-mussanje2010@gmail.com, Phone: **9448074878**